# 2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 9

# ಕರ್ನಾಟಕ ಪಶುವೈದ್ಯಕೀಯ, ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮ, 2004

## ಪ್ರಕರಣಗಳ ಪಟ್ಟಿ

ಪ್ರಕರಣಗಳು


ಅಧ್ಯಾಯ - I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

ಅಧ್ಯಾಯ - II

ವಿಶ್ವವಿದ್ಯಾನಿಲಯ

3. ವಿಶ್ವವಿದ್ಯಾನಿಲಯದ ಸ್ಥಾಪನೆ ಮತ್ತು ನಿಗಮನ
4. ವಿಶ್ವವಿದ್ಯಾನಿಲಯದಿಂದ ಹೊಸ ಕಾಲೇಜಿನ ಸ್ಥಾಪನೆ ಮತ್ತು ಸಂಸ್ಥೆಗೆ ಮನ್ನಣೆ
5. ವಿಶ್ವವಿದ್ಯಾನಿಲಯದ ಧ್ಯೇಯೋದ್ದೇಶಗಳು
6. ವಿಶ್ವವಿದ್ಯಾನಿಲಯದ ಅಧಿಕಾರ ಮತ್ತು ಪ್ರಕಾರ್ಯಗಳು
7. ವಿಶ್ವವಿದ್ಯಾನಿಲಯಕ್ಕೆ ಪ್ರವೇಶ
8. ವಿಶ್ವವಿದ್ಯಾನಿಲಯಕ್ಕೆ ಕೆಲವು ಕಾಲೇಜುಗಳ, ಸಂಸ್ಥೆಗಳ ಮತ್ತು ನೌಕರರ ವರ್ಗಾವಣೆ
9. ತಪಾಸಣೆ ಮತ್ತು ನಿಯಂತ್ರಣ

ಅಧ್ಯಾಯ - III

ವಿಶ್ವವಿದ್ಯಾನಿಲಯದ ಅಧಿಕಾರಿಗಳು

10. ವಿಶ್ವವಿದ್ಯಾನಿಲಯದ ಅಧಿಕಾರಿಗಳು
11. ಕುಲಾಧಿಪತಿ
12. ಸಹ ಕುಲಾಧಿಪತಿ
13. ಕುಲಪತಿ
14. ಕುಲಪತಿಯ ಅಧಿಕಾರಗಳು
15. ಕುಲಪತಿಯ ಹುದ್ದೆಯು ಖಾಲಿ ಇರುವ ಸಮಯದಲ್ಲಿ ಕಾರ್ಯ ವ್ಯವಸ್ಥೆ
16. ಲೆಕ್ಕನಿಯಂತ್ರಕ
17. ರಿಜಿಸ್ಟ್ರಾರ್
18. ಗ್ರಂಥಪಾಲ
19. ಶಿಕ್ಷಣ ನಿರ್ದೇಶಕ (ಸ್ನಾತಕೋತ್ತರ ಅಧ್ಯಯನಗಳು)
20. ಸಂಶೋಧನಾ ನಿರ್ದೇಶಕ
21. ವಿಸ್ತರಣಾ ಶಿಕ್ಷಣ ನಿರ್ದೇಶಕರು
22. ಡೀನ್
23. ವಿಭಾಗಗಳ ಮುಖ್ಯಸ್ಥರು
24. ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಪರಿನಿಯಮಗಳ ಮೂಲಕ ಉಪಬಂಧಿಸಲಾದುದನ್ನು ಹೊರತುಪಡಿಸಿ ಇತರೆ ಯಾವುದೇ ಪರಿಶ್ರಮ ಧನವನ್ನು ಸ್ವೀಕರಿಸತಕ್ಕದ್ದಲ್ಲ
25. ಇತರ ಅಧಿಕಾರಿಗಳು

ಅಧ್ಯಾಯ - VI

ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು

26. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು
27. ವ್ಯವಸ್ಥಾಪನಾ ಮಂಡಳಿಯ ರಚನೆ
28. ಮಂಡಲಿಯ ಅಧಿಕಾರಗಳು ಹಾಗೂ ಕರ್ತವ್ಯಗಳು
29. ವಿದ್ಯಾವಿಷಯಕ ಪರಿಷತ್ತು
30. ವಿದ್ಯಾವಿಷಯಕ ಪರಿಷತ್ತಿನ ಅಧಿಕಾರಗಳು ಮತ್ತು ಪ್ರಕಾರ್ಯಗಳು
31. ಸಂಶೋಧನಾ ಪರಿಷತ್ತು
32. ಸಂಶೋಧನಾ ಪರಿಷತ್ತಿನ ಪ್ರಕಾರ್ಯಗಳು
33. ವಿಸ್ತರಣಾ ಶಿಕ್ಷಣ ಪರಿಷತ್ತು
34. ವಿಸ್ತರಣಾ ಶಿಕ್ಷಣ ಪರಿಷತ್ತಿನ ಪ್ರಕಾರ್ಯಗಳು
35. ಹಣಕಾಸು ಸಮಿತಿ
36. ಅಧ್ಯಯನ ಮಂಡಲಿಗಳು

## ಅಧ್ಯಾಯ - V

### ವಿಶ್ವವಿದ್ಯಾನಿಲಯದ ನಿಧಿಗಳು

37. ವಿಶ್ವವಿದ್ಯಾನಿಲಯದ ನಿಧಿಗಳು
38. ನಿವೃತ್ತಿ ವೇತನ ಮತ್ತು ಭವಿಷ್ಯನಿಧಿ
39. ಇತರ ನಿಧಿಗಳು
40. ಸರ್ಕಾರದ ಅನುದಾನಗಳು
41. ಲೆಕ್ಕಪರಿಶೋಧನೆಗೆ ಆದೇಶಿಸಲು ರಾಜ್ಯ ಸರ್ಕಾರದ ಅಧಿಕಾರ
42. ಹಣಕಾಸಿನ ಅಂದಾಜುಗಳು
43. ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧನೆ

## ಅಧ್ಯಾಯ - VI

### ಕಾಲೇಜುಗಳ ಸಂಯೋಜನೆ ಮತ್ತು ಸಂಸ್ಥೆಗಳಿಗೆ ಮನ್ನಣೆ

44. ಕಾಲೇಜುಗಳ ಸಂಯೋಜನೆ
45. ಹೊಸ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಪ್ರವೇಶಕ್ಕೆ ನಿರ್ಬಂಧ
46. ಪರೀಕ್ಷೆಗಳಿಗೆ ಹಾಜರಾಗಲು ನಿರ್ಬಂಧ
47. ಖಾಯಂ ಸಂಯೋಜನೆ
48. ಸಂಯೋಜನೆಯನ್ನು ಹಿಂತೆಗೆದುಕೊಳ್ಳುವುದು
49. ಕಾಲೇಜು ಅಥವಾ ವ್ಯಾಸಂಗ ಕ್ರಮವನ್ನು ಸ್ವಯಂ ಮುಚ್ಚುವಿಕೆ
50. ಕೆಲವು ಸಂಸ್ಥೆಗಳಿಗೆ ಮನ್ನಣೆ
51. ಕಾಲೇಜುಗಳ ಪರಿವೀಕ್ಷಣೆ

## ಅಧ್ಯಾಯ - VII

### ಪರಿನಿಯಮಗಳು ಮತ್ತು ವಿನಿಯಮಗಳು

52. ಪರಿನಿಯಮಗಳು
53. ಪರಿನಿಯಮಗಳನ್ನು ಮಾಡುವ ಬಗ್ಗೆ
54. ವಿನಿಯಮಗಳು

## ಅಧ್ಯಾಯ - VIII

### ಸಂಕೀರ್ಣ

55. ಪದವನ್ನು ತೆರವು ಮಾಡುವುದು
56. ಆಕಸ್ಮಿಕ ಖಾಲಿ ಸ್ಥಾನಗಳನ್ನು ಭರ್ತಿ ಮಾಡುವುದು

57. ಕಾರ್ಯಗಳ ಹಾಗೂ ವ್ಯವಹರಣೆಗಳ ಸಿಂಧುತ್ವದ ಉಳಿಸುವಿಕೆಗಳು
58. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ರಚನೆ ಕುರಿತು ವಿವಾದಗಳು
59. ಅಧಿಕಾರಗಳ ಪ್ರತ್ಯಾಯೋಜನೆ
60. ವಿಶ್ವವಿದ್ಯಾನಿಲಯದ ಪುನರವಲೋಕನಾ ಆಯೋಗದ ನೇಮಕ
61. ವಿಶ್ವವಿದ್ಯಾನಿಲಯದ ಕೆಲವು ಅಧಿಕಾರಿಗಳ ತಾತ್ಕಾಲಿಕ ನೇಮಕಾತಿಗೆ ಉಪಬಂಧ
62. ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ತಾತ್ಕಾಲಿಕ ಉಪಬಂಧಗಳು
63. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
64. ಪರಿನಿಯಮಗಳ ಮತ್ತು ವಿನಿಯಮಗಳ ಮುಂದುವರಿಕೆ
65. ತೊಂದರೆಗಳ ನಿವಾರಣೆಗೆ ಅಧಿಕಾರ
ಅನುಸೂಚಿ-1

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳು ಮತ್ತು ಇತರ ಸಂಬಂಧಪಟ್ಟ ವಿಜ್ಞಾನಗಳ ವಿವಿಧ ಶಾಖೆಗಳಲ್ಲಿ ಶಿಕ್ಷಣ ನೀಡುವುದನ್ನು ಉತ್ತೇಜಿಸುವಂಥ ಮತ್ತು ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನ ಮತ್ತು ಇತರ ಸಂಬಂಧಪಟ್ಟ ವಿಜ್ಞಾನಗಳಲ್ಲಿ ಕಲಿಕೆಯ ಮುನ್ನಡೆ ಹಾಗೂ ಸಂಶೋಧನೆ ನಡೆಸುವುದನ್ನು ಸಾಧಿಸುವುದೇ ಅಲ್ಲದೆ, ಅವಶ್ಯಕತೆ ಇರುವಂಥ ಜನರಿಗೆ ಇಂಥ ವಿಶೇಷ ಜ್ಞಾನವನ್ನು ವಿಸ್ತರಿಸುವಂಥ ಒಂದು ಪಶು ವೈದ್ಯಕೀಯ ವಿಶ್ವವಿದ್ಯಾನಿಲಯವನ್ನು ಕರ್ನಾಟಕ ರಾಜ್ಯಕ್ಕಾಗಿ ಬೀದರ್‌ನಲ್ಲಿ ಸ್ಥಾಪಿಸಲು 2003-04ರ ಆಯವ್ಯಯ ಭಾಷಣದಲ್ಲಿ ಪ್ರಸ್ತಾವಿಸಲಾಗಿತ್ತು.

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಧೇಯಕ, 2004 ಇತರ ವಿಷಯಗಳೊಂದಿಗೆ ಈ ಮುಂದಿನವುಗಳ ಬಗ್ಗೆ ಉಪಬಂಧಕಲ್ಪಿಸುತ್ತದೆ.

(i) ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ತರಬೇತಿ ಮತ್ತು ಸಂಶೋಧನೆ ನಡೆಸುವುದಕ್ಕಾಗಿ ಒಂದು ವಿಶ್ವ ವಿದ್ಯಾನಿಲಯದ ಸ್ಥಾಪನೆ ಮತ್ತು ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ, ಪದವಿಗಳು, ಡಿಪ್ಲೋಮಾಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(ii) ಕೆಲವು ಕಾಲೇಜುಗಳನ್ನು, ಸಂಶೋಧನಾ ಸಂಸ್ಥೆಗಳನ್ನು ಪಶುವೈದ್ಯಕೀಯ ಆಸ್ಪತ್ರೆಗಳನ್ನು ಮತ್ತು ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಇತರ ಸಂಸ್ಥೆಗಳನ್ನು ಮತ್ತು ಅವುಗಳ ನೌಕರರನ್ನು ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಮಾಡುವುದು;

(iii) ವಿಶ್ವವಿದ್ಯಾನಿಲಯದ ಕುಲಪತಿಯವರು ಹಾಗೂ ಇತರ ಅಧಿಕಾರಿಗಳ ನೇಮಕಾತಿ;

(iv) ವ್ಯವಸ್ಥಾಪನಾ ಮಂಡಲಿಯ, ವಿದ್ಯಾವಿಷಯಕ ಪರಿಷತ್ತಿನ, ಸಂಶೋಧನಾ ಪರಿಷತ್ತಿನ, ಹಣಕಾಸು ಸಮಿತಿಯ, ಅಧ್ಯಯನ ಮಂಡಲಿಗಳ ಮತ್ತು ವಿಶ್ವವಿದ್ಯಾನಿಲಯದ ಇತರ ನಿಕಾಯಗಳ ರಚನೆ ಮತ್ತು ಅವುಗಳ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(v) ವಿಶ್ವವಿದ್ಯಾನಿಲಯದ ಅಧಿಕಾರ ವ್ಯಾಪ್ತಿಯೊಳಗೆ ಇರುವ ಕಾಲೇಜುಗಳ ಸಂಯೋಜನೆ ಮಾಡುವುದು ಮತ್ತು ಸಂಸ್ಥೆಗಳಿಗೆ ಮಾನ್ಯತೆ ನೀಡುವುದು;

(vi) ವಿಶ್ವವಿದ್ಯಾನಿಲಯದ ಪುನರವಲೋಕನಾ ಸಮಿತಿಯ ನೇಮಕ;

- ಇತರ ಕೆಲವು ಪ್ರಾಸಂಗಿಕ ಹಾಗೂ ಆನುಷಂಗಿಕವಾದ ಉಪಬಂಧಗಳನ್ನು ಸಹ ಮಾಡಲಾಗಿದೆ.

ಆದ್ದರಿಂದ ಈ ವಿಧೇಯಕ.

[ 2004ರ ವಿಧಾನಸಭೆಯ ವಿಧೇಯಕ ಸಂಖ್ಯೆ 13 ]

(ಭಾರತ ಸಂವಿಧಾನದ ಏಳನೇ ಅನುಸೂಚಿಯ 2ನೇ ಪಟ್ಟಿಯ 15 ಮತ್ತು 21ನೇ ನಮೂದು ಹಾಗೂ ಮೂರನೇ ಪಟ್ಟಿಯ 25ನೇ ನಮೂದು)

**2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 9**

(2004 ರ ಫೆಬ್ರವರಿ 23 ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಪಶುವೈದ್ಯಕೀಯ, ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮ, 2004**

(2004 ರ ಫೆಬ್ರವರಿ 21 ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯದಲ್ಲಿ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ಒಂದು ವಿಶ್ವವಿದ್ಯಾನಿಲಯದ ಸ್ಥಾಪನೆಗಾಗಿ ಮತ್ತು ಅದಕ್ಕೆ ಸಂಬಂಧಪಟ್ಟ ವಿಷಯಗಳಿಗಾಗಿ ಉಪಬಂಧಕಲ್ಪಿಸಲು ಒಂದು ಅಧಿನಿಯಮ.

ಕರ್ನಾಟಕ ರಾಜ್ಯದಲ್ಲಿ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಿಗಾಗಿ ಒಂದು ಪ್ರತ್ಯೇಕ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವುದಕ್ಕಾಗಿ ಮತ್ತು ಅದಕ್ಕೆ ಸಂಬಂಧಪಟ್ಟ ವಿಷಯಗಳಿಗಾಗಿ ಉಪಬಂಧಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

## ಅಧ್ಯಾಯ - I

## ಪ್ರಾರಂಭಿಕ

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:-** (1) ಈ ಅಧಿನಿಯಮವನ್ನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮ, 2004 ಎಂದು ಕರೆಯತಕ್ಕದ್ದು.

(2) ಇದು, ರಾಜ್ಯ ಸರ್ಕಾರವು ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ವಿದ್ಯಾವಿಷಯಕ ಪರಿಷತ್ತು (ಅಕಾಡೆಮಿಕ್ ಕೌನ್ಸಿಲ್)" ಎಂದರೆ, 29ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ವಿದ್ಯಾವಿಷಯಕ ಪರಿಷತ್ತು;

(ಬಿ) "ಸಂಯೋಜಿತ ಕಾಲೇಜು" ಎಂದರೆ, ವಿಶ್ವವಿದ್ಯಾನಿಲಯದ ಪ್ರದೇಶದಲ್ಲಿ ಇರುವ ಮತ್ತು ನಿಯಮಿಸಲಾದ ಪರಿನಿಯಮಗಳಿಗೆ ಅನುಸಾರವಾಗಿ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತವಾದ ಮತ್ತು ವಿಶ್ವವಿದ್ಯಾನಿಲಯದ ಪದವಿಗಳು, ಡಿಪ್ಲೋಮಾಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ಪರೀಕ್ಷೆಗೆ ಪ್ರವೇಶದ ಸಲುವಾಗಿ ವಿದ್ಯಾ ವ್ಯಾಸಂಗ ಕ್ರಮಗಳನ್ನು ಒದಗಿಸುವ ಕಾಲೇಜು ಅಥವಾ ಸಂಸ್ಥೆ;

(ಸಿ) "ಪಶು" ಎಂಬುದು ಜಾನುವಾರುಗಳು ಮತ್ತು ಎಲ್ಲಾ ಸಾಕು ಪ್ರಾಣಿಗಳು ಮತ್ತು ವನ್ಯಮೃಗಗಳು, ಮೀನುಗಳು, ಪಕ್ಷಿಗಳು, ಸರಿಸೃಪಗಳನ್ನು ಹಾಗೂ ಮಾನವರನ್ನು ಬಿಟ್ಟು ಇತರ ಎಲ್ಲಾ ಬಗೆಯ ಪ್ರಾಣಿ ವರ್ಗಗಳನ್ನು ಒಳಗೊಳ್ಳುತ್ತದೆ;

(ಡಿ) "ಮಂಡಲಿ" ಎಂದರೆ, ವಿಶ್ವವಿದ್ಯಾನಿಲಯದ ವ್ಯವಸ್ಥಾಪನಾ ಮಂಡಲಿ;

(ಇ) "ಕಾಲೇಜು" ಎಂದರೆ, ವಿಶ್ವವಿದ್ಯಾನಿಲಯವು ಸ್ಥಾಪಿಸಿದ ಅಥವಾ ನಿರ್ವಹಿಸುತ್ತಿರುವ ಅಥವಾ ಅದಕ್ಕೆ ಸಂಯೋಜಿತವಾದ ಮತ್ತು ವಿದ್ಯಾ ವ್ಯಾಸಂಗ ಕ್ರಮಗಳನ್ನು ಹಾಗೂ ತರಬೇತಿಯನ್ನು ಒದಗಿಸುತ್ತಿರುವ ಅಥವಾ ಸಂಶೋಧನೆಯನ್ನು ನಡೆಸುವುದಕ್ಕಾಗಿ ಅವಕಾಶಕಲ್ಪಿಸುವ ಅಥವಾ ಪಶುವೈದ್ಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ವಿಸ್ತರಣಾ ಶಿಕ್ಷಣವನ್ನು ಒದಗಿಸುವ ಯಾವುದೇ ಕಾಲೇಜು ಅಥವಾ ಸಂಸ್ಥೆ;

(ಎಫ್) "ಘಟಕ ಕಾಲೇಜು" ಎಂದರೆ, ಪಶುವೈದ್ಯ ಕಾಲೇಜು ಬೆಂಗಳೂರು; ಪಶುವೈದ್ಯ ಕಾಲೇಜು, ಬೀದರ್; ಹೈನುಗಾರಿಕೆ ವಿಜ್ಞಾನ ಕಾಲೇಜು, ಬೆಂಗಳೂರು; ಮೀನುಗಾರಿಕೆ ವಿಜ್ಞಾನ ಕಾಲೇಜು, ಮಂಗಳೂರು ಮತ್ತು ವಿಶ್ವವಿದ್ಯಾನಿಲಯದ ನೇರ ವ್ಯವಸ್ಥಾಪನೆಯೊಳಗೆ ಬರುವ ಯಾವುದೇ ಇತರ ಸಂಸ್ಥೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸುವಂಥ ಇತರ ಕಾಲೇಜು;

(ಜಿ) "ಡೀನ್" ಎಂದರೆ, ವಿಶ್ವವಿದ್ಯಾನಿಲಯದ ಘಟಕ ಕಾಲೇಜಿನ ಮುಖ್ಯಸ್ಥ;

(ಎಚ್) "ವಿಸ್ತರಣಾ ಶಿಕ್ಷಣ" ಎಂದರೆ, ಜಾನುವಾರು ಸಾಕಣೆದಾರರು, ಗೃಹಿಣಿಯರು ಮತ್ತು ಪ್ರಾಣಿಗಳ ಆರೋಗ್ಯ ಕ್ಷೇಮಾಭಿವೃದ್ಧಿ ಅಥವಾ ಸುಧಾರಿತ ಪಶುಸಂಗೋಪನೆ ಪದ್ಧತಿಗಳಿಗೆ ಸಂಬಂಧಪಟ್ಟ ಇತರ ಸಮೂಹಗಳಿಗೆ ತರಬೇತಿ ನೀಡುವುದಕ್ಕೆ ಸಂಬಂಧಿಸಿದ ಮತ್ತು ಪಶು ಉತ್ಪಾದನೆ ಹಾಗೂ ಮಾರುಕಟ್ಟೆ ವ್ಯವಸ್ಥೆಗೆ ಸಂಬಂಧಿಸಿದ ವೈಜ್ಞಾನಿಕ ತಂತ್ರಜ್ಞಾನದ ವಿವಿಧ ಹಂತಗಳನ್ನು ಕುರಿತ ಶೈಕ್ಷಣಿಕ ಚಟುವಟಿಕೆಗಳು ಮತ್ತು ಇದರಲ್ಲಿ ಹೊಸ ತಂತ್ರಜ್ಞಾನ ಹಾಗೂ ನವೀನ ಸಂಶೋಧನೆಗಳನ್ನು, ಜಾನುವಾರು ಫಾರಂಗಳು ಮತ್ತು ಹೊಲ ಮನೆಗಳ ಬಳಿಗೆ ಪಶುಸಂಗೋಪನೆ, ಮೀನುಗಾರಿಕೆ ಇಲಾಖೆಗಳು ಹಾಗೂ ಅದೇ ತರಹದ ಇಲಾಖೆಗಳ ಮೂಲಕ ಕೊಂಡೊಯ್ಯಲು ಪ್ರಾತ್ಯಕ್ಷಿಕೆ ನಡೆಸುವುದೂ ಸೇರುತ್ತದೆ;

(ಐ) "ಫ್ಯಾಕಲ್ಟಿ" ಎಂದರೆ, ವಿಶ್ವವಿದ್ಯಾನಿಲಯದ ಒಂದು ಫ್ಯಾಕಲ್ಟಿ;

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 262 ದಿನಾಂಕ: 23.2.2004 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 9 ಶಾಸನ 2004

(ಜೆ) “ಮೀನುಗಾರಿಕೆ” ಎಂದರೆ, ಜಲಚರಜೀವಿಗಳ ಹಾಗೂ ಅವುಗಳ ಸುತ್ತಮುತ್ತಲ ಪರಿಸರ ಘಟಕಗಳೂ ಒಳಗೊಂಡಂತೆ ಅವುಗಳ ಪರಿಸರದ ಜೀವವಿಜ್ಞಾನ, ಅವುಗಳ ವಾಣಿಜ್ಯ ಲಾಭ ಪಡೆದುಕೊಳ್ಳುವಿಕೆ ಮತ್ತು ಸಂರಕ್ಷಣೆಯನ್ನು ತಿಳಿದುಕೊಳ್ಳುವ ಕಲೆ ಹಾಗೂ ವಿಜ್ಞಾನ;

(ಕೆ) “ವಿದ್ಯಾರ್ಥಿನಿಲಯ” ಎಂದರೆ, ಈ ಅಧಿನಿಯಮದ ಉಪಬಂಧಗಳಿಗನುಸಾರವಾಗಿ ವಿಶ್ವವಿದ್ಯಾನಿಲಯವು ನಿರ್ವಹಿಸುತ್ತಿರುವ ಅಥವಾ ಅದರಿಂದ ಮನ್ನಣೆ ಪಡೆದ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗಾಗಿ ಇರುವ ಒಂದು ನಿವಾಸ ಘಟಕ;

(ಎಲ್) “ನಿಯಮಿಸಲಾದುದು” ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ಪರಿನಿಯಮಗಳು ಅಥವಾ ವಿನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) “ವಿನಿಯಮಗಳು ಮತ್ತು ಪರಿನಿಯಮಗಳು” ಎಂದರೆ, ಈ ಅಧಿನಿಯಮದ ಅಡಿಯಲ್ಲಿ ಅನುಕ್ರಮವಾಗಿ ರಚಿಸಲಾದ ವಿನಿಯಮಗಳು ಮತ್ತು ಪರಿನಿಯಮಗಳು;

(ಎನ್) “ಅನುಸೂಚಿ” ಎಂದರೆ, ಈ ಅಧಿನಿಯಮಕ್ಕೆ ಅನುಬಂಧಿಸಲಾದ ಅನುಸೂಚಿ;

(ಓ) “ನಿರ್ದಿಷ್ಟ ದಿನಾಂಕ” ಎಂದರೆ, ಈ ಅಧಿನಿಯಮದ ಯಾವುದೇ ಉಪಬಂಧದ ಉದ್ದೇಶಕ್ಕಾಗಿ ನಿರ್ದಿಷ್ಟಪಡಿಸಿದ ಒಂದು ದಿನಾಂಕ;

(ಪಿ) “ವಿಶ್ವವಿದ್ಯಾನಿಲಯ” ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ;

(ಕ್ಯೂ) “ವಿಶ್ವವಿದ್ಯಾನಿಲಯ ಪ್ರದೇಶ” ಎಂದರೆ, ವಿಶ್ವವಿದ್ಯಾನಿಲಯದ ಅಧಿಕಾರ ವ್ಯಾಪ್ತಿಯಡಿಯಲ್ಲಿನ ಪ್ರದೇಶ;

(ಆರ್) “ಪಶುವೈದ್ಯಕೀಯ” ಎಂದರೆ, ಪಶು ಶಸ್ತ್ರಚಿಕಿತ್ಸೆ ಮತ್ತು ಪಶುವೈದ್ಯ ಚಿಕಿತ್ಸೆಯ ಕಲೆ ಮತ್ತು ವಿಜ್ಞಾನ ಮತ್ತು ಇದರಲ್ಲಿ,-

(I) ಪ್ರಾಣಿಗಳಿಗೆ ಬಂದ ರೋಗಗಳನ್ನು ಮತ್ತು ಆದ ಗಾಯಗಳನ್ನು ಪತ್ತೆಹಚ್ಚುವುದು;

(II) ಅಂಥ ರೋಗ ಪತ್ತೆ ಕಾರ್ಯದ ಆಧಾರದ ಮೇಲೆ ವೈದ್ಯಕೀಯ ಸಲಹೆ ನೀಡುವುದು;

(III) ಪ್ರಾಣಿಗಳ ವೈದ್ಯಕೀಯ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ ಮತ್ತು

(IV) ಜಾನುವಾರು ರೋಗಗಳನ್ನು ತಡೆಗಟ್ಟುವುದಕ್ಕಾಗಿ ಮತ್ತು ನಿಯಂತ್ರಿಸುವುದಕ್ಕಾಗಿ ತೆಗೆದುಕೊಂಡ ಕ್ರಮಗಳು

\- ಸೇರುತ್ತವೆ.

## ಅಧ್ಯಾಯ - II

## ವಿಶ್ವವಿದ್ಯಾನಿಲಯ

3. **ವಿಶ್ವವಿದ್ಯಾನಿಲಯದ ಸ್ಥಾಪನೆ ಮತ್ತು ನಿಗಮನ.-** (1) ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳಲ್ಲಿ ಕಲಿಕೆ ಮತ್ತು ಸಂಶೋಧನೆಯ ಅಭಿವೃದ್ಧಿ ಹಾಗೂ ಪ್ರಗತಿಗಾಗಿ, ರಾಜ್ಯದಲ್ಲಿ, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಎಂಬ ಹೆಸರಿನ ಒಂದು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸತಕ್ಕದ್ದು.

(2) ವಿಶ್ವವಿದ್ಯಾನಿಲಯವು ಒಂದು ನಿಗಮಿತ ನಿಕಾಯವಾಗಿರತಕ್ಕದ್ದು, ಶಾಶ್ವತ ಉತ್ತರಾಧಿಕಾರವನ್ನು ಮತ್ತು ಸಾಮಾನ್ಯ ಮೊಹರನ್ನು ಹೊಂದಿರತಕ್ಕದ್ದು ಮತ್ತು ಅದೇ ಹೆಸರಿನಿಂದ ಅದು ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(3) ವಿಶ್ವವಿದ್ಯಾನಿಲಯದ ಕೇಂದ್ರ ಕಾರ್ಯಸ್ಥಾನವು ಬೀದರ್ ಜಿಲ್ಲೆಯಲ್ಲಿರತಕ್ಕದ್ದು. ವಿಶ್ವವಿದ್ಯಾನಿಲಯವು ಇಡೀ ಕರ್ನಾಟಕ ರಾಜ್ಯದಲ್ಲಿ ಅಧಿಕಾರ ವ್ಯಾಪ್ತಿಯನ್ನು ಹೊಂದಿರತಕ್ಕದ್ದು. ಅದು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಡನೆ ತಾನು ಸೂಕ್ತ ಮತ್ತು ಉಚಿತವೆಂದು ಭಾವಿಸಬಹುದಾದಂಥ ಸ್ಥಳಗಳಲ್ಲಿ ಹೆಚ್ಚುವರಿ ಕ್ಯಾಂಪಸ್‌ಗಳನ್ನು ಸ್ಥಾಪಿಸಬಹುದು.

(4) ವಿಶ್ವವಿದ್ಯಾನಿಲಯವು ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನೂ ಆರ್ಜಿಸಲು ಮತ್ತು ಧಾರಣ ಮಾಡಲು, ವಿಶ್ವವಿದ್ಯಾನಿಲಯದ ಉದ್ದೇಶಕ್ಕಾಗಿ ಅದರಲ್ಲಿ ನಿಹಿತವಾಗಿರಬಹುದಾದ ಅಥವಾ ಅದು ಆರ್ಜಿಸಿರಬಹುದಾದ ಯಾವುದೇ ಚರ ಮತ್ತು ಸ್ಥಿರ ಸ್ವತ್ತನ್ನು ಗುತ್ತಿಗೆಗೆ ಕೊಡಲು, ಮಾರಾಟ ಮಾಡಲು ಅಥವಾ ಅನ್ಯಥಾ ವರ್ಗಾವಣೆ ಮಾಡಲು ಮತ್ತು ಈ ಅಧಿನಿಯಮದ ಉದ್ದೇಶಗಳಿಗಾಗಿ ಕರಾರು ಮಾಡಿಕೊಳ್ಳಲು ಮತ್ತು ಅವಶ್ಯಕವಾದ ಇತರ ಎಲ್ಲಾ ಕಾರ್ಯಗಳನ್ನು ಮಾಡಲು ಸಕ್ಷಮವಾಗಿರತಕ್ಕದ್ದು.

(5) ವಿಶ್ವವಿದ್ಯಾನಿಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ರಿಜಿಸ್ಟ್ರಾರನು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ರಿಜಿಸ್ಟ್ರಾರನಿಗೆ ನೀಡತಕ್ಕದ್ದು ಮತ್ತು ಆತನಿಗೆ ಜಾರಿ ಮಾಡತಕ್ಕದ್ದು.

(6) ವಿಶ್ವವಿದ್ಯಾನಿಲಯವು, ತನ್ನಲ್ಲಿ ನಿಹಿತವಾಗಿದ್ದಿರಬಹುದಾದ ಅಥವಾ ತಾನು ಆರ್ಜಿಸಿರಬಹುದಾದ ಯಾವುದೇ ಸ್ಥಿರ ಸ್ವತ್ತನ್ನು ಸರ್ಕಾರದ ಪೂರ್ವಾನುಮೋದನೆಯನ್ನು ಪಡೆದುಕೊಳ್ಳದೆ, ಗುತ್ತಿಗೆ ನೀಡತಕ್ಕದ್ದಲ್ಲ, ಮಾರಾಟ ಅಥವಾ ಅನ್ಯಥಾ ವರ್ಗಾವಣೆ ಮಾಡತಕ್ಕದ್ದಲ್ಲ.

**4. ವಿಶ್ವವಿದ್ಯಾನಿಲಯದಿಂದ ಹೊಸ ಕಾಲೇಜಿನ ಸ್ಥಾಪನೆ ಮತ್ತು ಸಂಸ್ಥೆಗೆ ಮನ್ನಣೆ.-** (1) ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದ ದಿನಾಂಕದಂದು ಮತ್ತು ದಿನಾಂಕದಿಂದ ವಿಶ್ವವಿದ್ಯಾನಿಲಯದ ಘಟಕ ಅಥವಾ ಸಂಯೋಜಿತ ಕಾಲೇಜು ಎಂಬುದಾಗಿ ಅಲ್ಲದೆ, ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ಶಿಕ್ಷಣ ನೀಡುವ ಯಾವುದೇ ಹೊಸ ಕಾಲೇಜನ್ನು, ಸ್ಥಾಪಿಸತಕ್ಕದ್ದಲ್ಲ.

(2) ಕರ್ನಾಟಕ ರಾಜ್ಯದೊಳಗೆ ಅಥವಾ ಹೊರಗೆ ಇರುವ ಯಾವುದೇ ಇತರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತವಾದ ಅಥವಾ ಅದಕ್ಕೆ ಸಂಬಂಧಿತವಾದ ಅಥವಾ ಅದು ನಿರ್ವಹಿಸಿಕೊಂಡುಬಂದ ಯಾವುದೇ ಸಂಸ್ಥೆಗೆ ರಾಜ್ಯ ಸರ್ಕಾರದ ಮತ್ತು ಸಂಬಂಧಪಟ್ಟ ವಿಶ್ವವಿದ್ಯಾನಿಲಯದ ಪೂರ್ವಾನುಮೋದನೆ ಪಡೆದ ಹೊರತು ಯಾವುದೇ ಉದ್ದೇಶಕ್ಕಾಗಿ ವಿಶ್ವವಿದ್ಯಾನಿಲಯವು ಮನ್ನಣೆ ನೀಡತಕ್ಕದ್ದಲ್ಲ.

**5. ವಿಶ್ವವಿದ್ಯಾನಿಲಯದ ಧ್ಯೇಯೋದ್ದೇಶಗಳು.-** ವಿಶ್ವವಿದ್ಯಾನಿಲಯವು ಈ ಮುಂದಿನ ಧ್ಯೇಯೋದ್ದೇಶಗಳನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ವಿಶ್ವವಿದ್ಯಾನಿಲಯವು ನಿರ್ಧರಿಸಬಹುದಾದಂತೆ, ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿವಿಧ ಶಾಖೆಗಳಲ್ಲಿ ಶಿಕ್ಷಣ ನೀಡುವುದಕ್ಕಾಗಿ ಏರ್ಪಾಡು ಮಾಡುವುದು;

(ಬಿ) ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ಮತ್ತು ಇತರ ತತ್ಸಂಬಂಧ, ವಿಜ್ಞಾನಗಳಲ್ಲಿ ಕಲಿಕೆಯ ಮತ್ತು ಸಂಶೋಧನೆಯ ಪ್ರಗತಿ ಸಾಧನೆಗೆ ಅನುಕೂಲ ಕಲ್ಪಿಸುವುದು;

(ಸಿ) ಅಗತ್ಯವಿರುವ ಜನರಿಗೆ ಪರಿಣತ ಜ್ಞಾನದ ಪ್ರಸಾರ ಕೈಗೊಳ್ಳುವುದು; ಮತ್ತು

(ಡಿ) ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ವಿಷಯಗಳು.

**6. ವಿಶ್ವವಿದ್ಯಾನಿಲಯದ ಅಧಿಕಾರ ಮತ್ತು ಪ್ರಕಾರ್ಯಗಳು.-** ವಿಶ್ವವಿದ್ಯಾನಿಲಯವು ಈ ಮುಂದಿನ ಅಧಿಕಾರಗಳನ್ನು ಮತ್ತು ಪ್ರಕಾರ್ಯಗಳನ್ನು ಹೊಂದಿರತಕ್ಕದ್ದು ಎಂದರೆ:-

(ಎ) ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ಶಿಕ್ಷಣ, ತರಬೇತಿ ಮತ್ತು ಸಂಶೋಧನೆಗಾಗಿ ಅವಕಾಶ ಕಲ್ಪಿಸುವುದು;

(ಬಿ) ಸಂಶೋಧನೆಯ ಫಲಿತಾಂಶಗಳನ್ನು ಮತ್ತು ತಾಂತ್ರಿಕ ಮಾಹಿತಿಯನ್ನು ವಿಸ್ತರಣಾ ಶಿಕ್ಷಣದ ಮೂಲಕ ಪ್ರಸಾರ ಮಾಡುವುದಕ್ಕಾಗಿ ಅವಕಾಶ ಕಲ್ಪಿಸುವುದು;

(ಸಿ) ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಲ್ಲಿ ಪದವಿಗಳು, ಡಿಪ್ಲೋಮಾಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(ಡಿ) (i) ನಿಯಮಿಸಲಾದ ವಿದ್ಯಾ ವ್ಯಾಸಂಗ ಕ್ರಮದಲ್ಲಿ ಅಧ್ಯಯನ ಮಾಡಿರುವ; ಅಥವಾ

(ii) ಪರಿನಿಯಮಗಳ ಮೂಲಕ ನಿಯಮಿಸಲಾದ ಷರತ್ತುಗಳ ಮೇರೆಗೆ ವಿಶ್ವವಿದ್ಯಾನಿಲಯದಲ್ಲಿ ಸಂಶೋಧನೆಯನ್ನು ನಡೆಸಿದ,

- ವ್ಯಕ್ತಿಗಳಿಗಾಗಿ ಪರೀಕ್ಷೆ ನಡೆಸುವುದು ಮತ್ತು ಅವರಿಗೆ ಪದವಿಗಳು, ಡಿಪ್ಲೋಮಾಗಳು ಮತ್ತು ಇತರ ಶೈಕ್ಷಣಿಕ ಪಶಸ್ತಿಗಳನ್ನು ಪ್ರದಾನ ಮಾಡುವುದು.

(ಇ) ಪರಿನಿಯಮಗಳ ಮೂಲಕ ನಿಯಮಿಸಲಾದ ರೀತಿಯಲ್ಲಿ ಮತ್ತು ಷರತ್ತುಗಳ ಅಡಿಯಲ್ಲಿ ಗೌರವ ಪದವಿಗಳನ್ನು ಅಥವಾ ಇತರ ಪಶಸ್ತಿಗಳನ್ನು ಪ್ರದಾನ ಮಾಡುವುದು;

(ಎಫ್) ವಿಶ್ವವಿದ್ಯಾನಿಲಯದ ನಿಯತ ವಿದ್ಯಾರ್ಥಿಗಳಾಗಿ ಸೇರಿಕೊಂಡಿರದ ಕ್ಷೇತ್ರ ಕಾರ್ಯಕರ್ತರು, ಜಾನುವಾರು ಸಾಕಣೆದಾರರು ಮತ್ತು ಇತರ ವ್ಯಕ್ತಿಗಳಿಗೆ ಉಪನ್ಯಾಸಗಳನ್ನು ಮತ್ತು ಬೋಧನೆಗಳನ್ನು ನೀಡಲು ಅವಕಾಶ ಕಲ್ಪಿಸುವುದು ಮತ್ತು ಅವಶ್ಯಕವಿದ್ದರೆ ಅವರಿಗೆ ಪ್ರಮಾಣ ಪತ್ರಗಳನ್ನು ನೀಡುವುದು;

(ಜಿ) ತಾನು ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾನಿಲಯಗಳು, ಸಂಸ್ಥೆಗಳು, ಸಂಘಗಳು ಮತ್ತು ಇತರ ಪ್ರಾಧಿಕಾರಗಳೊಡನೆ ಸಹಕರಿಸುವುದು;

(ಎಚ್) ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳಿಗೆ ಸಂಬಂಧಪಟ್ಟ ಕಾಲೇಜುಗಳನ್ನು ಮತ್ತು ಸಂಸ್ಥೆಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ಐ) ನಿಯಮಿಸಲಾದ ಷರತ್ತುಗಳ ಅಡಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಕಾಲೇಜುಗಳನ್ನು ಸಂಯೋಜಿಸಿಕೊಳ್ಳುವುದು ಮತ್ತು ಕಾಲೇಜುಗಳಿಗೆ ನೀಡಿದ ಸಂಯೋಜನೆಯನ್ನು ಹಿಂತೆಗೆದುಕೊಳ್ಳುವುದು;

(ಜೆ) ಬೋಧನೆ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣಕ್ಕಾಗಿ ಪ್ರಯೋಗ ಶಾಲೆಗಳನ್ನು, ಗ್ರಂಥಾಲಯಗಳನ್ನು, ಸಂಶೋಧನಾ ಕೇಂದ್ರಗಳನ್ನು, ಸಂಸ್ಕರಣಾ ಸ್ಥಾವರಗಳನ್ನು ಮತ್ತು ವಸ್ತು ಸಂಗ್ರಹಾಲಯಗಳನ್ನು ಸ್ಥಾಪಿಸುವುದು;

(ಕೆ) ವಿಶ್ವವಿದ್ಯಾನಿಲಯದಲ್ಲಿ ಪ್ರಾಧ್ಯಾಪಕರ, ಸಹ ಪ್ರಾಧ್ಯಾಪಕರ, ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಮತ್ತು ಬೋಧಕ ಹುದ್ದೆಗಳನ್ನು ಪ್ರಾರಂಭಿಸುವುದು, ಅಮಾನತ್ತು ಮಾಡುವುದು ಅಥವಾ ರದ್ದುಪಡಿಸುವುದು ಮತ್ತು ಅವುಗಳಿಗೆ ಸೂಕ್ತ ನೇಮಕ ಮಾಡುವುದು;

(ಎಲ್) ಆಡಳಿತಾತ್ಮಕ ಮತ್ತು ಇತರ ಹುದ್ದೆಗಳನ್ನು ಸೃಜಿಸುವುದು, ಅಮಾನತ್ತು ಮಾಡುವುದು ಅಥವಾ ರದ್ದುಪಡಿಸುವುದು ಮತ್ತು ಅಂತಹ ಹುದ್ದೆಗಳಿಗೆ ವ್ಯಕ್ತಿಗಳನ್ನು ನೇಮಕ ಮಾಡುವುದು;

(ಎಂ) ಪರಿನಿಯಮಗಳಿಗೆ ಅನುಸಾರವಾಗಿ ಫೆಲೋಷಿಪ್, ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಬರ್ಸರಿಗಳು, ಪ್ರವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ಪ್ರಾರಂಭಿಸುವುದು ಮತ್ತು ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳಲ್ಲಿ ಸಂಶೋಧನೆಗೆ ಸಂಬಂಧಪಟ್ಟಂತೆ, ಶ್ರೇಷ್ಠ ಗುಣಮಟ್ಟದ ಮತ್ತು ಸಂಶೋಧನಾ ಕೃತಿಗಳನ್ನು ಪ್ರಕಟಿಸಲು ಕ್ರಮ ಕೈಗೊಳ್ಳುವುದು;

(ಎನ್) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು, ವಿಶ್ವವಿದ್ಯಾನಿಲಯವು ನಿರ್ವಹಿಸದಿರುವ ವಿದ್ಯಾರ್ಥಿನಿಲಯಗಳಿಗೆ ಮಾನ್ಯತೆ ನೀಡುವುದು ಮತ್ತು ಅವುಗಳ ಮಾನ್ಯತೆಯನ್ನು ಹಿಂತೆಗೆದುಕೊಳ್ಳುವುದು;

(ಓ) ವಿಶ್ವವಿದ್ಯಾನಿಲಯದ ನೌಕರರಿಗಾಗಿ ನಿವಾಸಗಳನ್ನು ನಿರ್ಮಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು;

(ಪಿ) ನಿಯಮಿಸಬಹುದಾದಂಥ ಶುಲ್ಕಗಳನ್ನು ಮತ್ತು ಇತರ ಚಾರ್ಜುಗಳು ನಿಗದಿಪಡಿಸುವುದು, ತಗಾದೆ ಮಾಡುವುದು ಮತ್ತು ಸ್ವೀಕರಿಸುವುದು;

(ಕ್ಯೂ) ವಿಶ್ವವಿದ್ಯಾನಿಲಯದ ಸಂಘವನ್ನು ಸಂಘಟಿಸುವುದು, ವಿನಿಯಮನಗೊಳಿಸುವುದು ಮತ್ತು ನಿಯಂತ್ರಿಸುವುದು;

(ಆರ್) ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಆರೋಗ್ಯ, ಅವರ ಕ್ಷೇಮ ಮತ್ತು ಶಿಸ್ತನ್ನು ಕಾಪಾಡಿಕೊಂಡು ಬರುವಂಥ ನಿಯಂತ್ರಣಾಧಿಕಾರವನ್ನು ಚಲಾಯಿಸುವುದು ಮತ್ತು ಸಂಯೋಜಿತ ಕಾಲೇಜುಗಳ ವಿದ್ಯಾರ್ಥಿಗಳ ಮೇಲೆ ಅದೇ ರೀತಿಯ ಉದ್ದೇಶಗಳಿಗಾಗಿ ಸಂಯೋಜಿತ ಕಾಲೇಜುಗಳ ಮೂಲಕ ನಿಯಂತ್ರಣಾಧಿಕಾರವನ್ನು ಚಲಾಯಿಸುವುದು;

(ಎಸ್) ಈ ಅಧಿನಿಯಮದ ಉದ್ದೇಶಕ್ಕಾಗಿ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸಲಾದ ಎಲ್ಲಾ ಸ್ಥಿರ ಸ್ವತ್ತುಗಳನ್ನು ನಿರ್ವಹಿಸುವುದು ಮತ್ತು ನಿಯಂತ್ರಿಸುವುದು;

(ಟಿ) ವಿಶ್ವವಿದ್ಯಾನಿಲಯದ ಉದ್ದೇಶಕ್ಕಾಗಿ ಅನುದಾನ, ಮರಣ ಶಾಸನದ ಮೂಲಕ ದಾನ ಅಥವಾ ಅನ್ಯಥಾ ವಿಶ್ವವಿದ್ಯಾನಿಲಯದಲ್ಲಿ ನಿಹಿತವಾಗಬಹುದಾದ ಯಾವುವೇ ದತ್ತಿಗಳು, ದೇಣಿಗೆಗಳು ಅಥವಾ ನಿಧಿಗಳನ್ನು ಸ್ವೀಕರಿಸುವುದು, ಧಾರಣಮಾಡುವುದು ಮತ್ತು ನಿರ್ವಹಿಸುವುದು ಹಾಗೂ ತಾನು ಯುಕ್ತವೆಂದು ಭಾವಿಸಬಹುದಾದ ಯಾವುದೇ ರೀತಿಯಲ್ಲಿ ಅಂಥ ದತ್ತಿಗಳನ್ನು, ದೇಣಿಗೆಗಳನ್ನು ಅಥವಾ ನಿಧಿಗಳನ್ನು ತೊಡಗಿಸುವುದು:

ಪರಂತು, ಒಂದು ಹೊರ ದೇಶದಿಂದ, ವಿದೇಶೀ ಪ್ರತಿಷ್ಠಾನದಿಂದ ಅಥವಾ ಅಂತಹ ದೇಶದಲ್ಲಿರುವ ಯಾವೊಬ್ಬ ವ್ಯಕ್ತಿಯಿಂದ ದೇಣಿಗೆಯನ್ನು ರಾಜ್ಯ ಸರ್ಕಾರದ ಅನುಮೋದನೆಯಿಲ್ಲದೆ ಸ್ವೀಕರಿಸತಕ್ಕದ್ದಲ್ಲ.

(ಯು) ಭಾರತ ಕೃಷಿ ಸಂಶೋಧನಾ ಪರಿಷತ್ತು, ಭಾರತ ಕೈಗಾರಿಕಾ ಸಂಶೋಧನಾ ಪರಿಷತ್ತು ಅಥವಾ ಭಾರತ ಸಮಾಜ ವಿಜ್ಞಾನಗಳ ಸಂಸ್ಥೆ ಅಥವಾ ಭಾರತ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಮಾನ್ಯತೆ ನೀಡಿದ ಯಾವುದೇ ಇತರ ಪ್ರಾಧಿಕಾರಗಳಂಥ ಸಂಸ್ಥೆಗಳಿಂದ ನಿರ್ದಿಷ್ಟ ಅಥವಾ ನಿರ್ದಿಷ್ಟವಲ್ಲದ ಅನುದಾನಗಳನ್ನು ಸ್ವೀಕರಿಸುವುದು;

(ವಿ) ರಾಜ್ಯ ಸರ್ಕಾರವು ಅನುಮೋದಿಸಬಹುದಾದಂಥ ಉದ್ದೇಶಗಳಿಗಾಗಿ ಭದ್ರತೆ ಸಹಿತ ಅಥವಾ ಭದ್ರತೆ ಇಲ್ಲದೆ ಕೇಂದ್ರ ಸರ್ಕಾರದಿಂದ, ಭಾರತ ಕೃಷಿ ಸಂಶೋಧನಾ ಪರಿಷತ್ತಿನಿಂದ ಅಥವಾ ಇತರ ನಿಗಮಿತ ನಿಕಾಯಗಳಿಂದ ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಹಣ ಸಾಲ ಪಡೆಯುವುದು;

(ಡಬ್ಲ್ಯೂ) ಉದ್ಯೋಗ ಸಂಸ್ಥೆಯನ್ನು (ಬ್ಯೂರೋ) ನಿರ್ವಹಿಸುವುದು;

(ಎಕ್ಸ್) ವಿಶ್ವವಿದ್ಯಾನಿಲಯದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅವಶ್ಯಕ ಅಥವಾ ಅಪೇಕ್ಷಣೀಯವಾದಂಥ, ಮೇಲೆ ಹೇಳಿದ ಅಧಿಕಾರಗಳಿಗೆ ಅಥವಾ ಪ್ರಕಾರ್ಯಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಅಲ್ಲದಿರಲಿ, ಎಲ್ಲ ಕೃತ್ಯಗಳನ್ನು ಮತ್ತು ಕಾರ್ಯಗಳನ್ನು ಮಾಡುವುದು;

**7. ವಿಶ್ವವಿದ್ಯಾನಿಲಯಕ್ಕೆ ಪ್ರವೇಶ.-** (1) ವಿಶ್ವವಿದ್ಯಾನಿಲಯವು, ಈ ಅಧಿನಿಯಮದ ಮತ್ತು ಪರಿನಿಯಮಗಳ ಉಪಬಂಧಗಳಿಗೊಳಪಟ್ಟು ಎಲ್ಲಾ ವ್ಯಕ್ತಿಗಳಿಗೆ, ಅವರು ಹೆಣ್ಣಾಗಿರಲಿ ಅಥವಾ ಗಂಡಾಗಿರಲಿ ಮತ್ತು ಯಾವುದೇ ಪಂಥ, ಜಾತಿ ಅಥವಾ ವರ್ಗಕ್ಕೆ ಸೇರಿರಲಿ, ಮುಕ್ತವಾಗಿರತಕ್ಕದ್ದು.

(2) (1)ನೇ ಉಪಪ್ರಕರಣದಲ್ಲಿ ಒಳಗೊಂಡಿರುವುದಾವುದೂ,-

(ಎ) ನಿಯಮಿಸಲಾದ ಶೈಕ್ಷಣಿಕ ಅರ್ಹತೆಗಳನ್ನು ಅಥವಾ ಗುಣಮಟ್ಟಗಳನ್ನು ಹೊಂದಿಲ್ಲದ ಯಾವೊಬ್ಬ ವ್ಯಕ್ತಿಗೆ ಯಾವುದೇ ವಿದ್ಯಾವ್ಯಾಸಂಗ ಕ್ರಮಕ್ಕೆ ಪ್ರವೇಶ ನೀಡಲು; ಅಥವಾ

(ಬಿ) ಪದವಿ, ಡಿಪ್ಲೊಮಾ ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಾಗಿ ಅಗತ್ಯಪಡಿಸಲಾದ ಕನಿಷ್ಠ ಗುಣಮಟ್ಟಕ್ಕಿಂತ ಕಡಿಮೆ ಶೈಕ್ಷಣಿಕ ದಾಖಲೆ ಇರುವ ಯಾವೊಬ್ಬ ವಿದ್ಯಾರ್ಥಿಯನ್ನು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಪಟ್ಟಿಯಲ್ಲಿ ಉಳಿಸಿಕೊಳ್ಳಲು; ಅಥವಾ

(ಸಿ) ವಿಶ್ವವಿದ್ಯಾನಿಲಯದ ಹಿತಾಸಕ್ತಿಗೆ ಬಾಧಕವಾದ ಅಥವಾ ಇತರ ವಿದ್ಯಾರ್ಥಿಗಳ ಮತ್ತು ನೌಕರರ ಹಕ್ಕುಗಳು ಮತ್ತು ವಿಶೇಷಾಧಿಕಾರಗಳಿಗೆ ಬಾಧಕವಾದ ನಡತೆಯನ್ನುಳ್ಳ ಯಾವೊಬ್ಬ ವ್ಯಕ್ತಿ ಅಥವಾ ವಿದ್ಯಾರ್ಥಿಗೆ ಪ್ರವೇಶ ನೀಡಲು; ಅಥವಾ

(ಡಿ) ಯಾವುದೇ ವಿಷಯದ ವ್ಯಾಸಂಗ ಕ್ರಮಕ್ಕೆ ನಿಯಮಿಸಲಾದ ಸಂಖ್ಯೆಗಿಂತ ಹೆಚ್ಚು ಸಂಖ್ಯೆಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು,

- ವಿಶ್ವವಿದ್ಯಾನಿಲಯವನ್ನು ಅಗತ್ಯಪಡಿಸತಕ್ಕದ್ದಲ್ಲ.

(3) (2)ನೇ ಉಪಪ್ರಕರಣದ ಉಪಬಂಧಗಳಿಗೆ ಮತ್ತು ರಾಜ್ಯ ಸರ್ಕಾರದ ಯಾವುದೇ ವಿಶೇಷ ಅಥವಾ ಸಾಮಾನ್ಯ ಆದೇಶಕ್ಕೆ ಒಳಪಟ್ಟು, ವಿಶ್ವವಿದ್ಯಾನಿಲಯವು ಈ ಸಂಬಂಧದಲ್ಲಿ ನಿಯಮಿಸಬಹುದಾದಂಥ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿದ ಮತ್ತು ರಾಜ್ಯ ಸರ್ಕಾರವು ಆದೇಶದ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಕೃಷಿ ಕುರಿತ ಪ್ರಾಯೋಗಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಮಹಿಳೆಯರಿಗೆ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಮತ್ತು ಹಿಂದುಳಿದ ವರ್ಗಗಳಿಗೆ, ಕೃಷಿಕರಿಗೆ ಮತ್ತು ಕೃಷಿಕರ ಮಕ್ಕಳಿಗೆ, ಸ್ವಾತಂತ್ರ ಹೋರಾಟಗಾರರ, ಸೈನಿಕರ ಮತ್ತು ಮಾಜಿ ಸೈನಿಕರ ಮಕ್ಕಳಿಗೆ ಹಾಗೂ ಪ್ರತಿಪಾಲಿತರಿಗೆ ವಿಶ್ವವಿದ್ಯಾನಿಲಯವು ನಿರ್ವಹಿಸುವ ಅಥವಾ ನಿಯಂತ್ರಿಸುವ ಕಾಲೇಜುಗಳಲ್ಲಿ ಸ್ಥಾನಗಳನ್ನು ಮೀಸಲಿರಿಸತಕ್ಕದ್ದು. ಹಂಚಿಕೆಗಳನ್ನು ಮಾಡುವಾಗ ಸರ್ಕಾರವು, ಭಾರತ ಪಶುವೈದ್ಯಕೀಯ ಪರಿಷತ್ತಿನ ಅಥವಾ ಅಂಥ ಇತರ ನಿಕಾಯಗಳು ಮಾಡಿದ ಕಡ್ಡಾಯ ಉಪಬಂಧಗಳನ್ನು ಪರಿಗಣಿಸತಕ್ಕದ್ದು ಮತ್ತು ಘಟಕ ಕಾಲೇಜುಗಳಲ್ಲಿ ಸ್ಥಾನಗಳನ್ನು ಮೀಸಲಿರಿಸುವ ತನ್ನ ಆದೇಶದಲ್ಲಿ ಅದನ್ನು ಸ್ಪಷ್ಟವಾಗಿ ತಿಳಿಸತಕ್ಕದ್ದು.

**ವಿವರಣೆ:-** (3)ನೇ ಉಪಪ್ರಕರಣದ ಉದ್ದೇಶಕ್ಕಾಗಿ ಕೃಷಿಕ ಎಂದರೆ, ಮಾಲೀಕನಾಗಿ ಅಥವಾ ಗೇಣಿದಾರನಾಗಿ ಭೂಮಿಯ ಹಿಡುವಳಿ ಹೊಂದಿರುವ ವ್ಯಕ್ತಿ ಮತ್ತು ಯಾರ ಮುಖ್ಯ ಆದಾಯವು ಸ್ವಂತ ಸಾಗುವಳಿ ಮಾಡುವುದರಿಂದ ಅಥವಾ ಕೃಷಿ ಭೂಮಿಗಳಲ್ಲಿ ಅಥವಾ ಪಶುಸಂಗೋಪನೆ ಇಲ್ಲವೇ ಮೀನುಗಾರಿಕೆ ಚಟುವಟಿಕೆಯಲ್ಲಿ ದೈಹಿಕ ದುಡಿಮೆಯಿಂದ ದೊರೆಯುತ್ತದೆಯೋ ಆ ವ್ಯಕ್ತಿಗಳು ಒಳಗೊಳ್ಳುತ್ತಾರೆ.

**8. ವಿಶ್ವವಿದ್ಯಾನಿಲಯಕ್ಕೆ ಕೆಲವು ಕಾಲೇಜುಗಳ, ಸಂಸ್ಥೆಗಳ ಮತ್ತು ನೌಕರರ ವರ್ಗಾವಣೆ.-** (1) ಕರ್ನಾಟಕ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯಗಳ ಅಧಿನಿಯಮ, 1963ರಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಕಾಲೇಜುಗಳು, ಸಂಶೋಧನಾ ಕೇಂದ್ರಗಳು, ಪಶುವೈದ್ಯಕೀಯ ಆಸ್ಪತ್ರೆಗಳು ಮತ್ತಿತರ ಸಂಸ್ಥೆಗಳು, ಮತ್ತು ಅವಕ್ಕೆ ಲಗತ್ತಾದ ವಿದ್ಯಾರ್ಥಿನಿಲಯಗಳು ಹಾಗೂ ಇತರ ಕಟ್ಟಡಗಳು, ತಮ್ಮ ಪೀಠೋಪಕರಣ ಸಾಮಗ್ರಿಗಳು, ಗ್ರಂಥಾಲಯಗಳು, ಪುಸ್ತಕಗಳು, ಪ್ರಯೋಗಾಲಯಗಳು, ದಾಸ್ತಾನು ಮಳಿಗೆಗಳು, ಉಪಕರಣಗಳು, ಸಾಧನಗಳು, ಪರಿಕರಗಳು ಮತ್ತು ಸಲಕರಣೆಗಳ ಸಮೇತವಾಗಿ, ಹಾಗೂ ನಿರ್ದಿಷ್ಟಪಡಿಸಿದ ದಿನಾಂಕಕ್ಕೆ ಮೊದಲು ಕೃಷಿವಿಜ್ಞಾನಗಳ ವಿಶ್ವವಿದ್ಯಾನಿಲಯ, ಧಾರವಾಡ, ಕೃಷಿವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು ಹಾಗೂ ರಾಜ್ಯ ಸರ್ಕಾರವು ಮಾಲೀಕತ್ವ ಹೊಂದಿದ್ದ ಮತ್ತು ನಿರ್ವಹಿಸುತ್ತಿದ್ದ ಚರ ಮತ್ತು ಸ್ಥಿರ ಸ್ವತ್ತುಗಳೆರಡೂ ಸೇರಿದಂತೆ ಇತರ ಎಲ್ಲಾ ಸ್ವತ್ತುಗಳು, ಆಸ್ತಿಗಳು, ಹೊಣೆಗಾರಿಕೆಗಳು ಮತ್ತು ದಾಯಿತ್ವಗಳ ಸಹಿತವಾಗಿ ಅದರ ಎಲ್ಲಾ ಸ್ವತ್ತುಗಳು, ಈ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿತವಾಗತಕ್ಕದ್ದು ಮತ್ತು ಅದರಲ್ಲಿ ನಿಹಿತವಾಗತಕ್ಕದ್ದು.

(2) ನಿರ್ದಿಷ್ಟಪಡಿಸಿದ ದಿನಾಂಕಕ್ಕೆ ಮೊದಲು ಸಂದರ್ಭಾನುಸಾರ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಬೆಂಗಳೂರು ಅಥವಾ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಧಾರವಾಡದಲ್ಲಿ ಯಾವುದೇ ಪರೀಕ್ಷೆಗಾಗಿ ವ್ಯಾಸಂಗ ಮಾಡುತ್ತಿರುವ, (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಒಂದು ಕಾಲೇಜಿನ ಅಥವಾ ಸಂಸ್ಥೆಯ ಯಾವೊಬ್ಬ ವಿದ್ಯಾರ್ಥಿಯು, ಅದಕ್ಕಾಗಿ ಸಿದ್ಧತೆ ನಡೆಸಿದ ತನ್ನ ವ್ಯಾಸಂಗ ಕ್ರಮವನ್ನು ಪೂರ್ಣಗೊಳಿಸಲು ಅನುಮತಿ ನೀಡತಕ್ಕದ್ದು, ಮತ್ತು ವಿಶ್ವವಿದ್ಯಾನಿಲಯವು ಅಂಥ ವಿದ್ಯಾರ್ಥಿಗಳಿಗಾಗಿ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಸಂದರ್ಭಾನುಸಾರ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಧಾರವಾಡದ ವಿದ್ಯಾರ್ಥಿಗಳ ಪಠ್ಯ ಕ್ರಮಕ್ಕನುಸಾರವಾಗಿ ನಿಯಮಿಸಬಹುದಾದಂಥ ಅವಧಿವರೆಗೆ ಪರೀಕ್ಷೆಗಳನ್ನು ನಡೆಸಲು ವ್ಯವಸ್ಥೆ ಮಾಡತಕ್ಕದ್ದು.

(3) ನಿರ್ದಿಷ್ಟಪಡಿಸಿದ ದಿನಾಂಕಕ್ಕೆ ಮೊದಲು ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ ಧಾರವಾಡ ಇವು ಪರೀಕ್ಷೆಗಳನ್ನು ನಡೆಸಿ ಫಲಿತಾಂಶಗಳನ್ನು ಘೋಷಿಸಿದ್ದರೆ ಮತ್ತು ಸಂಬಂಧಪಟ್ಟ ಪದವಿಯನ್ನು ಪ್ರದಾನ ಮಾಡಿರದಿದ್ದರೆ ಅಥವಾ ನೀಡಿರದಿದ್ದರೆ ಅಥವಾ ವ್ಯಾಸಂಗ ಕ್ರಮದ ಅಗತ್ಯತೆಗಳನ್ನು ಪೂರೈಸಿದ್ದರೂ ಅಂಥ ಪರೀಕ್ಷೆಯ ಫಲಿತಾಂಶಗಳನ್ನು ಘೋಷಿಸಿರದಿದ್ದರೆ, ಆಗ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಸಂದರ್ಭಾನುಸಾರ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಧಾರವಾಡ ಇದು ಫಲಿತಾಂಶವನ್ನು ಘೋಷಿಸತಕ್ಕದ್ದು ಮತ್ತು ಪದವಿಯನ್ನು ಪ್ರದಾನ ಮಾಡತಕ್ಕದ್ದು.

(4) ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಧಾರವಾಡ ಇವುಗಳಿಂದ ನಿಯೋಜಿತರಾಗಿದ್ದ, ಯಾವುದೇ ಕಾಲೇಜಿನಲ್ಲಿ, ಸಂಶೋಧನಾ ಕೇಂದ್ರದಲ್ಲಿ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರತಿಯೊಬ್ಬ ವ್ಯಕ್ತಿಯು, ನಿರ್ದಿಷ್ಟಪಡಿಸಿದ ದಿನಾಂಕದಿಂದ ಈ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿತನಾಗತಕ್ಕದ್ದು ಹಾಗೂ ಅಂಥ ವ್ಯಕ್ತಿಯ ಒಪ್ಪಿಗೆಯೊಡನೆ ಷರತ್ತುಗಳನ್ನು ಮಾರ್ಪಡಿಸಿದ ಹೊರತು ಮತ್ತು ಮಾರ್ಪಡಿಸುವವರೆಗೆ, ಹಾಗೆ ವರ್ಗಾವಣೆ ಮಾಡುವುದಕ್ಕೆ ಮೊದಲು ಅನ್ವಯವಾಗುತ್ತಿದ್ದ ಸೇವಾ ಷರತ್ತುಗಳ ಮೇಲೆ ಆತನು ವರ್ಗಾಯಿತನಾಗತಕ್ಕದ್ದು ಹಾಗೂ ಅವೇ ಸೇವಾ ಷರತ್ತುಗಳು ಅನ್ವಯಿಸುವುದು ಮುಂದುವರಿಯತಕ್ಕದ್ದು:

ಪರಂತು, ರಾಜ್ಯ ಸರ್ಕಾರದಿಂದ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ ಬೆಂಗಳೂರು ಮತ್ತು ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ಧಾರವಾಡಕ್ಕೆ ಪ್ರತಿನಿಯೋಜಿಸಲಾದ ಯಾವ ವ್ಯಕ್ತಿಯನ್ನೂ ರಾಜ್ಯ ಸರ್ಕಾರದ ಪೂರ್ವಾನುಮೋದನೆ ಇಲ್ಲದೆ ವರ್ಗಾಯಿಸತಕ್ಕದ್ದಲ್ಲ.

ಮತ್ತು ಪರಂತು, ರಾಜ್ಯ ಸರ್ಕಾರವು ನಿಯೋಜಿಸಿದ ಆದರೆ ಅನುಸೂಚಿಯಲ್ಲಿ ಹೇಳಿದ ಕಾಲೇಜುಗಳಲ್ಲಿ, ಸಂಶೋಧನಾ ಕೇಂದ್ರಗಳಲ್ಲಿ ಮತ್ತು ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯಾವೊಬ್ಬ ವ್ಯಕ್ತಿಯನ್ನು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸತಕ್ಕದ್ದಲ್ಲ. ಆತನ ನಿಯೋಜನೆಯ ದರ್ಜೆ ಬಗ್ಗೆ ರಾಜ್ಯ ಸರ್ಕಾರವು ತೀರ್ಮಾನವನ್ನು ಕೈಗೊಂಡ ಹೊರತು ಮತ್ತು ಆ ವರೆಗೆ ಅವನು ಯಾವ ವೃಂದ ಮತ್ತು ನೇಮಕಾತಿ ನಿಯಮಗಳ ಅಡಿಯಲ್ಲಿ ನೇಮಕನಾಗಿರುವನೋ ಅವೇ ನಿಯಮಗಳಿಗೆ ಒಳಪಟ್ಟಿರುವುದು ಮುಂದುವರೆಯತಕ್ಕದ್ದು.

(5) ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಕಾಲೇಜಿನಲ್ಲಿ ಅಥವಾ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧನಾ ಸಿಬ್ಬಂದಿಯ ಯಾವ ಸದಸ್ಯನನ್ನು ಅಥವಾ ಇತರ ನೌಕರನನ್ನು ಆ ಸಂಬಂಧದಲ್ಲಿ ಅವನು ತನ್ನ ಒಪ್ಪಿಗೆಯನ್ನು ಕೊಟ್ಟಹೊರತು ವರ್ಗಾಯಿಸತಕ್ಕದ್ದಲ್ಲ ಮತ್ತು ಯಾವೊಬ್ಬ ಶಿಕ್ಷಕ ಅಥವಾ ನೌಕರನು ಅಂಥ ವರ್ಗಾವಣೆಗೆ ಒಪ್ಪಿಗೆಯನ್ನು ಕೊಡದಿದ್ದರೆ ಯಾವುದೇ ಕರಾರಿನಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಉಪಬಂಧದಲ್ಲಿ ಏನೇ ಒಳಗೊಂಡಿದ್ದರೂ ಆತ ಸೇವೆಯಿಂದ ನಿವೃತ್ತನಾಗತಕ್ಕದ್ದು. ಅಂಥ ನಿವೃತ್ತಿಯ ಸಂಬಂಧದಲ್ಲಿ ಯಾವುದೇ ನಷ್ಟಭರ್ತಿ ಅಥವಾ ಪರಿಹಾರಕ್ಕೆ ಹಕ್ಕುಳ್ಳವನಾಗಿರತಕ್ಕದ್ದಲ್ಲ. ಆದರೆ ನಿವೃತ್ತಿಯ ದಿನಾಂಕದವರೆಗೆ ಅವನು ಸಲ್ಲಿಸಿದ ಸೇವಾವಧಿಗಾಗಿ ಎಲ್ಲಾ ನಿವೃತ್ತಿ ಪ್ರಯೋಜನಗಳನ್ನು ಪಡೆದುಕೊಳ್ಳಲು ಹಕ್ಕುಳ್ಳವನಾಗಿರತಕ್ಕದ್ದು.

**9. ತಪಾಸಣೆ ಮತ್ತು ನಿಯಂತ್ರಣ.-** (1) ಕುಲಾಧಿಪತಿಯು ವಿಶ್ವವಿದ್ಯಾನಿಲಯದ, ಅದರ ಕಟ್ಟಡಗಳ, ಪ್ರಯೋಗ ಶಾಲೆಗಳು, ಗ್ರಂಥಾಲಯಗಳು, ವಸ್ತು ಸಂಗ್ರಹಾಲಯಗಳು, ವಿದ್ಯಾರ್ಥಿನಿಲಯಗಳು, ಕಾರ್ಯಾಗಾರಗಳು, ಆಸ್ಪತ್ರೆಗಳು ಮತ್ತು ವಿಶ್ವವಿದ್ಯಾನಿಲಯವು ನಿರ್ವಹಿಸುತ್ತಿರುವ, ಆಡಳಿತ ನಡೆಸುತ್ತಿರುವ, ಮಾನ್ಯತೆ ನೀಡಿದ ಅಥವಾ ಅನುಮೋದಿಸಿದ ಸಂಸ್ಥೆಯ ಮತ್ತು ಸಲಕರಣೆಗಳ ಮತ್ತು ವಿಶ್ವವಿದ್ಯಾನಿಲಯವು ನಡೆಸಿದ ಮತ್ತು ಕೈಗೊಂಡ ಪರೀಕ್ಷೆಗಳ, ಅಧ್ಯಾಪನದ ಮತ್ತು ಇತರ ಕಾರ್ಯದ ಬಗ್ಗೆ ತಪಾಸಣೆ ಮಾಡತಕ್ಕದ್ದು ಮತ್ತು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಇತರ ಯಾವುದೇ ವಿಷಯದ ಬಗ್ಗೆ ಅದೇ ರೀತಿಯಲ್ಲಿ ತಪಾಸಣೆ ಮಾಡುವಂತೆ ಅಥವಾ ವಿಚಾರಣೆ ನಡೆಸುವಂತೆ ರಾಜ್ಯ ಸರ್ಕಾರವು ವಿನಂತಿಸಿಕೊಂಡಿದ್ದರೆ, ತಾನು ನಿರ್ದೇಶಿಸಬಹುದಾದಂಥ ವ್ಯಕ್ತಿ ಅಥವಾ ವ್ಯಕ್ತಿಗಳಿಂದ ಹಾಗೆ ಮಾಡಿಸತಕ್ಕದ್ದು ಮತ್ತು ಸ್ವಪ್ರೇರಣೆಯಿಂದಲೂ ಆ ರೀತಿ ಮಾಡಿಸಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ತಪಾಸಣೆ ಅಥವಾ ವಿಚಾರಣೆ ನಡೆಸುವುದಕ್ಕಾಗಿ ನಿರ್ದೇಶಿತರಾದ ವ್ಯಕ್ತಿ ಅಥವಾ ವ್ಯಕ್ತಿಗಳು ಆ ಉದ್ದೇಶಕ್ಕಾಗಿ ಸಂಬಂಧಪಟ್ಟ ಸಂಸ್ಥೆಗಳನ್ನು ಮತ್ತು ಆವರಣಗಳನ್ನು ಪ್ರವೇಶಿಸಲು ಮತ್ತು ಅವಶ್ಯಕವಾಗಬಹುದಾದಂಥ ಲೆಕ್ಕಪತ್ರಗಳನ್ನು ಅಥವಾ ಇತರ ದಾಖಲೆಗಳನ್ನು ಪಡೆದುಕೊಳ್ಳಲು ಅವಕಾಶವಿರುತ್ತದೆ.

(3) ಅಂಥ ವ್ಯಕ್ತಿ ಅಥವಾ ವ್ಯಕ್ತಿಗಳು, ತಪಾಸಣೆ ಅಥವಾ ವಿಚಾರಣೆಯ ವರದಿಯನ್ನು ಕುಲಾಧಿಪತಿಯವರಿಗೆ ಸಲ್ಲಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(4) ರಾಜ್ಯ ಸರ್ಕಾರವು ವರದಿಯಲ್ಲಿ ತನಗೆ ಉಲ್ಲೇಖಿಸಲಾದ ಯಾವುದೇ ವಿಷಯಕ್ಕೆ ಸಂಬಂಧಪಟ್ಟಂತೆ ತನ್ನ ಅಭಿಪ್ರಾಯಗಳನ್ನು ತಿಳಿಸಿ ಕುಲಪತಿಯವರಿಗೆ ಪತ್ರಬರೆಯಬಹುದು ಮತ್ತು ಕುಲಪತಿಯವರು ಅವಶ್ಯ ಕ್ರಮಕೈಗೊಳ್ಳುವುದಕ್ಕಾಗಿ ಮಂಡಲಿಗೆ ಅದನ್ನು ತಿಳಿಸಬಹುದು.

(5) ಮಂಡಲಿಯು, ತಾನು ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದಂಥ ಕ್ರಮದ ಬಗ್ಗೆ ಕುಲಪತಿಯವರ ಮೂಲಕ ರಾಜ್ಯ ಸರ್ಕಾರಕ್ಕೆ ತಿಳಿಸತಕ್ಕದ್ದು.

(6) ಮಂಡಲಿಯು ಸೂಕ್ತ ಕಾಲದೊಳಗೆ ರಾಜ್ಯ ಸರ್ಕಾರಕ್ಕೆ ತೃಪ್ತಿಕರವಾಗುವಂತೆ ಕ್ರಮ ಕೈಗೊಳ್ಳದಿದ್ದರೆ ಅಥವಾ ಯಾವುದೇ ಕ್ರಮ ಕೈಗೊಳ್ಳಲು ವಿಫಲವಾದರೆ ರಾಜ್ಯ ಸರ್ಕಾರವು ಅವಶ್ಯಕವಾದಂಥ ನಿರ್ದೇಶನಗಳನ್ನು ನೀಡುವಂತೆ ಕುಲಪತಿಯವರಿಗೆ ಅಗತ್ಯಪಡಿಸಬಹುದು ಮತ್ತು ಮಂಡಲಿಯು ಅವುಗಳನ್ನು ಪಾಲಿಸಲು ಬದ್ಧವಾಗಿರತಕ್ಕದ್ದು.

(7) ಮಂಡಲಿಯು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದಂತೆ ವಿಶ್ವವಿದ್ಯಾನಿಲಯದ ಆಡಳಿತಕ್ಕೆ ಸಂಬಂಧಪಡುವ ವಿವರಣಾಪತ್ರ, ವಿವರ ಪಟ್ಟಿಗಳನ್ನು, ಲೆಕ್ಕಪತ್ರಗಳು ಅಥವಾ ಇತರ ವಿವರಗಳನ್ನು ಒದಗಿಸತಕ್ಕದ್ದು.

(8) ಪೂರ್ವೋಕ್ತ ಉಪಪ್ರಕರಣಗಳಲ್ಲಿ ಏನೇ ಇದ್ದರೂ, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸಿ ಈ ಅಧಿನಿಯಮಕ್ಕೆ ಮತ್ತು ಪರಿನಿಯಮಗಳಿಗೆ ಸುಸಂಗತವಾಗಿಲ್ಲವೆಂದು ತಾನು ಅಭಿಪ್ರಾಯಪಡುವ ವಿಶ್ವವಿದ್ಯಾನಿಲಯದ ಯಾವುವೇ ನಡವಳಿಗಳನ್ನು ರದ್ದುಪಡಿಸಬಹುದು:

ಪರಂತು, ಅಂಥ ಆದೇಶವನ್ನು ಮಾಡುವುದಕ್ಕೆ ಮೊದಲು ರಾಜ್ಯ ಸರ್ಕಾರವು ಅಂಥ ಆದೇಶವನ್ನು ಏಕೆ ಮಾಡಕೂಡದು ಎಂಬ ಬಗ್ಗೆ ಕಾರಣ ತೋರಿಸಲು ವಿಶ್ವವಿದ್ಯಾನಿಲಯವನ್ನು ಕೇಳಬಹುದು ಮತ್ತು ಸೂಕ್ತ ಕಾಲದೊಳಗೆ ಯಾವುದೇ ಕಾರಣವನ್ನು ತೋರಿಸಿದರೆ ಅದನ್ನು ಪರಿಗಣಿಸತಕ್ಕದ್ದು.

(9) (8)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಆದೇಶವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು.

## ಅಧ್ಯಾಯ - III

## ವಿಶ್ವವಿದ್ಯಾನಿಲಯದ ಅಧಿಕಾರಿಗಳು

**10. ವಿಶ್ವವಿದ್ಯಾನಿಲಯದ ಅಧಿಕಾರಿಗಳು.-** ಈ ಮುಂದಿನವರು ವಿಶ್ವವಿದ್ಯಾನಿಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

1. ಕುಲಾಧಿಪತಿ
2. ಸಹ ಕುಲಾಧಿಪತಿ
3. ಕುಲಪತಿ
4. ಡೀನ್‌ಗಳು
5. ಲೆಕ್ಕಪತ್ರ ನಿಯಂತ್ರಕರು
6. ರಿಜಿಸ್ಟ್ರಾರ್
7. ಗ್ರಂಥಪಾಲ
8. ಶಿಕ್ಷಣ ನಿರ್ದೇಶಕರು (ಸ್ನಾತಕೋತ್ತರ ಅಧ್ಯಯನಗಳು)
9. ಸಂಶೋಧನಾ ನಿರ್ದೇಶಕರು
10. ವಿಸ್ತರಣಾ ನಿರ್ದೇಶಕರು
11. ವಿಭಾಗಗಳ ಮುಖ್ಯಸ್ಥರು
12. ವಿಶ್ವವಿದ್ಯಾನಿಲಯದ ಅಧಿಕಾರಿಗಳೆಂದು ಪರಿನಿಯಮಗಳಿಂದ ಘೋಷಿಸಬಹುದಾದಂಥ ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವ ಇತರ ಅಧಿಕಾರಿಗಳು.

**11. ಕುಲಾಧಿಪತಿ.-** (1) ಕರ್ನಾಟಕ ರಾಜ್ಯಪಾಲರು ತಮ್ಮ ಪದದ ಕಾರಣದಿಂದಾಗಿ ವಿಶ್ವವಿದ್ಯಾನಿಲಯದ ಕುಲಾಧಿಪತಿಯಾಗಿರತಕ್ಕದ್ದು.

(2) ಅವರು ವಿಶ್ವವಿದ್ಯಾನಿಲಯದ ಮುಖ್ಯಸ್ಥರಾಗಿರತಕ್ಕದ್ದು ಮತ್ತು ಉಪಸ್ಥಿತರಿದ್ದಾಗ ವಿಶ್ವವಿದ್ಯಾನಿಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಯಾವೊಬ್ಬ ವ್ಯಕ್ತಿಗೆ ವಿಶ್ವವಿದ್ಯಾನಿಲಯದಿಂದ ಪ್ರದಾನ ಮಾಡುವ ಯಾವುದೇ ಗೌರವ ಪದವಿಯನ್ನು ಕುಲಾಧಿಪತಿಯವರ ಅನುಮೋದನೆಯಿಲ್ಲದೆ ನೀಡತಕ್ಕದ್ದಲ್ಲ.

(4) ಕುಲಾಧಿಪತಿಯು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಪ್ರದಾನ ಮಾಡಿದ ಅಥವಾ ಅವರಿಗೆ ವಿಧಿಸಿರುವಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಸಹ ಕುಲಾಧಿಪತಿ.-** (1) ಕರ್ನಾಟಕದ ಪಶುಸಂಗೋಪನೆ ಇಲಾಖೆಯ ಪ್ರಭಾರಹೊಂದಿದ ಸಚಿವರು ತಮ್ಮ ಪದದ ಬಲದಿಂದ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಯಾಗಿರತಕ್ಕದ್ದು.

(2) ಸಹಕುಲಾಧಿಪತಿಯು, ಈ ಅಧಿನಿಯಮದ ಮೂಲಕ ಅಥವಾ ಅಡಿಯಲ್ಲಿ, ತಮಗೆ ಪ್ರದತ್ತವಾಗಬಹುದಾದಂಥ ಕುಲಾಧಿಪತಿಯ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು. ಕುಲಾಧಿಪತಿಯವರು ಲಿಖಿತ ಆದೇಶದ ಮೂಲಕ ಸಹಕುಲಾಧಿಪತಿಗೆ ಪ್ರತ್ಯಾಯೋಜಿಸಿ ಕೊಡಬಹುದಾದಂಥ ಇತರ ಅಧಿಕಾರಗಳನ್ನು ಸಹ ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ಸಹ ನೆರವೇರಿಸತಕ್ಕದ್ದು ಮತ್ತು ಅಂಥ ಪ್ರತ್ಯಾಯೋಜನೆಯು ಅಂಥ ಆದೇಶದಲ್ಲಿ ನಿರ್ದಿಷ್ಟಪಡಿಸಬಹುದಾದಂಥ ನಿರ್ಬಂಧಗಳಿಗೆ ಒಳಪಟ್ಟಿರತಕ್ಕದ್ದು.

(3) ಅವರು, ಕುಲಾಧಿಪತಿಯ ಗೈರುಹಾಜರಿಯಲ್ಲಿ, ವಿಶ್ವವಿದ್ಯಾನಿಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**13. ಕುಲಪತಿ.-** (1) ಕುಲಪತಿಯು, ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.

(2) ಕುಲಪತಿಯನ್ನು, ಕುಲಾಧಿಪತಿಯವರು ನಾಮನಿರ್ದೇಶನ ಮಾಡಿದ ಒಬ್ಬ ವ್ಯಕ್ತಿ, ಮಹಾನಿರ್ದೇಶಕರು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ಅಧ್ಯಕ್ಷರು-ವಿಶ್ವವಿದ್ಯಾನಿಲಯ ಅನುದಾನ ಆಯೋಗ ಅಥವಾ ಅವರ ನಾಮನಿರ್ದೇಶಿತ ವ್ಯಕ್ತಿ ಮತ್ತು ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತನಾದ ವ್ಯಕ್ತಿಯನ್ನು ಒಳಗೊಂಡ ಶೋಧನಾ ಸಮಿತಿಯು ಶಿಫಾರಸ್ಸು ಮಾಡಿದ ಹೆಸರುಗಳ ಪಟ್ಟಿಯಿಂದ ಕುಲಾಧಿಪತಿಯವರು ನೇಮಕ ಮಾಡತಕ್ಕದ್ದು. ಸಮಿತಿಯ ಸದಸ್ಯನೆಂಬಂತೆ ನಾಮನಿರ್ದೇಶಿತಗೊಂಡ ಯಾವೊಬ್ಬ ವ್ಯಕ್ತಿಯು ವಿಶ್ವವಿದ್ಯಾನಿಲಯದೊಂದಿಗೆ ಅಥವಾ ವಿಶ್ವವಿದ್ಯಾನಿಲಯದ ಮೂಲಕ ನಿರ್ವಹಿಸಲಾದ ಅಥವಾ ಆಡಳಿತ ನಡೆಸಲಾದ ಯಾವುದೇ ಸಂಸ್ಥೆಯೊಂದಿಗೆ ಸಂಬಂಧಹೊಂದಿರತಕ್ಕದ್ದಲ್ಲ. ಕುಲಾಧಿಪತಿಯು, ಸಮಿತಿಯ ಸದಸ್ಯರಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡತಕ್ಕದ್ದು. ಪಶುಸಂಗೋಪನೆ ಇಲಾಖೆಯ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ ಅಥವಾ ಸರ್ಕಾರದ ಉಪ-ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅವರ ನಾಮನಿರ್ದೇಶಿತನು ಶೋಧನಾ ಸಮಿತಿಯ ಸಂಚಾಲಕನಾಗಿರತಕ್ಕದ್ದು:

ಪರಂತು, ಕುಲಾಧಿಪತಿಯು, ಸಮಿತಿಯು ಶಿಫಾರಸ್ಸು ಮಾಡಿದ ಯಾವುದೇ ಹೆಸರುಗಳನ್ನು ಅನುಮೋದಿಸದೇ ಇದ್ದಲ್ಲಿ ಸಮಿತಿಯಿಂದ ಹೊಸ ಶಿಫಾರಸ್ಸುಗಳ ಪಟ್ಟಿಯನ್ನು ಕೇಳಬಹುದು.

(3) ಸಮಿತಿಯು, ನಿರ್ದಿಷ್ಟಪಡಿಸಬಹುದಾದಂಥ ಅವಧಿಯೊಳಗೆ ಕುಲಾಧಿಪತಿಗೆ ಹೆಸರುಗಳ ಪಟ್ಟಿಯನ್ನು ಸಲ್ಲಿಸತಕ್ಕದ್ದು. ಕುಲಾಧಿಪತಿಯು, ಅರ್ಹತೆ, ನ್ಯಾಯೋಚಿತತೆ ಮತ್ತು ಸಾಮಾಜಿಕ ನ್ಯಾಯ- ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಂದಿಗೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು. ಸಮಿತಿಯು, ಹಾಗೆ ನಿರ್ದಿಷ್ಟಪಡಿಸಿದ ಅವಧಿಯೊಳಗೆ ಪಟ್ಟಿಯನ್ನು ಸಲ್ಲಿಸಲು ವಿಫಲವಾದಲ್ಲಿ, ಕುಲಾಧಿಪತಿಯು, ತಾನು ಸೂಕ್ತವೆಂದು ಭಾವಿಸಬಹುದಾದಂಥ ವ್ಯಕ್ತಿಯನ್ನು ಕುಲಪತಿಯನ್ನಾಗಿ ನೇಮಕ ಮಾಡಬಹುದು.

(4) (2) ಮತ್ತು (3)ನೇ ಉಪ-ಪ್ರಕರಣಗಳಲ್ಲಿ ಏನೇ ಇದ್ದರೂ, ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯನ್ನು, ರಾಜ್ಯ ಸರ್ಕಾರದ ಶಿಫಾರಸ್ಸಿನ ಮೇಲೆ ಕುಲಾಧಿಪತಿಯು ನೇಮಿಸತಕ್ಕದ್ದು.

(5) ಯಾವೊಬ್ಬ ವ್ಯಕ್ತಿಯ ವಯಸ್ಸು ಅರವತ್ತೈದು ವರ್ಷವನ್ನು ಮೀರಿದ್ದರೆ, ಆತನನ್ನು ಕುಲಪತಿಯನ್ನಾಗಿ ನೇಮಕ ಮಾಡತಕ್ಕದ್ದಲ್ಲ ಅಥವಾ ಅವನು ಆ ಪದವನ್ನು ಧಾರಣ ಮಾಡತಕ್ಕದ್ದಲ್ಲ.

(6) ಕುಲಪತಿಯವರು, ಕುಲಾಧಿಪತಿಯವರ ಇಷ್ಟಪರ್ಯಂತ ಮತ್ತು (5)ನೇ ಉಪ-ಪ್ರಕರಣದ ಉಪಬಂಧಗಳಿಗೊಳಪಟ್ಟು ನಾಲ್ಕು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಅವರು ಎರಡನೇ ಅವಧಿಗೆ ಪುನರ್ ನೇಮಕಕ್ಕೆ ಅರ್ಹರಾಗಿರತಕ್ಕದ್ದಲ್ಲ. ಆದಾಗ್ಯೂ, ಕುಲಪತಿಯು ಸ್ವಯಂ ರುಜು ಮಾಡಿ ಕುಲಾಧಿಪತಿಗೆ ಸಂಭೋಧಿಸಿ ಪತ್ರಬರೆದು, ಮೂರು ತಿಂಗಳುಗಳ ನೋಟೀಸನ್ನು ನೀಡಿದ ನಂತರ, ತನ್ನ ಪದಕ್ಕೆ ರಾಜೀನಾಮೆ ನೀಡಬಹುದು.

(7) ಕುಲಪತಿಯನ್ನು, ಈ ಅಧಿನಿಯಮದ ಉಪಬಂಧಗಳನ್ನು ಉದ್ದೇಶಪೂರ್ವಕವಾಗಿ ನೆರವೇರಿಸದೆ ಬಿಟ್ಟುಬಿಟ್ಟ ಅಥವಾ ನೆರವೇರಿಸಲು ನಿರಾಕರಿಸಿದ ಅಥವಾ ತನ್ನಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗಪಡಿಸಿಕೊಂಡ ಕಾರಣದ ಮೇಲೆ ಮತ್ತು ರಾಜ್ಯ ಸರ್ಕಾರವು, (8)ನೇ ಉಪ-ಪ್ರಕರಣದ ಅಡಿಯಲ್ಲಿ ತಾನು ಆದೇಶಿಸಿದ ವಿಚಾರಣಾ ವರದಿಯನ್ನು ಪರಿಗಣಿಸಿದ ನಂತರ ಮಾಡಿದ್ದ ಸಲಹೆಯ ಮೇಲೆ ಕುಲಾಧಿಪತಿಯು ಹೊರಡಿಸಿದ ಆದೇಶದ ಮೂಲಕವಾಗಿ ಹೊರತು, ಅನ್ಯಥಾ ಪದದಿಂದ ತೆಗೆದುಹಾಕತಕ್ಕದ್ದಲ್ಲ.

(8) ಈ ಪ್ರಕರಣದ ಅಡಿಯಲ್ಲಿ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರವು, ಉಚ್ಚನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣೆ ಪ್ರಾಧಿಕಾರವು, ಕುಲಪತಿಯು ತನ್ನ ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ ವಿಚಾರಣೆ ನಡೆಸತಕ್ಕದ್ದು ಮತ್ತು ಯಾವುದೇ ದಂಡನೆ ವಿಧಿಸಬೇಕಾಗಿದ್ದರೆ, ಅದೂ ಒಳಗೊಂಡಂತೆ ಒಂದು ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ರಾಜ್ಯಸರ್ಕಾರವು, ವರದಿಯನ್ನು ಪರಿಶೀಲಿಸಿದ ನಂತರ, ಕುಲಾಧಿಪತಿಗೆ ಸಲಹೆ ನೀಡತಕ್ಕದ್ದು. ಕುಲಾಧಿಪತಿಯು ಸಾಧ್ಯವಾದಷ್ಟು ಮಟ್ಟಿಗೆ ಆರು ತಿಂಗಳೊಳಗಾಗಿ ಅಂಥ ಸಲಹೆಗೆ ಅನುಸಾರವಾಗಿ ಕ್ರಮಕೈಗೊಳ್ಳತಕ್ಕದ್ದು.

(9) ಕುಲಪತಿಯ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳು ಕುಲಾಧಿಪತಿಯು ನಿರ್ಧರಿಸಬಹುದಾದಂತೆ ಇರತಕ್ಕದ್ದು ಮತ್ತು ಅವುಗಳನ್ನು ಅವರು ಕುಲಪತಿಯಾಗಿ ನೇಮಕವಾದ ತರುವಾಯ ಅವರಿಗೆ ಅನಾನುಕೂಲವಾಗುವಂತೆ ಬದಲಾಯಿಸತಕ್ಕದ್ದಲ್ಲ. ಕುಲಪತಿಯಾಗಿ ತನ್ನ ಅಧಿಕಾರಾವಧಿಯಲ್ಲಿ, ಕುಲಪತಿಯು ವಯೋನಿವೃತ್ತಿಯ ಮೇಲೆ ನಿವೃತ್ತನಾಗುವ ಸಂದರ್ಭದಲ್ಲಿ, ಈಗಾಗಲೇ ನಿರ್ಧರಿಸಲಾದ ಅವನ ಸೇವಾ ಷರತ್ತುಗಳು ಮುಂದುವರಿಯತಕ್ಕದ್ದು. ಅವರ ಎಲ್ಲಾ ನಿವೃತ್ತಿ ಸೌಲಭ್ಯಗಳನ್ನು ತಡೆಹಿಡಿದಿಡತಕ್ಕದ್ದು ಮತ್ತು ಅವುಗಳನ್ನು ಅವರು ಕುಲಪತಿಯ ಸ್ಥಾನವನ್ನು ತ್ಯಜಿಸಿದ ನಂತರ ಬಿಡುಗಡೆ ಮಾಡತಕ್ಕದ್ದು.

(10) ನಿವೃತ್ತಿ ಹೊಂದಿದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಿಸಿದ್ದರೆ, ಅವರು ಕುಲಪತಿಯಾಗಿ ನೇಮಕಗೊಂಡ ಮೇಲೆ, ಅವರ ಉಪಲಬ್ಧಿಗಳೂ ಸೇರಿದಂತೆ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಕುಲಾಧಿಪತಿಯು ನಿರ್ಣಯಿಸತಕ್ಕದ್ದು. ಅವರು ಪಡೆಯುತ್ತಿರುವ ನಿವೃತ್ತಿ ವೇತನದ ಮೊತ್ತ ಮತ್ತು ಭತ್ಯೆಗಳಷ್ಟು ಮೊಬಲಗನ್ನು ಉಪಲಬ್ಧಿಗಳಿಂದ ಕಳೆಯತಕ್ಕದ್ದು.

(11) ರಾಜ್ಯದ ವಿಶ್ವವಿದ್ಯಾನಿಲಯವೊಂದರಲ್ಲಿ ಸೇವೆಯಲ್ಲಿರುವ ಒಬ್ಬ ಪ್ರಾಧ್ಯಾಪಕರು ಕುಲಪತಿಯಾಗಿ ನೇಮಕಗೊಂಡರೆ, ಅವರು ಕುಲಪತಿಯಾಗಿರುವ ಅವಧಿಯಲ್ಲಿ ಪ್ರಾಧ್ಯಾಪಕರಾಗಿ ಅವರ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಅವರಿಗೆ ಅನಾನುಕೂಲವಾಗುವಂತೆ ಪರಿಷ್ಕರಿಸತಕ್ಕದ್ದಲ್ಲ ಮತ್ತು ಅವರು ತನ್ನ ಹುದ್ದೆಯ ಧಾರಣಾಧಿಕಾರವನ್ನು ಉಳಿಸಿಕೊಳ್ಳತಕ್ಕದ್ದು.

**14. ಕುಲಪತಿಯ ಅಧಿಕಾರಗಳು.-** (1) ಕುಲಪತಿಯು, ವಿಶ್ವವಿದ್ಯಾನಿಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ವಿದ್ಯಾವಿಷಯಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ವ್ಯವಹಾರಗಳ ಮೇಲೆ ಸಾಮಾನ್ಯ ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾನಿಲಯದಲ್ಲಿ ಶಿಸ್ತನ್ನು ಸರಿಯಾಗಿ ನಿರ್ವಹಿಸಿಕೊಂಡುಬರುವುದಕ್ಕೆ ಜವಾಬ್ದಾರರಾಗಿರತಕ್ಕದ್ದು. ಅವರು ವಿಶ್ವವಿದ್ಯಾನಿಲಯದಲ್ಲಿ ಶಿಸ್ತುಪಾಲನೆಗೆ ಅವಶ್ಯವಾದ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(2) ಅವರು ಮಂಡಳಿಯ ಮತ್ತು ವಿದ್ಯಾವಿಷಯಕ ಪರಿಷತ್ತಿನ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು. ಅವರು, ಕುಲಾಧಿಪತಿಯ ಮತ್ತು ಸಹಕುಲಾಧಿಪತಿಯ ಗೈರುಹಾಜರಿಯಲ್ಲಿ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಪದವಿ ಪಡೆಯಲು ಅರ್ಹರಾದ ವ್ಯಕ್ತಿಗಳಿಗೆ ಪದವಿ ಪ್ರದಾನ ಮಾಡತಕ್ಕದ್ದು. ಅವರು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಅಥವಾ ನಿಕಾಯಗಳ ಸಭೆಗಳ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರು ಮತ ಚಲಾಯಿಸಲು ಹಕ್ಕುಳ್ಳವರಾಗಿರತಕ್ಕದ್ದು.

(3) ಅವರು, ಈ ಅಧಿನಿಯಮದ, ಪರಿನಿಯಮಗಳ ಮತ್ತು ವಿನಿಯಮಗಳ ಎಲ್ಲಾ ಉಪಬಂಧಗಳ ಪಾಲನೆ ಆಗುವಂತೆ ನೋಡಿಕೊಳ್ಳತಕ್ಕದ್ದು ಮತ್ತು ಆ ಉದ್ದೇಶಕ್ಕಾಗಿ ಅವಶ್ಯವಾದ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು. ಅವರು ಮಂಡಳಿಗೆ ವಾರ್ಷಿಕ ಹಣಕಾಸು ಅಂದಾಜುಗಳನ್ನು ಮತ್ತು ವಾರ್ಷಿಕ ಲೆಕ್ಕಪತ್ರಗಳನ್ನು ಮತ್ತು ಜಮಾ ಖರ್ಚು ಪಟ್ಟಿಯನ್ನು ಮಂಡಿಸಲು ಜವಾಬ್ದಾರನಾಗಿರತಕ್ಕದ್ದು.

(4) ಅವರು, ಸ್ವಯಂ ಅಥವಾ ತಾವು ಲಿಖಿತದಲ್ಲಿ ಅಧಿಕಾರ ನೀಡಿ ವಿಶ್ವವಿದ್ಯಾನಿಲಯದ ಯಾವೊಬ್ಬ ಅಧಿಕಾರಿಯ ಮೂಲಕವೇ ಆಗಲಿ, ವಿದ್ಯಾವಿಷಯಕ ಪರಿಷತ್ತು, ಸಂಶೋಧನಾ ಪರಿಷತ್ತು, ವಿಸ್ತರಣಾ ಶಿಕ್ಷಣ ಪರಿಷತ್ತುಗಳನ್ನು ಜಾರಿಗೆ ತರಲು ಮತ್ತು ಕಾರ್ಯಗತಗೊಳಿಸಲು ಅವಶ್ಯವಾಗಬಹುದಾದಂಥ ಎಲ್ಲಾ ಕಾರ್ಯಗಳನ್ನು ನೆರವೇರಿಸತಕ್ಕದ್ದು.

(5) ಕುಲಪತಿಯು, ತ್ವರಿತಕ್ರಮವು ಅಗತ್ಯವೆಂದು ಅವರು ಅಭಿಪ್ರಾಯಪಡುವ ಯಾವುದೇ ತುರ್ತು ಸಂದರ್ಭದಲ್ಲಿ ತಾವು ಅವಶ್ಯವೆಂದು ಭಾವಿಸುವಂಥ ಕ್ರಮವನ್ನು ತೆಗೆದುಕೊಳ್ಳತಕ್ಕದ್ದು ಮತ್ತು ಆ ತರುವಾಯ ಆದಷ್ಟು ಬೇಗನೆ ಆ ವಿಷಯದ ಬಗ್ಗೆ ಸಾಮಾನ್ಯವಾಗಿ ವ್ಯವಹರಿಸುವಂಥ ಪ್ರಾಧಿಕಾರಕ್ಕೆ ಅಥವಾ ನಿಕಾಯಕ್ಕೆ ಹಾಗೆ ತೆಗೆದುಕೊಂಡ ಕ್ರಮದ ಬಗ್ಗೆ ವರದಿ ಮಾಡತಕ್ಕದ್ದು:

ಪರಂತು, ಕುಲಪತಿಯು ತೆಗೆದುಕೊಂಡ ಕ್ರಮವನ್ನು ಸಂಬಂಧಪಟ್ಟ ಪ್ರಾಧಿಕಾರ ಅಥವಾ ನಿಕಾಯವು ಅನುಮೋದಿಸದಿದ್ದರೆ, ಅವರು ಆ ವಿಷಯವನ್ನು ಕುಲಾಧಿಪತಿಗೆ ಒಪ್ಪಿಸಬಹುದು. ಆ ಬಗ್ಗೆ ಕುಲಾಧಿಪತಿಗಳ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಮತ್ತು ಪರಂತು, ಈ ಉಪ-ಪ್ರಕರಣದ ಅಡಿಯಲ್ಲಿ ಕುಲಪತಿಯ ವರದಿಯ ಆಧಾರದ ಮೇಲೆ ಪ್ರಾಧಿಕಾರ ಅಥವಾ ನಿಕಾಯದ ತೀರ್ಮಾನದಿಂದ ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವ ಯಾವೊಬ್ಬ ವ್ಯಕ್ತಿಯು ಬಾಧಿತನಾದರೆ, ಆ ವ್ಯಕ್ತಿಯು ತನಗೆ ತೀರ್ಮಾನವನ್ನು ತಿಳಿಸಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕುಲಾಧಿಪತಿಯ ಮುಂದೆ ಅಪೀಲು ಸಲ್ಲಿಸಬಹುದು ಮತ್ತು ಅಂಥ ಅಪೀಲಿನ ಮೇಲೆ ಕುಲಾಧಿಪತಿಯ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಅಲ್ಲದೇ ಪರಂತು, ಈ ಉಪ-ಪ್ರಕರಣದ ಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ವಿಶ್ವವಿದ್ಯಾನಿಲಯದ ನೌಕರರ ವೇತನ ಶ್ರೇಣಿಯನ್ನು ಪರಿಷ್ಕರಿಸಲು ಅಥವಾ ಕಾಲೇಜಿಗೆ ಸಂಯೋಜನೆ ಅಥವಾ ಶಿಕ್ಷಣ ವ್ಯಾಸಂಗ ಕ್ರಮಕ್ಕೆ ಮಂಜೂರು ಮಾಡಲು ಚಲಾಯಿಸತಕ್ಕದ್ದಲ್ಲ ಮತ್ತು ಈ ಉಪಪ್ರಕರಣದ ಅಡಿಯಲ್ಲಿ ಅಧಿಕಾರಗಳನ್ನು ಚಲಾಯಿಸಿ ಪರಿನಿಯಮಗಳು ಮತ್ತು ವಿನಿಯಮಗಳನ್ನು ರಚಿಸಿದರೆ, ಅವು ಈ ಅಧಿನಿಯಮದ ಸಂಬಂಧಪಟ್ಟ ಉಪಬಂಧಗಳ ಅಡಿಯಲ್ಲಿ ಕುಲಾಧಿಪತಿಯ ಅನುಮೋದನೆಗೆ ಒಳಪಟ್ಟಿರತಕ್ಕದ್ದು.

(6) ಹಿಂದಿನ ಉಪ-ಪ್ರಕರಣಗಳ ಉಪಬಂಧಗಳಿಗೆ ಒಳಪಟ್ಟು, ಕುಲಪತಿಯು, ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಉಪಾಧ್ಯಾಯರು ಮತ್ತು ಇತರೆ ನೌಕರರ ನೇಮಕಾತಿ, ಅಮಾನತ್ತು ಮತ್ತು ವಜಾ ಮಾಡುವುದಕ್ಕೆ ಸಂಬಂಧಪಟ್ಟಂತೆ ಮಂಡಳಿಯ ಆದೇಶಗಳನ್ನು ಆಚರಣೆಗೆ ತರತಕ್ಕದ್ದು.

(7) ಕುಲಪತಿಯು, ವಿಶ್ವವಿದ್ಯಾನಿಲಯದ ಸರಿಯಾದ ಆಡಳಿತ ನಿರ್ವಹಣೆಗೆ ಜವಾಬ್ದಾರರಾಗಿರತಕ್ಕದ್ದು ಮತ್ತು ಬೋಧನೆ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣದ ನಿಕಟ ಸಮನ್ವಯ ಮತ್ತು ಸಮ್ಮಿಲನ ಸಾಧನೆಗೆ ಜವಾಬ್ದಾರನಾಗಿರತಕ್ಕದ್ದು.

(8) ಕುಲಪತಿಯು, ಪರಿನಿಯಮಗಳು ಮತ್ತು ವಿನಿಯಮಗಳ ಮೂಲಕ ನಿಯಮಿಸಬಹುದಾದಂಥ ಇತರೆ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

**15. ಕುಲಪತಿಯ ಹುದ್ದೆಯು ಖಾಲಿ ಇರುವ ಸಮಯದಲ್ಲಿ ಕಾರ್ಯ ವ್ಯವಸ್ಥೆ.-** (1) ರಜೆ, ಅನಾರೋಗ್ಯದಿಂದಾಗಿ ಅಥವಾ ತನ್ನ ಪದಾವಧಿಯು ಮುಕ್ತಾಯವಾದ ಕಾರಣವನ್ನು ಹೊರತುಪಡಿಸಿ ಇತರೆ ಕಾರಣದಿಂದಾಗಿ ಅಥವಾ ಕುಲಪತಿಯವರು ಗೈರುಹಾಜರಿಯಾಗಿರುವ ಕಾರಣದಿಂದಾಗಿ ಅಥವಾ ಅನ್ಯಥಾ ತಮ್ಮ ಅಧಿಕಾರಗಳನ್ನು ಅಥವಾ ಪ್ರಕಾರ್ಯಗಳನ್ನು ನೆರವೇರಿಸಲು ತಾತ್ಕಾಲಿಕವಾಗಿ ಅಸಮರ್ಥರಾದ ಕಾರಣಕ್ಕಾಗಿ ಕುಲಪತಿಯ ಹುದ್ದೆಯು ತಾತ್ಕಾಲಿಕವಾಗಿ ಖಾಲಿಯಾದಲ್ಲಿ, ಡೀನ್ ಅವರು, ಕುಲಪತಿಯಾಗಿ ಕಾರ್ಯನಿರ್ವಹಿಸಲು ಒಬ್ಬ ವ್ಯಕ್ತಿಯನ್ನು ನೇಮಕ ಮಾಡುವವರೆಗೆ ಅಥವಾ ಸಂದರ್ಭಾನುಸಾರ ಕುಲಪತಿಯು ಕರ್ತವ್ಯಕ್ಕೆ ಹಿಂತಿರುಗುವವರೆಗೆ, ತನ್ನ ಅಧಿಕಾರಗಳಿಗೆ ಹೆಚ್ಚುವರಿಯಾಗಿ ಕುಲಪತಿಯ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು. ಡೀನ್ ಅವರ ಗೈರುಹಾಜರಿಯಲ್ಲಿ, ಮಂಡಳಿಯು, ಸಾಧ್ಯವಾದಷ್ಟು ಬೇಗನೆ ಮತ್ತು ಕುಲಾಧಿಪತಿಯ ಅನುಮೋದನೆಗೆ ಒಳಪಟ್ಟು, ಕುಲಪತಿಯ ಹುದ್ದೆಯ ಕರ್ತವ್ಯಗಳನ್ನು ಮುಂದುವರಿಸಿಕೊಂಡು ಹೋಗುವುದಕ್ಕಾಗಿ ತಾನು ಸೂಕ್ತವೆಂದು ಭಾವಿಸಬಹುದಾದಂಥ, ವ್ಯವಸ್ಥೆಗಳನ್ನು ಮಾಡತಕ್ಕದ್ದು ಮತ್ತು ಅಂಥ ವ್ಯವಸ್ಥೆಗಳನ್ನು ಮಾಡುವವರೆಗೆ, ಈ ಉದ್ದೇಶಕ್ಕಾಗಿ ಕುಲಾಧಿಪತಿಯವರು ನಾಮನಿರ್ದೇಶಿಸಬಹುದಾದಂಥ ವಿಶ್ವವಿದ್ಯಾನಿಲಯದ ಅಧಿಕಾರಿಯು, ಕುಲಪತಿಯ ಪ್ರಸಕ್ತ ಕರ್ತವ್ಯಗಳನ್ನು ನೆರವೇರಿಸಿಕೊಂಡು ಹೋಗತಕ್ಕದ್ದು.

**16. ಲೆಕ್ಕನಿಯಂತ್ರಕ.-** ಲೆಕ್ಕನಿಯಂತ್ರಕನು, ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಹಾಗೂ ರಾಜ್ಯಸರ್ಕಾರದಿಂದ ಶಿಫಾರಸ್ಸು ಮಾಡಲಾದ ಮೂವರ ಹೆಸರುಗಳ ಪಟ್ಟಿಯಿಂದ ಮಂಡಳಿಯು ಆಯ್ಕೆ ಮಾಡಿದ ಆಧಾರದ ಮೇಲೆ ಕುಲಪತಿಯವರಿಂದ ನೇಮಕ ಮಾಡಿದವನಾಗಿರತಕ್ಕದ್ದು.

(2) ಲೆಕ್ಕ ನಿಯಂತ್ರಕನು, ಮೂರು ವರ್ಷಗಳ ಅವಧಿಗಾಗಿ ಅಧಿಕಾರ ಹೊಂದಿರತಕ್ಕದ್ದು ಮತ್ತು ಮೂರು ವರ್ಷಗಳ ಮುಂದುವರೆದ ಕಾಲಾವಧಿಯವರೆಗೆ ಮರುನೇಮಕಕ್ಕೆ ಅರ್ಹನಾಗಿರತಕ್ಕದ್ದು:

ಪರಂತು, ಲೆಕ್ಕನಿಯಂತ್ರಕನೆಂದು ನೇಮಕಗೊಂಡ ವ್ಯಕ್ತಿಯು, ತನ್ನ ಪದಾವಧಿಯಲ್ಲಿ ತನ್ನ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳಂತೆ ಸೇವಾ ನಿವೃತ್ತಿಯ ವಯಸ್ಸನ್ನು ಹೊಂದಿದ್ದಲ್ಲಿ ಪದದಿಂದ ನಿವೃತ್ತಿಯಾಗತಕ್ಕದ್ದು.

(3) ಲೆಕ್ಕ ನಿಯಂತ್ರಕನಿಗೆ ನೀಡಲಾಗುವ ವೇತನ ಮತ್ತು ಭತ್ಯೆಗಳು ಮತ್ತು ಇತರೆ ಸೇವಾ ಷರತ್ತುಗಳು, ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

(4) ಲೆಕ್ಕನಿಯಂತ್ರಕನು, ವಿಶ್ವವಿದ್ಯಾನಿಲಯದ ಸ್ವತ್ತು ಮತ್ತು ಹೂಡಿಕೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಅದರ ಹಣಕಾಸು ನೀತಿಗೆ ಸಂಬಂಧಿಸಿದಂತೆ ಸಲಹೆ ನೀಡತಕ್ಕದ್ದು. ಅವನು, ವಿಶ್ವವಿದ್ಯಾನಿಲಯದ ವಾರ್ಷಿಕ ಹಣಕಾಸು ಅಂದಾಜುಗಳ ಮತ್ತು ವಾರ್ಷಿಕ ಲೆಕ್ಕಪತ್ರಗಳ ಮತ್ತು ಜಮಾ ಖರ್ಚು ಪಟ್ಟಿಯ ತಯಾರಿಕೆಯೂ ಸೇರಿದಂತೆ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳಿಗೆ ಜವಾಬ್ದಾರನಾಗಿರತಕ್ಕದ್ದು.

(5) ಲೆಕ್ಕನಿಯಂತ್ರಕನು,-

(ಎ) ರಾಜಸ್ವದ ಸಂಗ್ರಹಣೆಯ ಪ್ರಗತಿಯನ್ನು ಗಮನಿಸತಕ್ಕದ್ದು ಮತ್ತು ಬಳಸತಕ್ಕ ವಸೂಲಿ ವಿಧಾನದ ಬಗ್ಗೆ ಸಲಹೆ ನೀಡತಕ್ಕದ್ದು;

(ಬಿ) ನಗದು ಮತ್ತು ಬ್ಯಾಂಕ್ ಶಿಲ್ಕು ಮತ್ತು ಬಂಡವಾಳ ಹೂಡಿಕೆಗಳ ಮೇಲೆ ನಿರಂತರ ಗಮನವಿಡತಕ್ಕದ್ದು;

(ಸಿ) ಮಂಡಳಿಯಿಂದ ಅನುಮೋದಿತವಾದಂಥ ಹಣಕಾಸು ಅಂದಾಜುಗಳಲ್ಲಿ ಅಧಿಕಾರ ನೀಡಿರದ ಯಾವುದೇ ವೆಚ್ಚವನ್ನು ವಿಶ್ವವಿದ್ಯಾನಿಲಯವು ಮಾಡದಂತೆ ನೋಡಿಕೊಳ್ಳತಕ್ಕದ್ದು;

(ಡಿ) ಯಾವುದೇ ಪರಿನಿಯಮದ ನಿಬಂಧನೆಗಳ ಮೂಲಕ ಸಮರ್ಥಿತವಾಗಿರದ ಅಥವಾ ಅದಕ್ಕಾಗಿ ಪರಿನಿಯಮದ ಮೂಲಕ ಉಪಬಂಧವನ್ನು ಮಾಡುವ ಅಗತ್ಯವಿದ್ದು ಆದರೆ, ಮಾಡಿರದ ಯಾವುದೇ ವೆಚ್ಚಕ್ಕೂ ಅವಕಾಶ ಕೊಡಕೂಡದು;

(ಇ) ಯಾವುದೇ ಅನಧಿಕೃತ ವೆಚ್ಚ ಅಥವಾ ಇತರೆ ಹಣಕಾಸು ಅಸಮರ್ಪಕತೆ ಉಂಟಾದಲ್ಲಿ ಅದರ ಬಗ್ಗೆ ಕುಲಪತಿಯವರ ಗಮನ ಸೆಳೆಯತಕ್ಕದ್ದು ಮತ್ತು ತಪ್ಪಿತಸ್ಥ ವ್ಯಕ್ತಿಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವಂತೆ ಸಲಹೆ ನೀಡತಕ್ಕದ್ದು;

(ಎಫ್) ಕಟ್ಟಡಗಳು, ಭೂಮಿ, ಪೀಠೋಪಕರಣ ಮತ್ತು ಸಾಧನಸಲಕರಣೆಗಳ ರಿಜಿಸ್ಟರುಗಳನ್ನು ತಹಲ್‌ವರೆಗೆ ನಿರ್ವಹಿಸಲಾಗಿದೆಯೇ ಮತ್ತು ವಿಶ್ವವಿದ್ಯಾನಿಲಯದ ಎಲ್ಲಾ ಕಚೇರಿಗಳು, ಪ್ರಯೋಗಾಲಯಗಳು, ಕಾಲೇಜುಗಳು ಮತ್ತು ಸಂಸ್ಥೆಗಳು ಸಾಧನ ಸಲಕರಣೆಗಳು ಮತ್ತು ಇತರ ಬಳಕೆಯ ಸಾಮಗ್ರಿಗಳ ಸಂಬಂಧದಲ್ಲಿ ದಾಸ್ತಾನು ಪರಿಶೀಲನೆಯನ್ನು ನಡೆಸಲಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

(ಜಿ) ತನ್ನ ಅಧಿಕಾರಗಳನ್ನು ಚಲಾಯಿಸಲು, ತನ್ನ ಪ್ರಕಾರ್ಯಗಳನ್ನು ನಿರ್ವಹಿಸಲು ಅಥವಾ ತನ್ನ ಕರ್ತವ್ಯಗಳನ್ನು ನೆರವೇರಿಸಲು ತಾನು ಅವಶ್ಯಕವೆಂದು ಪರಿಗಣಿಸಬಹುದಾದಂತೆ ಯಾವುದೇ ಮಾಹಿತಿ ಅಥವಾ ವಿವರಣೆಗಳನ್ನು ವಿಶ್ವವಿದ್ಯಾನಿಲಯವು ನಿರ್ವಹಿಸುತ್ತಿರುವ ಯಾವುದೇ ಕಚೇರಿ, ಪ್ರಯೋಗಾಲಯ, ಕಾಲೇಜು ಅಥವಾ ಸಂಸ್ಥೆಯಿಂದ ತರಿಸಿಕೊಳ್ಳತಕ್ಕದ್ದು.

(5) ಲೆಕ್ಕನಿಯಂತ್ರಕನ ಪದವು ಖಾಲಿಯಾದಾಗ ಅಥವಾ ಅನಾರೋಗ್ಯ ಅಥವಾ ಗೈರುಹಾಜರಿ ಅಥವಾ ಇತರೆ ಯಾವುದೇ ಕಾರಣದಿಂದಾಗಿ ತನ್ನ ಅಧಿಕಾರಗಳನ್ನು ಚಲಾಯಿಸಲು, ಪ್ರಕಾರ್ಯಗಳನ್ನು ನಿರ್ವಹಿಸಲು ತನ್ನ ಪದದ ಕರ್ತವ್ಯಗಳನ್ನು ನಿರ್ವಹಿಸಲು ವಿಫಲನಾದಲ್ಲಿ, ಲೆಕ್ಕನಿಯಂತ್ರಕನ ಅಧಿಕಾರಗಳು, ಪ್ರಕಾರ್ಯಗಳು ಮತ್ತು ಕರ್ತವ್ಯಗಳನ್ನು ಈ ಉದ್ದೇಶಕ್ಕಾಗಿಯೇ ಕುಲಪತಿಯು ನಿಯಮಿಸಬಹುದಾದಂಥ ವ್ಯಕ್ತಿಯು ಚಲಾಯಿಸತಕ್ಕದ್ದು, ನಿರ್ವಹಿಸತಕ್ಕದ್ದು ಮತ್ತು ನೆರವೇರಿಸತಕ್ಕದ್ದು.

**17. ರಿಜಿಸ್ಟ್ರಾರ್.-** (1) ರಿಜಿಸ್ಟ್ರಾರನು, ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ಮಂಡಲಿಯ ಅನುಮೋದನೆಯೊಂದಿಗೆ ಕುಲಪತಿಯಿಂದ ನೇಮಕಗೊಳ್ಳತಕ್ಕದ್ದು.

(2) ರಿಜಿಸ್ಟ್ರಾರನು,-

(i) ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕನ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಪಶುವೈದ್ಯಕೀಯ ಮತ್ತು ಪಶು ಮತ್ತು ಮೀನುಗಾರಿಕೆ ವಿಜ್ಞಾನ ಕ್ಷೇತ್ರದಲ್ಲಿ ವಿದ್ವಾಂಸರಾಗಿರತಕ್ಕದ್ದು; ಅಥವಾ

(ii) ಸರ್ಕಾರದ ಉಪ-ಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ರಾಜ್ಯ ಸರ್ಕಾರದ ಒಬ್ಬ ಅಧಿಕಾರಿಯಾಗಿರತಕ್ಕದ್ದು.

(3) ರಿಜಿಸ್ಟ್ರಾರನ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಮಂಡಲಿಯು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ರಿಜಿಸ್ಟ್ರಾರನು, ವಿದ್ಯಾವಿಷಯಕ ಪರಿಷತ್ತಿನ ಮತ್ತು ಮಂಡಳಿಯ ಪದನಿಮಿತ್ತ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ವ್ಯವಹಾರವನ್ನು ನಡೆಸುವುದಕ್ಕಾಗಿ ಅವಶ್ಯವಿರಬಹುದಾದಂಥ ಎಲ್ಲಾ ಮಾಹಿತಿಯನ್ನು ಅವರ ಮುಂದೆ ಇಡಲು ಬದ್ಧನಾಗಿರತಕ್ಕದ್ದು. ಅವನು, ವಿಶ್ವವಿದ್ಯಾನಿಲಯಕ್ಕೆ ಪ್ರವೇಶ ಪಡೆಯುವುದಕ್ಕಾಗಿನ ಅರ್ಜಿಗಳನ್ನು ಸ್ವೀಕರಿಸತಕ್ಕದ್ದು ಮತ್ತು ಅವಶ್ಯವಿರಬಹುದಾದಂತೆ ಎಲ್ಲಾ ವ್ಯಾಸಂಗ ಕ್ರಮಗಳು, ಪಠ್ಯ ವಿಷಯಗಳು ಮತ್ತು ಇತರೆ ಮಾಹಿತಿಗಳ ಖಾಯಂ ದಾಖಲೆಯನ್ನು ಇಡತಕ್ಕದ್ದು. ರಿಜಿಸ್ಟ್ರರನು, ನಿಯಮಿಸಬಹುದಾದಂತೆ ಪರೀಕ್ಷೆಗಳನ್ನು ನಡೆಸುವುದಕ್ಕಾಗಿ ವ್ಯವಸ್ಥೆಗಳನ್ನು ಮಾಡಲು ಮತ್ತು ಅದರಡಿಯಲ್ಲಿ ಅವಶ್ಯಕವಿರುವ ಇತರ ಎಲ್ಲಾ ವ್ಯವಸ್ಥೆಗಳನ್ನು ಮಾಡಲು ಜವಾಬ್ದಾರನಾಗಿರತಕ್ಕದ್ದು ಮತ್ತು ಅದಕ್ಕೆ ಸಂಬಂಧಪಟ್ಟ ಎಲ್ಲಾ ಕಾರ್ಯವಿಧಾನಗಳನ್ನು ಕ್ರಮಬದ್ಧವಾಗಿ ಕಾರ್ಯಗತಗೊಳಿಸುವುದಕ್ಕೆ ಜವಾಬ್ದಾರನಾಗಿರತಕ್ಕದ್ದು. ಅವನು, ವಿಶ್ವವಿದ್ಯಾನಿಲಯವು

ನಿರ್ವಹಿಸುತ್ತಿರುವ ಯಾವುದೇ ಕಚೇರಿ, ಪ್ರಯೋಗಾಲಯ, ಕಾಲೇಜು ಅಥವಾ ಸಂಸ್ಥೆಯಿಂದ ತನ್ನ ಅಧಿಕಾರಗಳನ್ನು ಚಲಾಯಿಸಲು, ಪ್ರಕಾರ್ಯಗಳನ್ನು ನಿರ್ವಹಿಸಲು ಅಥವಾ ಕರ್ತವ್ಯಗಳನ್ನು ನೆರವೇರಿಸಲು ತಾನು ಅವಶ್ಯಕವೆಂದು ಪರಿಗಣಿಸಬಹುದಾದ ಯಾವುದೇ ಮಾಹಿತಿ ಅಥವಾ ವಿವರಣೆಗಳನ್ನು ತರಿಸಿಕೊಳ್ಳಬಹುದು.

(5) ರಿಜಿಸ್ಟ್ರಾರ್ ತನ್ನ ಪದವು ಖಾಲಿಯಾಗಿದ್ದಾಗ ಅಥವಾ ಅನಾರೋಗ್ಯ, ಗೈರುಹಾಜರಿ ಅಥವಾ ಯಾವುದೇ ಇತರೆ ಕಾರಣದಿಂದಾಗಿ, ತನ್ನ ಪದದ ಅಧಿಕಾರಗಳನ್ನು ಚಲಾಯಿಸಲು, ಪ್ರಕಾರ್ಯಗಳನ್ನು ನಿರ್ವಹಿಸಲು ಮತ್ತು ಕರ್ತವ್ಯಗಳನ್ನು ನೆರವೇರಿಸಲು ಅಸಮರ್ಥನಾದಲ್ಲಿ ಈ ಉದ್ದೇಶಕ್ಕಾಗಿ ಕುಲಪತಿಯವರು ನೇಮಿಸಬಹುದಾದಂಥ ವ್ಯಕ್ತಿಯು ರಿಜಿಸ್ಟ್ರಾರ್ ಅವರ ಪದದ ಅಧಿಕಾರಗಳು, ಪ್ರಕಾರ್ಯಗಳು ಮತ್ತು ಕರ್ತವ್ಯಗಳನ್ನು ಚಲಾಯಿಸತಕ್ಕದ್ದು, ನಿರ್ವಹಿಸತಕ್ಕದ್ದು ಮತ್ತು ನೆರವೇರಿಸತಕ್ಕದ್ದು.

(6) ರಿಜಿಸ್ಟ್ರಾರನು,

(i) ಹಣಕಾಸು ಸಮಿತಿ ಮತ್ತು ಮಂಡಲಿಯ ತೀರ್ಮಾನಕ್ಕನುಸಾರವಾಗಿ ನ್ಯಾಸದ ಮತ್ತು ದತ್ತಿಯ ಸ್ವತ್ತುಗಳೂ ಸೇರಿದಂತೆ ವಿಶ್ವವಿದ್ಯಾನಿಲಯದ ಸ್ವತ್ತುಗಳನ್ನು ಮತ್ತು ಹೂಡಿಕೆಗಳನ್ನು ನಿರ್ವಹಿಸತಕ್ಕದ್ದು;

(ii) ವಿಶ್ವವಿದ್ಯಾನಿಲಯದ ದಾಖಲೆಗಳ, ಸಾಮಾನ್ಯ ಮೊಹರಿನ ಮತ್ತು ಮಂಡಳಿಯು ಅವನ ವಶಕ್ಕೆ ಒಪ್ಪಿಸುವಂಥ ಇತರೆ ಸ್ವತ್ತುಗಳ ಅಭಿರಕ್ಷಕನಾಗಿರತಕ್ಕದ್ದು;

(iii) ಮಂಡಳಿಯ, ವಿದ್ಯಾವಿಷಯಕ ಪರಿಷತ್ತಿನ, ವ್ಯಾಸಂಗ ವಿಭಾಗಗಳ, ಅಧ್ಯಯನಗಳ ಮಂಡಳಿಯ, ಪರೀಕ್ಷಕರ ಮಂಡಳಿಯ ಮತ್ತು ಯೋಜನಾ ಮಂಡಳಿಯ ಮತ್ತು ವಿಶ್ವವಿದ್ಯಾನಿಲಯದ ಪ್ರಾಧಿಕಾರದಿಂದ ನೇಮಕಗೊಂಡ ಯಾವುದೇ ಸಮಿತಿಯ ಸಭೆಗಳನ್ನು ಕರೆಯುವ ನೋಟೀಸುಗಳನ್ನು ಹೊರಡಿಸತಕ್ಕದ್ದು;

(7) ರಿಜಿಸ್ಟ್ರಾರನು, ಮಂಡಳಿಯು ನಿರ್ದಿಷ್ಟಪಡಿಸಬಹುದಾದಂತೆ ಮತ್ತು ಕುಲಪತಿಯು ಕಾಲಕಾಲಕ್ಕೆ ಅವನಿಗೆ ವಹಿಸಲಾದಂಥ ಇತರೆ ಅಧಿಕಾರಗಳನ್ನು ಚಲಾಯಿಸತಕ್ಕದ್ದು, ಅಂಥ ಇತರೆ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಅಂಥ ಇತರೆ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ಗ್ರಂಥಪಾಲ.-** (1) ಗ್ರಂಥಪಾಲನು ಕುಲಪತಿಯವರಿಂದ ನೇಮಕಗೊಳ್ಳತಕ್ಕದ್ದು ಮತ್ತು ಅವನು ಗ್ರಂಥಾಲಯದ ಪ್ರಭಾರ ಹೊಂದಿರತಕ್ಕದ್ದು. ಅವನು, ಗ್ರಂಥಾಲಯಕ್ಕೆ ಸಂಬಂಧಪಟ್ಟ ಎಲ್ಲಾ ವಿಷಯಗಳ ಬಗ್ಗೆ ಕುಲಪತಿಯವರಿಗೆ ಉತ್ತರಿಸಲು ಜವಾಬ್ದಾರನಾಗಿರತಕ್ಕದ್ದು.

(2) ಗ್ರಂಥಪಾಲನಿಗೆ ನೀಡಲಾಗುವ ವೇತನ ಮತ್ತು ಭತ್ಯೆಗಳು ಮತ್ತು ಸೇವೆಯ ಇತರೆ ಷರತ್ತುಗಳು ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

**19. ಶಿಕ್ಷಣ ನಿರ್ದೇಶಕ (ಸ್ನಾತಕೋತ್ತರ ಅಧ್ಯಯನಗಳು).-** ಶಿಕ್ಷಣ ನಿರ್ದೇಶಕ (ಸ್ನಾತಕೋತ್ತರ ಅಧ್ಯಯನಗಳು), ವಿಶ್ವವಿದ್ಯಾನಿಲಯದ ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ಸ್ನಾತಕೋತ್ತರ ಪದವಿ ಶಿಕ್ಷಣ ಮತ್ತು ಬೋಧನೆ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣದ ಸಂಘಟನೆ ಹಾಗೂ ನಡೆಸುವಿಕೆಯ ಬಗ್ಗೆ ಜವಾಬ್ದಾರನಾಗಿರತಕ್ಕದ್ದು.

**20. ಸಂಶೋಧನಾ ನಿರ್ದೇಶಕ.-** (1) ಸಂಶೋಧನಾ ನಿರ್ದೇಶಕನು, ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ಮಂಡಳಿಯ ಅನುಮೋದನೆಯೊಂದಿಗೆ ಕುಲಪತಿಯಿಂದ ನೇಮಕಗೊಳ್ಳತಕ್ಕದ್ದು. ಅವನು, ಸಂಶೋಧನಾ ಕೇಂದ್ರಗಳ ಪ್ರಕಾರ್ಯಗಳನ್ನು ಯುಕ್ತ ರೀತಿಯಲ್ಲಿ ನಿರ್ವಹಿಸುವುದಕ್ಕೆ ಜವಾಬ್ದಾರನಾಗಿರತಕ್ಕದ್ದು ಮತ್ತು ಸಂಶೋಧನಾ ಕಾರ್ಯದಲ್ಲಿ ಸಹಕರಿಸತಕ್ಕದ್ದು ಮತ್ತು ನಿಯಮಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರೆ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(2) ಸಂಶೋಧನಾ ನಿರ್ದೇಶಕನಿಗೆ ನೀಡಲಾಗುವ ವೇತನ ಮತ್ತು ಸಂದಾಯ ಮಾಡಲಾಗುವ ಭತ್ಯೆಗಳು ಮತ್ತು ಇತರೆ ಸೇವಾ ಷರತ್ತುಗಳು ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

**21. ವಿಸ್ತರಣಾ ಶಿಕ್ಷಣ ನಿರ್ದೇಶಕರು.-** ವಿಸ್ತರಣಾ ಶಿಕ್ಷಣ ನಿರ್ದೇಶಕನು ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ಅವರನ್ನು ಮಂಡಲಿಯ ಅನುಮೋದನೆಯೊಂದಿಗೆ ಕುಲಪತಿಯು ನೇಮಕ ಮಾಡತಕ್ಕದ್ದು. ಅವನು, ಸಂಶೋಧನಾ ಕಾರ್ಯದ ಫಲಿತಾಂಶದ ಮೇಲೆ ವಿಸ್ತರಣಾ ಕೆಲಸದ ಕಾರ್ಯಕ್ರಮಗಳ ಯೋಜನೆಗಾಗಿ ಮತ್ತು ಕಾರ್ಯಾಚರಣೆಗಾಗಿ ಜವಾಬ್ದಾರನಾಗಿರತಕ್ಕದ್ದು ಮತ್ತು ನಿಯಮಿಸಬಹುದಾದಂಥ ಇತರೆ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(2) ವಿಸ್ತರಣಾ ಶಿಕ್ಷಣ ನಿರ್ದೇಶಕನಿಗೆ ಸಂದಾಯ ಮಾಡಬಹುದಾದ ವೇತನ ಮತ್ತು ಭತ್ಯೆ ಹಾಗೂ ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**22. ಡೀನ್.-** (1) ಡೀನ್, ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ಅವರನ್ನು ಮಂಡಳಿಯ ಅನುಮೋದನೆಯೊಂದಿಗೆ ಕುಲಪತಿಯು ನೇಮಕ ಮಾಡತಕ್ಕದ್ದು.

(2) ಡೀನ್ ಅವರಿಗೆ ಸಂದಾಯ ಮಾಡಬಹುದಾದ ವೇತನ ಮತ್ತು ಭತ್ಯೆ ಹಾಗೂ ಇತರೆ ಸೇವಾ ಷರತ್ತುಗಳು ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

(3) ಪ್ರತಿಯೊಬ್ಬ ಡೀನ್‌ರು, ತನ್ನ ನಿಯಂತ್ರಣದಲ್ಲಿರುವ ಕಾಲೇಜು ಅಥವಾ ಕಾಲೇಜುಗಳಿಗೆ ಸಂಬಂಧಪಟ್ಟ ಎಲ್ಲಾ ವಿಷಯಗಳಿಗಾಗಿ ಕುಲಪತಿಯವರಿಗೆ ಜವಾಬುದಾರರಾಗಿರತಕ್ಕದ್ದು.

(4) ಪ್ರತಿಯೊಬ್ಬ ಡೀನರು ತನ್ನ ನಿಯಂತ್ರಣದಲ್ಲಿರುವ ಕಾಲೇಜು ಅಥವಾ ಕಾಲೇಜುಗಳ ಸಂಘಟನೆ ಮತ್ತು ಬೋಧನಾ ಕ್ರಮ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣಕ್ಕಾಗಿ ಜವಾಬ್ದಾರನಾಗಿರತಕ್ಕದ್ದು.

(5) ಪ್ರತಿಯೊಬ್ಬ ಡೀನರು, ನಿಯಮಿಸಬಹುದಾದಂಥ ಇತರೆ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**23. ವಿಭಾಗಗಳ ಮುಖ್ಯಸ್ಥರು.-** (1) ಈ ಮುಂದಿನ ವಿಭಾಗಗಳ ಮುಖ್ಯಸ್ಥರು ಇರತಕ್ಕದ್ದು, ಎಂದರೆ:-

1. ಪ್ರಾಣಿ ವಿಜ್ಞಾನ ವಿಭಾಗದ ಮುಖ್ಯಸ್ಥ
2. ಡೈರಿ ವಿಜ್ಞಾನ ವಿಭಾಗದ ಮುಖ್ಯಸ್ಥ
3. ಪಶುವೈದ್ಯ ವಿಜ್ಞಾನ ವಿಭಾಗದ ಮುಖ್ಯಸ್ಥ
4. ಕೋಳಿ ಸಾಕಣೆ ವಿಜ್ಞಾನ ವಿಭಾಗದ ಮುಖ್ಯಸ್ಥ
5. ಮೀನುಗಾರಿಕೆ ವಿಜ್ಞಾನ ವಿಭಾಗದ ಮುಖ್ಯಸ್ಥ

(2) ವಿಭಾಗದ ಮುಖ್ಯಸ್ಥರು ಪೂರ್ಣಕಾಲಿಕ ಅಧಿಕಾರಿಗಳಾಗಿರತಕ್ಕದ್ದು ಮತ್ತು ಸಂಬಂಧಪಟ್ಟ ವಿಷಯಗಳಲ್ಲಿ ತಾಂತ್ರಿಕ ತರಬೇತಿ ಹೊಂದಿರತಕ್ಕದ್ದು ಮತ್ತು ಸಂಬಂಧಪಟ್ಟ ವಿಭಾಗಗಳ ಡೀನ್ ಮತ್ತು ಸಂಬಂಧಪಟ್ಟ ನಿರ್ದೇಶಕರಿಗೆ ಜವಾಬ್ದಾರನಾಗಿರತಕ್ಕದ್ದು ಮತ್ತು ನಿಯಮಿಸಬಹುದಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(3) ವಿಭಾಗಗಳ ಮುಖ್ಯಸ್ಥರಿಗೆ ಸಂದಾಯ ಮಾಡಲಾಗುವ ವೇತನ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**24. ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಪರಿನಿಯಮಗಳ ಮೂಲಕ ಉಪಬಂಧಿಸಲಾದುದನ್ನು ಹೊರತುಪಡಿಸಿ ಇತರೆ ಯಾವುದೇ ಪರಿಶ್ರಮ ಧನವನ್ನು ಸ್ವೀಕರಿಸತಕ್ಕದ್ದಲ್ಲ.-** ವಿಶ್ವವಿದ್ಯಾನಿಲಯದ ಅಧಿಕಾರಿಗಳಿಗೆ ತಮ್ಮ ವೇತನಗಳು, ಭತ್ಯೆಗಳು ಮತ್ತು ಇತರೆ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಪರಿನಿಯಮಗಳು ಅಥವಾ ಇತರೆ ಆದೇಶಗಳ ಮೂಲಕ ಉಪಬಂಧಿಸಿರಬಹುದಾದಂಥವುಗಳನ್ನುಳಿದು ವಿಶ್ವವಿದ್ಯಾನಿಲಯದಲ್ಲಿ ನಿರ್ವಹಿಸಲಾಗುವ ಯಾವುದೇ ಕಾರ್ಯಕ್ಕಾಗಿ ಯಾವುದೇ ಪರಿಶ್ರಮ ಧನವನ್ನು ಅವರು ನೀಡತಕ್ಕದ್ದಲ್ಲ ಇಲ್ಲವೇ ಅವರು ಸ್ವೀಕರಿಸತಕ್ಕದ್ದಲ್ಲ.

**25. ಇತರ ಅಧಿಕಾರಿಗಳು.-** 10ನೇ ಪ್ರಕರಣದ (12)ನೇ ಖಂಡದಲ್ಲಿ ಉಲ್ಲೇಖಿಸಲಾದ ವಿಶ್ವವಿದ್ಯಾನಿಲಯದ ಇತರೆ ಅಧಿಕಾರಿಗಳ ಅಧಿಕಾರಗಳು ಮತ್ತು ಕರ್ತವ್ಯಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - VI

## ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು

**26. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು.-** ಈ ಮುಂದಿನವು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(1) ವ್ಯವಸ್ಥಾಪನಾ ಮಂಡಳಿ

(2) ವಿದ್ಯಾವಿಷಯಕ ಪರಿಷತ್ತು

(3) ಸಂಶೋಧನಾ ಪರಿಷತ್ತು

(4) ವಿಸ್ತರಣಾ ಶಿಕ್ಷಣ ಪರಿಷತ್ತು

(5) ಹಣಕಾಸು ಸಮಿತಿ

(6) ಅಧ್ಯಯನಗಳ ಮಂಡಳಿ ಮತ್ತು

(7) ಪರಿನಿಯಮಗಳ ಮೂಲಕ, ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು ಎಂಬುದಾಗಿ ಘೋಷಿಸಿರ ಬಹುದಾದಂಥ ವಿಶ್ವವಿದ್ಯಾನಿಲಯದ ಇತರೆ ನಿಕಾಯಗಳು.

**27. ವ್ಯವಸ್ಥಾಪನಾ ಮಂಡಳಿಯ ರಚನೆ.-** (1) ಕುಲಾಧಿಪತಿಯವರು, ಮೊದಲನೇ ಕುಲಪತಿಯವರನ್ನು ನೇಮಿಸಿದ ತರುವಾಯ, ಸಾಧ್ಯವಾದಷ್ಟು ಬೇಗನೇ, 13ನೇ ಪ್ರಕರಣದ (4)ನೇ ಉಪಪ್ರಕರಣದ ಎರಡನೇ ಪರಂತುಕದ ಅಡಿಯಲ್ಲಿ ವ್ಯವಸ್ಥಾಪನಾ ಮಂಡಳಿಯನ್ನು ರಚಿಸಲು ಕ್ರಮಕೈಗೊಳ್ಳತಕ್ಕದ್ದು.

(2) ಮಂಡಳಿಯು ಈ ಮುಂದಿನ ಸದಸ್ಯರುಗಳನ್ನು ಒಳಗೊಳ್ಳಕ್ಕದ್ದು, ಎಂದರೆ:-

### (ಎ) ಪದನಿಮಿತ್ತ ಸದಸ್ಯರು

(i) ಕುಲಪತಿ, ಅಧ್ಯಕ್ಷರಾಗಿರತಕ್ಕದ್ದು;

(ii) ಪಶುಸಂಗೋಪನೆ ಇಲಾಖೆ ಪ್ರಭಾರದಲ್ಲಿನ ಕರ್ನಾಟಕ ಸರ್ಕಾರದ ಕಾರ್ಯದರ್ಶಿ ಅಥವಾ ಜಂಟಿ ಕಾರ್ಯದರ್ಶಿಯ ದರ್ಜೆಗೆ ಕಡಿಮೆ ಇಲ್ಲದ ದರ್ಜೆಯ ಅವರ ನಾಮನಿರ್ದೇಶಿತರು;

(iii) ಮೀನುಗಾರಿಕೆ ಇಲಾಖೆ ಪ್ರಭಾರದಲ್ಲಿರುವ ಕರ್ನಾಟಕ ಸರ್ಕಾರದ ಕಾರ್ಯದರ್ಶಿ ಅಥವಾ ಜಂಟಿ ಕಾರ್ಯದರ್ಶಿಯ ದರ್ಜೆಗೆ ಕಡಿಮೆ ಇಲ್ಲದ ದರ್ಜೆಯ ಅವರ ನಾಮನಿರ್ದೇಶಿತರು;

(iv) ಹಣಕಾಸು ಇಲಾಖೆ ಪ್ರಭಾರದಲ್ಲಿರುವ ಕರ್ನಾಟಕ ಸರ್ಕಾರದ ಕಾರ್ಯದರ್ಶಿ ಅಥವಾ ಜಂಟಿ ಕಾರ್ಯದರ್ಶಿಯವರ ದರ್ಜೆಗೆ ಕಡಿಮೆ ಇಲ್ಲದ ದರ್ಜೆಯ ಅವರ ನಾಮನಿರ್ದೇಶಿತರು;

(v) ಕಾನೂನು ಇಲಾಖೆ ಪ್ರಭಾರದಲ್ಲಿರುವ ಕರ್ನಾಟಕ ಸರ್ಕಾರದ ಕಾರ್ಯದರ್ಶಿ ಅಥವಾ ಜಂಟಿ ಕಾರ್ಯದರ್ಶಿಯವರ ದರ್ಜೆಗೆ ಕಡಿಮೆ ಇಲ್ಲದ ದರ್ಜೆಯ ಅವರ ನಾಮನಿರ್ದೇಶಿತರು;

(vi) ಪಶುಸಂಗೋಪನೆ ಇಲಾಖೆ ನಿರ್ದೇಶಕರು;

(vii) ಮೀನುಗಾರಿಕೆ ಇಲಾಖೆ ನಿರ್ದೇಶಕರು;

(viii) ರಿಜಿಸ್ಟ್ರಾರ್ ಅವರು ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(ಬಿ) ಇತರ ಸದಸ್ಯರು

(i) ಪಶುವೈದ್ಯಕೀಯ ಮತ್ತು ಪಶು ಹಾಗೂ ಮೀನುಗಾರಿಕೆ ವಿಜ್ಞಾನ ಕ್ಷೇತ್ರ ಸಂಶೋಧನೆ, ಬೋಧನೆ ಮತ್ತು ವಿಸ್ತರಣಾ ಶಿಕ್ಷಣದಲ್ಲಿ ವಿಶೇಷ ಜ್ಞಾನ ಹೊಂದಿದ ಅಥವಾ ಪ್ರಾಯೋಗಿಕ ಅನುಭವ ಹೊಂದಿರುವ ಕುಲಾಧಿಪತಿಯವರಿಂದ ನಾಮನಿರ್ದೇಶಿತನಾದ ಒಬ್ಬ ವಿಜ್ಞಾನಿ;

(ii) ಕುಲಾಧಿಪತಿಯಿಂದ ನಾಮನಿರ್ದೇಶಿತನಾದ ಒಬ್ಬ ಪ್ರಗತಿಪರ ಜಾನುವಾರು ಸಾಕಣೆದಾರ;

(iii) ಕುಲಾಧಿಪತಿಯಿಂದ ನಾಮನಿರ್ದೇಶಿತನಾದ ಒಬ್ಬ ಪ್ರಗತಿಪರ ಮೀನುಗಾರ;

(iv) ಕುಲಾಧಿಪತಿಯಿಂದ ನಾಮನಿರ್ದೇಶಿತನಾದ, ಪಶುಸಂಗೋಪನೆ ಅಥವಾ ಮೀನುಗಾರಿಕೆಯೊಂದಿಗೆ ಸಂಬಂಧಪಟ್ಟ ಕೈಗಾರಿಕೆಗಳ ಒಬ್ಬ ಪ್ರತಿನಿಧಿ;

(v) ಕುಲಾಧಿಪತಿಯಿಂದ ನಾಮನಿರ್ದೇಶಿತಳಾದ ಒಬ್ಬ ಮಹಿಳಾ ಸಾಮಾಜಿಕ ಕಾರ್ಯಕರ್ತೆ;

(vi) ಕುಲಾಧಿಪತಿಯಿಂದ ನಾಮನಿರ್ದೇಶಿತನಾದ ಒಬ್ಬ ಶಿಕ್ಷಣತಜ್ಞ;

(vii) "ಭಾರತೀಯ ಕೃಷಿ ಸಂಶೋಧನಾ ಪರಿಷತ್ತಿ"ನ ಒಬ್ಬ ನಾಮನಿರ್ದೇಶಿತ;

(viii) ಕರ್ನಾಟಕ ಪಶುವೈದ್ಯಕೀಯ ಪರಿಷತ್ತಿನ ಅಧ್ಯಕ್ಷ;

ಪರಂತು, ರಾಜ್ಯ ಸರ್ಕಾರದ ಅಥವಾ ವಿಶ್ವವಿದ್ಯಾನಿಲಯದ ಉದ್ಯೋಗದಲ್ಲಿರುವ ಯಾವೊಬ್ಬ ವ್ಯಕ್ತಿಯೂ ವಿಶ್ವವಿದ್ಯಾನಿಲಯದ "ಇತರೆ ಸದಸ್ಯರು" ಎಂಬ ಪ್ರವರ್ಗದ ಅಡಿಯಲ್ಲಿ ನಾಮನಿರ್ದೇಶಿತನಾಗತಕ್ಕದ್ದಲ್ಲ.

(3) ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ ಮಂಡಳಿಯ ಇತರ ಸದಸ್ಯರ ಪದಾವಧಿಯು ಮೂರು ವರ್ಷಗಳಾಗಿರತಕ್ಕದ್ದು:

ಪರಂತು, ಖಾಲಿ ಸ್ಥಾನ ಭರ್ತಿಮಾಡಲೆಂದು ನಾಮನಿರ್ದೇಶಿತನಾಗುವ ಯಾವೊಬ್ಬ ಸದಸ್ಯನ ಪದಾವಧಿಯು, ಅವನ ಪೂರ್ವಾಧಿಕಾರಿಯ ಉಳಿದ ಪದಾವಧಿಯಾಗಿರತಕ್ಕದ್ದು;

ಮತ್ತು ಪರಂತು, ಯಾವೊಬ್ಬ ವ್ಯಕ್ತಿಯನ್ನು ಎರಡನೇ ಅವಧಿಗೆ ನಾಮನಿರ್ದೇಶಿಸತಕ್ಕದ್ದಲ್ಲ.

(4) ಮಂಡಳಿಯ ಆರು ಸದಸ್ಯರು ಮಂಡಳಿಯ ಸಭೆಗಾಗಿನ ಕೋರಂ ಆಗಿರತಕ್ಕದ್ದು.

(5) ಮಂಡಳಿಯ ಸದಸ್ಯರು, ನಿಯಮಿಸಬಹುದಾದಂಥ ದಿನಭತ್ಯೆ ಮತ್ತು ಪ್ರಯಾಣ ಭತ್ಯೆಗಳನ್ನು ಹೊರತುಪಡಿಸಿ ವಿಶ್ವವಿದ್ಯಾನಿಲಯದಿಂದ ಯಾವುದೇ ಪರಿಶ್ರಮ ಧನವನ್ನು ಸ್ವೀಕರಿಸಲು ಹಕ್ಕುಳ್ಳವರಾಗಿರತಕ್ಕದ್ದಲ್ಲ.

(6) ಈ ಅಧಿನಿಯಮದ ಕಾರ್ಯಾಚರಣೆಯ ಕಾರಣದಿಂದ ಮಂಡಳಿಯ ಸದಸ್ಯನಾಗಿರುವುದು ಮುಕ್ತಾಯವಾದ ಪ್ರತಿಯೊಬ್ಬ ವ್ಯಕ್ತಿಯು, ಮಂಡಳಿಯ ತನ್ನ ಸದಸ್ಯತ್ವದ ಕಾರಣದಿಂದಾಗಿ ಸದಸ್ಯನಾಗಿದ್ದಿರಬಹುದಾದ ವಿಶ್ವವಿದ್ಯಾನಿಲಯದ ಇತರ ಪ್ರಾಧಿಕಾರಗಳ ಸದಸ್ಯನಾಗಿರುವುದು ಮುಕ್ತಾಯವಾಗತಕ್ಕದ್ದು.

(7) ಮಂಡಳಿಗೆ ನಾಮನಿರ್ದೇಶಿತನಾದ ಯಾವೊಬ್ಬ ಸದಸ್ಯನು, ವಿಚಾರಣೆಯನ್ನು ನಡೆಸಿದ ತರುವಾಯ ಅವನು ದುರ್ವರ್ತನೆ, ದುರ್ನಡತೆಯ ಆಧಾರದ ಮೇಲೆ ಅಥವಾ ಅನ್ಯಥಾ ಕುಲಾಧಿಪತಿಯವರು ಯಾವುದೇ ಸಮಯದಲ್ಲಿ ಅಂಥ ಸದಸ್ಯತ್ವದಿಂದ ತೆಗೆದುಹಾಕುವುದಕ್ಕೆ ಗುರಿಯಾಗತಕ್ಕದ್ದು.

(8) ಮಂಡಲಿಯು, ವರ್ಷದಲ್ಲಿ ಕನಿಷ್ಠ ಎಂಟು ಸಭೆಗಳನ್ನಾದರೂ ನಡೆಸತಕ್ಕದ್ದು. ಎರಡು ನಿರಂತರ ಸಭೆಗಳ ನಡುವಣ ಅವಧಿಯು ಎಂಟು ವಾರಗಳನ್ನು ಮೀರತಕ್ಕದ್ದಲ್ಲ, ಕುಲಪತಿಯು ತುರ್ತು ಸಂದರ್ಭದಲ್ಲಿ ವಿಶೇಷ ಸಭೆಗಳನ್ನು ನಡೆಸಬಹುದು.

(9) ಕುಲಾಧಿಪತಿ ಅಥವಾ ರಾಜ್ಯ ಸರ್ಕಾರವು, ಆದೇಶದ ಮೂಲಕ, ತಾವು ನಿರ್ದಿಷ್ಟಪಡಿಸಬಹುದಾದಂಥ ಪರಿಶೀಲನಾಂಶಗಳ ಚರ್ಚೆಗೆ ಸಭೆಗಳನ್ನು ನಡೆಸಲು ನಿರ್ದೇಶಿಸಬಹುದು ಮತ್ತು ಕುಲಪತಿಯು, ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**28. ಮಂಡಲಿಯ ಅಧಿಕಾರಗಳು ಹಾಗೂ ಕರ್ತವ್ಯಗಳು.-** ಮಂಡಲಿಯು ಈ ಮುಂದಿನ ಅಧಿಕಾರಗಳನ್ನು ಹಾಗೂ ಕರ್ತವ್ಯಗಳನ್ನು ಚಲಾಯಿಸತಕ್ಕದ್ದು ಮತ್ತು ನಿರ್ವಹಿಸತಕ್ಕದ್ದು, ಎಂದರೆ:-

(ಎ) ಕುಲಪತಿಯವರು ಸಲ್ಲಿಸಿದ ಹಣಕಾಸು ಅಂದಾಜುಗಳನ್ನು ಅನುಮೋದಿಸುವುದು;

(ಬಿ) ವಿಶ್ವವಿದ್ಯಾನಿಲಯದ ಸ್ವತ್ತು ಹಾಗೂ ನಿಧಿಗಳನ್ನು ಹೊಂದಿರುವುದು ಮತ್ತು ನಿಯಂತ್ರಿಸುವುದು ಹಾಗೂ ವಿಶ್ವವಿದ್ಯಾನಿಲಯದ ಪರವಾಗಿ ಯಾವುದೇ ಸಾಮಾನ್ಯ ಅಥವಾ ವಿಶೇಷ ಸೂಚನೆಗಳನ್ನು ಹೊರಡಿಸುವುದು;

(ಸಿ) ವಿಶ್ವವಿದ್ಯಾನಿಲಯದ ಪರವಾಗಿ ಯಾವದೇ ಚರ ಅಥವಾ ಸ್ಥಿರ ಸ್ವತ್ತಿನ ವರ್ಗಾವಣೆಯನ್ನು ಸ್ವೀಕರಿಸುವುದು ಮತ್ತು ವಿಲೆ ಮಾಡುವುದು;

(ಡಿ) ವಿಶ್ವವಿದ್ಯಾನಿಲಯವು ನಿರ್ದಿಷ್ಟಪಡಿಸಿದ ಉದ್ದೇಶಗಳಿಗಾಗಿ ವಿಶ್ವವಿದ್ಯಾನಿಲಯದ ವಶದಲ್ಲಿ ಇಟ್ಟಿರುವ ಮತ್ತು ಒಪ್ಪಿಕೊಂಡಿರುವ ಸಾರ್ವಜನಿಕ ಮತ್ತು ಖಾಸಗಿ ನಿಧಿಗಳ ಆಡಳಿತ ನಡೆಸುವುದು;

(ಇ) ನಿಯಮಿಸಲಾದ ವಿಧಾನದಲ್ಲಿ ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಶಿಕ್ಷಕರು ಹಾಗೂ ನೌಕರರನ್ನು ನೇಮಿಸುವುದು ಮತ್ತು ಕುಲಪತಿಯವರು ಮಾಡಿದ ನೇಮಕಾತಿಗಳನ್ನು ಅನುಮೋದಿಸುವುದು;

(ಎಫ್) ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಹಣವನ್ನು ತೊಡಗಿಸುವುದು;

(ಜಿ) ವಿಶ್ವವಿದ್ಯಾನಿಲಯದ ಸಾಮಾನ್ಯ ಮೊಹರಿನ ನಮೂನೆ ಮತ್ತು ಉಪಯೋಗದ ಬಗ್ಗೆ ನಿರ್ದೇಶಿಸುವುದು;

(ಎಚ್) ವಿಶ್ವವಿದ್ಯಾನಿಲಯದ ಸೂಕ್ತ ಪ್ರಕಾರ್ಯಗಳಿಗಾಗಿ ಅವಶ್ಯವೆಂದು ತಾನು ಭಾವಿಸಬಹುದಾದಂಥ ಸ್ಥಾಯಿ ಅಥವಾ ತಾತ್ಕಾಲಿಕ ಸಮಿತಿಗಳನ್ನು ನೇಮಿಸುವುದು;

(ಐ) ರಾಜ್ಯ ಸರ್ಕಾರದ ಅನುಮೋದನೆಯೊಡನೆ, ವಿಶ್ವವಿದ್ಯಾನಿಲಯದ ಉದ್ದೇಶಗಳಿಗಾಗಿ, ವಿಶ್ವವಿದ್ಯಾನಿಲಯದ ಸ್ವತ್ತಿನ ಭದ್ರತೆಯ ಮೇಲೆ ಅಥವಾ ಅನ್ಯಥಾ ಹಣವನ್ನು ಸಾಲವಾಗಿ ಪಡೆಯುವುದು;

(ಜೆ) ತಾನು ಅವಶ್ಯವೆಂದು ಭಾವಿಸಬಹುದಾದಂಥ ಸಮಯದಲ್ಲಿ ಮತ್ತು ಅಂಥ ಸ್ಥಳದಲ್ಲಿ ಸಭೆ ಸೇರುವುದು:

ಪರಂತು, ಪ್ರತಿ ತ್ರೈಮಾಸಿಕದಲ್ಲಿ ಒಂದು ಸಾಧಾರಣ ಸಭೆ ಸೇರತಕ್ಕದ್ದು ಮತ್ತು ಅದರ ಸಾಮಾನ್ಯ ಸಭೆಗಳಲ್ಲಿ ಕನಿಷ್ಠ ಅರ್ಧದಷ್ಟನ್ನು ವಿಶ್ವವಿದ್ಯಾನಿಲಯದ ಕೇಂದ್ರ ಕಾರ್ಯಸ್ಥಾನ ಇರುವ ಸ್ಥಳದಲ್ಲಿ ನಡೆಸತಕ್ಕದ್ದು; ಮತ್ತು

(ಕೆ) ಈ ಅಧಿನಿಯಮ ಮತ್ತು ಪರಿನಿಯಮಗಳಿಗೆ ಅನುಸಾರವಾಗಿ ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ಎಲ್ಲ ವಿಷಯಗಳನ್ನು ನಿಯಂತ್ರಿಸುವುದು ಮತ್ತು ನಿರ್ಧರಿಸುವುದು ಹಾಗೂ ಈ ಅಧಿನಿಯಮದಿಂದ ಹಾಗೂ ಪರಿನಿಯಮಗಳಿಂದ ಅದಕ್ಕೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಚಲಾಯಿಸುವುದು ಅಥವಾ ವಹಿಸಬಹುದಾದಂಥ ಕರ್ತವ್ಯಗಳನ್ನು ನಿರ್ವಹಿಸುವುದು.

**29. ವಿದ್ಯಾವಿಷಯಕ ಪರಿಷತ್ತು.-** (1) ವಿದ್ಯಾವಿಷಯಕ ಪರಿಷತ್ತು, ವಿಶ್ವವಿದ್ಯಾನಿಲಯದ ಶೈಕ್ಷಣಿಕ ವ್ಯವಹಾರಗಳ ಪ್ರಭಾರವನ್ನು ಹೊಂದಿರತಕ್ಕದ್ದು ಮತ್ತು ಈ ಅಧಿನಿಯಮದ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ಪರಿವೀಕ್ಷಣೆ, ನಿರ್ದೇಶನ ಮತ್ತು ನಿಯಂತ್ರಣ ಮಾಡತಕ್ಕದ್ದು ಮತ್ತು ಬೋಧನೆ, ಶಿಕ್ಷಣ ಮತ್ತು ಪರೀಕ್ಷೆಗಳ ಗುಣಮಟ್ಟ ಮತ್ತು ಪದವಿಗಳ ಪ್ರದಾನ ಮಾಡುವಿಕೆ ಅಥವಾ ಡಿಪ್ಲೊಮಾಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ಇತರೆ ವಿಷಯಗಳನ್ನು ನಿರ್ವಹಿಸುವ ಜವಾಬ್ದಾರಿಯನ್ನು ಹೊಂದಿರತಕ್ಕದ್ದು ಮತ್ತು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ವಿಧಿಸಬಹುದಾದಂಥ ಇತರೆ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರೆ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು. ವಿದ್ಯಾವಿಷಯಕ ಪರಿಷತ್ತು ಈ ಕೆಳಕಂಡ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು, ಪದನಿಮಿತ್ತ ಅಧ್ಯಕ್ಷರು;

(ii) ಸ್ನಾತಕೋತ್ತರ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣದ ನಿರ್ದೇಶಕರು;

(iii) ಪಶುಸಂಗೋಪನಾ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(iv) ಮೀನುಗಾರಿಕೆ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(v) ಘಟಕ ಕಾಲೇಜುಗಳ ಡೀನ್‌ಗಳು;

(vi) ವಿಭಾಗಗಳ ಮುಖ್ಯಸ್ಥರು;

(vii) ಸುತ್ತು ಸರದಿ ಆಧಾರದ ಮೇಲೆ ಪ್ರತಿಯೊಂದು ಫ್ಯಾಕಲ್ಟಿಯಿಂದ ಕುಲಪತಿಯವರು ನಾಮನಿರ್ದೇಶನ ಮಾಡಿದ ಇಬ್ಬರಿಗೆ ಹೆಚ್ಚಿಲ್ಲದಂತೆ ವಿಭಾಗ ಮುಖ್ಯಸ್ಥರು;

(viii) ಸುತ್ತು ಸರದಿ ಆಧಾರದ ಮೇಲೆ ಮತ್ತು ನಿಯಮಿಸಲಾದ ರೀತಿಯಲ್ಲಿ ಕುಲಪತಿಯವರು ಪ್ರತಿಯೊಂದು ಫ್ಯಾಕಲ್ಟಿಯಿಂದ ನಾಮನಿರ್ದೇಶನ ಮಾಡಿದ ಒಬ್ಬ ಅಧ್ಯಾಪಕರು;

(ix) ವಿಶ್ವವಿದ್ಯಾನಿಲಯದ ಹೊರಗಿನಿಂದ, ಕುಲಪತಿಯವರು ನಾಮನಿರ್ದೇಶನ ಮಾಡಿದ ಒಬ್ಬ ಸುಪ್ರಸಿದ್ಧ ಕೃಷಿ ಶಿಕ್ಷಣ ತಜ್ಞ;

(x) ರಿಜಿಸ್ಟ್ರಾರ್, ಇವರು ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(2) ಪಶುಸಂಗೋಪನೆ ಮತ್ತು ಮೀನುಗಾರಿಕೆ ಮತ್ತು ಸಂಬಂಧಿತ ಕ್ಷೇತ್ರದ ವಿವಿಧ ವಲಯಗಳ ಸಾಕಷ್ಟು ಪ್ರಾತಿನಿಧ್ಯ ಪಡೆದುಕೊಳ್ಳುವುದಕ್ಕೆ ಸಾಧ್ಯವಾಗುವಂತೆ ನಿಯಮಿಸಬಹುದಾದಂಥ ಅವಧಿಗಾಗಿ ಮತ್ತು ಅಂಥ ರೀತಿಯಲ್ಲಿ ನಾಲ್ಕು ವ್ಯಕ್ತಿಗಳನ್ನು ಮೀರದಂತೆ ಸದಸ್ಯರನ್ನು ಸಹ-ಆಯ್ಕೆ (ಕೋ-ಆಪ್ಟ್) ಮಾಡಿಕೊಳ್ಳಬಹುದು.

(3) ಪದನಿಮಿತ್ತ ಸದಸ್ಯರ ಹೊರತಾಗಿ ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು, ಎರಡು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು.

(4) ವಿದ್ಯಾವಿಷಯಕ ಪರಿಷತ್ತಿಗೆ ನಾಮನಿರ್ದೇಶನಗೊಂಡ ಯಾರೇ ಸದಸ್ಯನು ವಿಚಾರಣೆ ನಡೆಸಿದ ತರುವಾಯ ದುರ್ವರ್ತನೆ, ದುರ್ನಡತೆ ಅಥವಾ ಅನ್ಯಥಾ ಕಾರಣದ ಮೇಲೆ ಕುಲಪತಿಯವರು, ಯಾವುದೇ ಸಮಯದಲ್ಲಿ ಆತನನ್ನು ಅಂಥ ಸದಸ್ಯತ್ವದಿಂದ ತೆಗೆದುಹಾಕುವುದಕ್ಕೆ ಗುರಿಯಾಗತಕ್ಕದ್ದು.

(5) ವಿದ್ಯಾವಿಷಯಕ ಪರಿಷತ್ತಿನ ಮೂರನೇ ಒಂದರಷ್ಟು ಸದಸ್ಯರ ಹಾಜರಾತಿ, ವಿದ್ಯಾವಿಷಯಕ ಪರಿಷತ್ತಿನ ಸಭೆಗೆ ಕೋರಂ ಆಗಿರತಕ್ಕದ್ದು:

ಪರಂತು, ಕೋರಂ ಇಲ್ಲದುದರಿಂದಾಗಿ, ವಿದ್ಯಾವಿಷಯಕ ಪರಿಷತ್ತಿನ ಒಂದು ಸಭೆಯನ್ನು ಮುಂದೂಡಲಾಗಿದ್ದರೆ, ಅದೇ ವ್ಯವಹಾರಗಳನ್ನು ನಡೆಸುವುದಕ್ಕಾಗಿ ಕರೆದ ಮುಂದಿನ ಸಭೆಯಲ್ಲಿ ಕೋರಂನ ಅವಶ್ಯಕತೆ ಇರುವುದಿಲ್ಲ.

(6) ಸಾಮಾನ್ಯವಾಗಿ ವಿದ್ಯಾವಿಷಯಕ ಪರಿಷತ್ತು, ಕುಲಪತಿಯವರು ನಿಗದಿಪಡಿಸಬಹುದಾದಂಥ ದಿನಾಂಕದಂದು, ಕೊನೇಪಕ್ಷ ನಾಲ್ಕು ತಿಂಗಳಿಗೊಮ್ಮೆ ಸಭೆ ಸೇರತಕ್ಕದ್ದು. ಆದಾಗ್ಯೂ, ಕುಲಪತಿಯವರು, ವಿದ್ಯಾವಿಷಯಕ ಪರಿಷತ್ತಿನ ವಿಶೇಷ ಸಭೆಯನ್ನು ಕರೆಯಬಹುದು.

**30. ವಿದ್ಯಾವಿಷಯಕ ಪರಿಷತ್ತಿನ ಅಧಿಕಾರಗಳು ಮತ್ತು ಪ್ರಕಾರ್ಯಗಳು.-** (1) ವಿದ್ಯಾವಿಷಯಕ ಪರಿಷತ್ತು ಈ ಅಧಿನಿಯಮದ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ಅಧ್ಯಯನದ ಎಲ್ಲಾ ವ್ಯಾಸಂಗ ಕ್ರಮಗಳನ್ನು ಮತ್ತು ಪಠ್ಯ ವಿಷಯವನ್ನು ನಿರ್ಧರಿಸುವುದಕ್ಕಾಗಿ ವಿನಿಯಮಗಳನ್ನು ರಚಿಸುವ ಅಧಿಕಾರ ಹೊಂದಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದೊಳಗೆ ಅಧ್ಯಾಪನ ಮತ್ತು ಇತರ ಶೈಕ್ಷಣಿಕ ಕಾರ್ಯಕ್ರಮಗಳ ಮೇಲೆ ಸಾಮಾನ್ಯ ನಿಯಂತ್ರಣವನ್ನು ಹೊಂದಿರತಕ್ಕದ್ದು ಮತ್ತು ಅವುಗಳ ಗುಣಮಟ್ಟಗಳನ್ನು ಕಾಯ್ದುಕೊಂಡು ಬರುವುದಕ್ಕೆ ಹೊಣೆಯಾಗಿರತಕ್ಕದ್ದು.

(2) ವಿದ್ಯಾವಿಷಯಕ ಪರಿಷತ್ತು ತನ್ನ ನಿಯಂತ್ರಣಕ್ಕೊಳಪಡುವ ಎಲ್ಲಾ ವಿದ್ಯಾ ವಿಷಯಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮಕ್ಕೆ ಮತ್ತು ಪರಿನಿಯಮಗಳಿಗೆ ಸುಸಂಗತವಾದ ವಿನಿಯಮಗಳನ್ನು ರಚಿಸಲು ಮತ್ತು ಅಂಥ ವಿನಿಯಮಗಳನ್ನು ತಿದ್ದುಪಡಿ ಮಾಡಲು ಅಥವಾ ನಿರಸನಗೊಳಿಸಲು ಅಧಿಕಾರ ಹೊಂದಿರತಕ್ಕದ್ದು.

(3) (1)ನೇ ಉಪ-ಪ್ರಕರಣದ ಉಪಬಂಧಗಳ ಸಾಮಾನ್ಯ ಅನ್ವಯಕ್ಕೆ ಪ್ರತಿಕೂಲವಾಗದಂತೆ, ವಿದ್ಯಾವಿಷಯಕ ಪರಿಷತ್ತು ಈ ಮುಂದಿನ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು, ಎಂದರೆ:-

(i) ಗ್ರಂಥಾಲಯಗಳ ನಿಯಂತ್ರಣ ಮತ್ತು ನಿರ್ವಹಣೆಯೂ ಸೇರಿದಂತೆ, ಎಲ್ಲಾ ವಿದ್ಯಾ ವಿಷಯಗಳ ಮೇಲೆ ಮಂಡಲಿಗೆ ಮತ್ತು ಕುಲಪತಿಯವರಿಗೆ ಸಲಹೆ ನೀಡುವುದು;

(ii) ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣದಲ್ಲಿನ ಹುದ್ದೆಗಳೂ ಸೇರಿದಂತೆ ಪ್ರಾಧ್ಯಾಪಕರ, ಅಸೋಸಿಯೇಟ್ ಪ್ರಾಧ್ಯಾಪಕರ, ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಪ್ರಾರಂಭಿಸುವುದು ಮತ್ತು ಅವುಗಳ ಕರ್ತವ್ಯಗಳಿಗೆ ಸಂಬಂಧಪಟ್ಟಂತೆ ಶಿಫಾರಸ್ಸುಗಳನ್ನು ಮಾಡುವುದು;

(iii) ಅಧ್ಯಾಪನ, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣಗಳ ವಿಭಾಗ ಅಥವಾ ಫ್ಯಾಕಲ್ಟಿಗಳ ರಚನೆ ಅಥವಾ ಪುನರ್ ರಚನೆಗಾಗಿ ಶಿಫಾರಸ್ಸುಗಳನ್ನು ಮಾಡುವುದು;

(iv) ವಿಶ್ವವಿದ್ಯಾನಿಲಯಗಳಿಗೆ, ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ವಿನಿಯಮಗಳನ್ನು ರಚಿಸುವುದು ಮತ್ತು ಪ್ರವೇಶ ನೀಡಬೇಕಾದ ವಿದ್ಯಾರ್ಥಿಗಳ ಸಂಖ್ಯೆಯನ್ನು ನಿರ್ಧರಿಸುವುದು;

(v) ಪದವಿಗಳು, ಡಿಪ್ಲೊಮಾಗಳು ಮತ್ತು ಪ್ರಮಾಣ ಪತ್ರ ಪಡೆಯುವುದಕ್ಕೆ ಬೇಕಾದ ವ್ಯಾಸಂಗ ಕ್ರಮಗಳಿಗೆ ಸಂಬಂಧಿಸಿದ ವಿನಿಯಮಗಳನ್ನು ರಚಿಸುವುದು;

(vi) ಪರೀಕ್ಷೆಗಳನ್ನು ನಡೆಸುವುದಕ್ಕೆ ಸಂಬಂಧಪಡುವ ವಿನಿಯಮಗಳನ್ನು ರಚಿಸುವುದು ಮತ್ತು ಶಿಕ್ಷಣದ ಗುಣಮಟ್ಟಗಳನ್ನು ಕಾಯ್ದುಕೊಂಡು ಬರುವುದು ಮತ್ತು ಸುಧಾರಿಸುವುದು;

(vii) ಗೌರವ ಪದವಿಗಳನ್ನು ಪ್ರದಾನ ಮಾಡುವುದಕ್ಕೆ ಸಂಬಂಧಿಸಿದಂತೆ ಮಂಡಲಿಗೆ ಶಿಫಾರಸ್ಸುಗಳನ್ನು ಮಾಡುವುದು;

(viii) ವಿಶ್ವವಿದ್ಯಾನಿಲಯದ ಅಧ್ಯಾಪಕರಿಗೆ ನಿಯಮಿಸತಕ್ಕ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ ಶಿಫಾರಸ್ಸು ಮಾಡುವುದು;

(ix) ಈ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ, ಮಂಡಲಿಯು ಅಥವಾ ಕುಲಪತಿಯವರು, ಅದಕ್ಕೆ ವಹಿಸಬಹುದಾದಂಥ ಅಥವಾ ವಿಧಿಸಬಹುದಾದಂಥ ಅಧಿಕಾರಗಳನ್ನು ಚಲಾಯಿಸುವುದು ಮತ್ತು ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸುವುದು.

**31. ಸಂಶೋಧನಾ ಪರಿಷತ್ತು.-** (1) ಈ ಮುಂದಿನ ಸದಸ್ಯರನ್ನು ಒಳಗೊಂಡ ಒಂದು ಸಂಶೋಧನಾ ಪರಿಷತ್ತು ಇರತಕ್ಕದ್ದು, ಎಂದರೆ:-

(i) ಕುಲಪತಿಯವರು;

(ii) ಪಶುಸಂಗೋಪನಾ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(iii) ಮೀನುಗಾರಿಕೆ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(iv) ಎಲ್ಲಾ ಘಟಕ ಕಾಲೇಜುಗಳ ಡೀನರು;

(v) ಸ್ನಾತಕೋತ್ತರ ಅಧ್ಯಯನಗಳು, ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣದ ಎಲ್ಲಾ ನಿರ್ದೇಶಕರು;

(vi) ಎಲ್ಲಾ ವಿಭಾಗಗಳ ಮತ್ತು ಕೇಂದ್ರಗಳ ಮುಖ್ಯಸ್ಥರು;

(vii) ಪಶುಸಂಗೋಪನೆ, ಕೋಳಿಸಾಗಣೆ ಅಥವಾ ಮೀನುಗಾರಿಕೆ ಅಥವಾ ಇತರ ಸಂಬಂಧಿತ ಶಾಖೆಗಳಲ್ಲಿ ವಿಶೇಷ ಪರಿಣತಿಯುಳ್ಳ ಪ್ರಗತಿಪರ ರೈತರ ವಿಶೇಷ ಜ್ಞಾನ ಹಾಗೂ ಅನುಭವದ ಪ್ರಯೋಜನ ಪಡೆದುಕೊಳ್ಳಲು ಕುಲಪತಿಯವರು ನಾಮನಿರ್ದೇಶನ ಮಾಡಿದ ಇಬ್ಬರು ಪ್ರಗತಿಪರ ರೈತರು.

(viii) ಸಭೆಯ ಕಾರ್ಯಸೂಚಿಯಲ್ಲಿರುವ ವಿಷಯಗಳ ಬಗ್ಗೆ ಪ್ರಸಿದ್ಧ ವಿಜ್ಞಾನಿಗಳ ವಿಶೇಷ ಜ್ಞಾನದ ಪ್ರಯೋಜನವನ್ನು ಪಡೆಯುವುದಕ್ಕಾಗಿ ಯಾವುದೇ ಸಭೆಯ ಸಂಬಂಧದಲ್ಲಿ ಕುಲಪತಿಯವರು ನಾಮನಿರ್ದೇಶನ ಮಾಡಿದ ಕರ್ನಾಟಕದ ಹೊರಗಿನ ರಾಜ್ಯಗಳ ಕೃಷಿ ವಿಶ್ವವಿದ್ಯಾನಿಲಯದ ಅಥವಾ ಇತರೆ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ವಿಶ್ವವಿದ್ಯಾನಿಲಯಗಳ ಇಬ್ಬರು ಪ್ರಸಿದ್ಧ ವಿಜ್ಞಾನಿಗಳು;

(2) ಪಶುಸಂಗೋಪನೆ ಮತ್ತು ಮೀನುಗಾರಿಕೆ ಹಾಗೂ ಇತರೆ ಸಂಬಂಧಿತ ಕ್ಷೇತ್ರಗಳಲ್ಲಿನ ವಿವಿಧ ವರ್ಗಗಳ ಸಾಕಷ್ಟು ಪ್ರಾತಿನಿಧ್ಯವನ್ನು ಪಡೆದುಕೊಳ್ಳಲು ಸಾಧ್ಯವಾಗುವಂತೆ, ನಿಯಮಿಸಬಹುದಾದಂಥ ಅವಧಿಗಾಗಿ ಮತ್ತು ಅಂಥ ರೀತಿಯಲ್ಲಿ, ಸಂಶೋಧನಾ ಪರಿಷತ್ತು ನಾಲ್ಕು ವ್ಯಕ್ತಿಗಳನ್ನು ಮೀರದಂತೆ ಸದಸ್ಯರನ್ನು ಸಹ ಆಯ್ಕೆ ಮಾಡಿಕೊಳ್ಳಬಹುದು.

(3) ಸಂಶೋಧನಾ ಪರಿಷತ್ತಿಗೆ ನಾಮನಿರ್ದೇಶಿತನಾದ ಯಾವೊಬ್ಬ ಸದಸ್ಯನು, ವಿಚಾರಣೆಗೆ ಗುರಿಯಾದ ತರುವಾಯ ದುರ್ನಡತೆಯ, ದುರ್ವರ್ತನೆಯ ಅಥವಾ ಅನ್ಯಥಾ ಕಾರಣದ ಮೇಲೆ ಕುಲಪತಿಯವರು ಯಾವುದೇ ಸಮಯದಲ್ಲಿ ಅಂಥ ಸದಸ್ಯತ್ವದಿಂದ ತೆಗೆದುಹಾಕುವುದಕ್ಕೆ ಗುರಿಯಾಗತಕ್ಕದ್ದು.

(4) ಕುಲಪತಿಯವರು, ಸಂಶೋಧನಾ ಪರಿಷತ್ತಿನ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು ಮತ್ತು ಸಂಶೋಧನಾ ನಿರ್ದೇಶಕರು ಸದಸ್ಯ-ಕಾರ್ಯದರ್ಶಿಯಾಗಿರತಕ್ಕದ್ದು.

**32. ಸಂಶೋಧನಾ ಪರಿಷತ್ತಿನ ಪ್ರಕಾರ್ಯಗಳು.-** ಸಂಶೋಧನಾ ಪರಿಷತ್ತು, ಈ ಮುಂದಿನವುಗಳ ಬಗ್ಗೆ ಪರಿಗಣಿಸತಕ್ಕದ್ದು ಮತ್ತು ಶಿಫಾರಸ್ಸು ಮಾಡತಕ್ಕದ್ದು, ಎಂದರೆ:-

(i) ಪರಿಣಾಮಕಾರಿಯಾಗಿ ಸಮನ್ವಯವನ್ನು ಸಾಧಿಸುವ ದೃಷ್ಟಿಯಿಂದ ಪಶುವೈದ್ಯ ವಿಜ್ಞಾನ ಮತ್ತು ಪಶುಸಂಗೋಪನೆ, ಮೀನುಗಾರಿಕೆ ವಿಜ್ಞಾನ ಮತ್ತು ಇತರ ಸಂಬಂಧಿತ ವಿಜ್ಞಾನಗಳ ಕ್ಷೇತ್ರದಲ್ಲಿ, ವಿಶ್ವವಿದ್ಯಾನಿಲಯದ ವಿವಿಧ ಘಟಕಗಳು ಕೈಗೊಂಡ ಅಥವಾ ಕೈಗೊಳ್ಳಬೇಕಾದ ಸಂಶೋಧನಾ ಕಾರ್ಯಕ್ರಮಗಳು ಮತ್ತು ಯೋಜನೆಗಳು;

(ii) ಸಂಶೋಧನಾ ಯೋಜನೆಗಳನ್ನು ಅನುಷ್ಠಾನಗೊಳಿಸುವುದಕ್ಕೆ ಅಗತ್ಯವಾದ ಭೌತಿಕ, ಆರ್ಥಿಕ ಮತ್ತು ಆಡಳಿತಾತ್ಮಕ ಸೌಲಭ್ಯಗಳು;

(iii) ಸಂಶೋಧನೆಯ ವಿಷಯಗಳು ರೈತರ ಅಗತ್ಯತೆಗಳನ್ನು ಪೂರೈಸುವ ಕಡೆಗೆ ಅಭಿಮುಖವಾಗಿರುವಂತೆ ಮಾಡುವುದು;

(iv) ಸಂಶೋಧನೆ, ವಿಸ್ತರಣಾ ಶಿಕ್ಷಣ ಮತ್ತು ಅಧ್ಯಾಪನಗಳ ಸಮ್ಮಿಲನಗೊಳಿಸುವುದು ಮತ್ತು ಅಧ್ಯಾಪನ ಮತ್ತು ವಿಸ್ತರಣಾ ಶಿಕ್ಷಣ ಕಾರ್ಯಕ್ರಮದಲ್ಲಿ ಸಂಶೋಧನಾ ಕಾರ್ಯಕರ್ತರು ಭಾಗವಹಿಸುವುದು;

(v) ಕುಲಪತಿಯವರು ಅಥವಾ ಮಂಡಲಿ ಅಥವಾ ವಿಶ್ವವಿದ್ಯಾನಿಲಯ ಯಾವುದೇ ಇತರ ಪ್ರಾಧಿಕಾರವು ತನಗೆ ಉಲ್ಲೇಖಿಸಬಹುದಾದ ಸಂಶೋಧನಾ ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ಯಾವುದೇ ಇತರೆ ವಿಷಯ.

**33. ವಿಸ್ತರಣಾ ಶಿಕ್ಷಣ ಪರಿಷತ್ತು.-** (1) ಈ ಮುಂದಿನ ಸದಸ್ಯರನ್ನೊಳಗೊಂಡ ಒಂದು ವಿಸ್ತರಣಾ ಶಿಕ್ಷಣ ಪರಿಷತ್ತು ಇರತಕ್ಕದ್ದು, ಎಂದರೆ:-

(i) ಕುಲಪತಿಯವರು;

(ii) ಪಶುಸಂಗೋಪನಾ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(iii) ಮೀನುಗಾರಿಕೆ ಇಲಾಖೆ ನಿರ್ದೇಶಕರು, ಕರ್ನಾಟಕ ಸರ್ಕಾರ;

(iv) ಸ್ನಾತಕೋತ್ತರ ಅಧ್ಯಯನಗಳು, ಸಂಶೋಧನೆ ಮತ್ತು ವಿಸ್ತರಣೆಯ ಎಲ್ಲಾ ನಿರ್ದೇಶಕರು;

(v) ಎಲ್ಲಾ ಘಟಕ ಕಾಲೇಜುಗಳ ಡೀನ್‌ಗಳು;

(vi) ಎಲ್ಲಾ ವಿಭಾಗಗಳು ಮತ್ತು ಪ್ರಾದೇಶಿಕ ಸಂಶೋಧನಾ ನಿಲಯಗಳ ಮುಖ್ಯಸ್ಥರು;

(vii) ಸಭೆಯ ಕಾರ್ಯಸೂಚಿಯ ಅಗತ್ಯಕ್ಕನುಸಾರ, ಯಾವುದೇ ನಿರ್ದಿಷ್ಟ ಸಭೆಗಾಗಿ, ಕುಲಪತಿಯವರು ನಾಮನಿರ್ದೇಶನ ಮಾಡಿದ ವಿಶ್ವವಿದ್ಯಾನಿಲಯದ ಹೊರಗಿನ ವಿಸ್ತರಣಾ ಶಿಕ್ಷಣದ ಕ್ಷೇತ್ರದಲ್ಲಿನ ಇಬ್ಬರು ಸುಪ್ರಸಿದ್ಧ ವ್ಯಕ್ತಿಗಳು;

(viii) ಪಶುಸಂಗೋಪನೆ, ಪಶುವೈದ್ಯಕೀಯ ಅಥವಾ ಮೀನುಗಾರಿಕೆ ವಿಜ್ಞಾನ ಅಥವಾ ಇತರ ಸಂಬಂಧಿತ ಶಾಖೆಗಳಲ್ಲಿ ವಿಶೇಷ ಪರಿಣಿತಿಯುಳ್ಳ, ಪ್ರಗತಿಪರ ರೈತರ ವಿಶೇಷ ಜ್ಞಾನ ಹಾಗೂ ಅನುಭವದ ಪ್ರಯೋಜನವನ್ನು ಪಡೆದುಕೊಳ್ಳಲು ಕುಲಪತಿಯವರು ನಾಮನಿರ್ದೇಶನ ಮಾಡಿದ ಮೂವರು ಪ್ರಗತಿಪರ ರೈತರು.

(2) ಕುಲಪತಿಯವರು ವಿಸ್ತರಣಾ ಶಿಕ್ಷಣ ಪರಿಷತ್ತಿನ ಅಧ್ಯಕ್ಷರಾಗಿರತಕ್ಕದ್ದು ಮತ್ತು ವಿಸ್ತರಣಾ ನಿರ್ದೇಶಕರು ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವಿಸ್ತರಣಾ ಶಿಕ್ಷಣ ಪರಿಷತ್ತಿಗೆ ನಾಮನಿರ್ದೇಶಿತನಾದ ಯಾರೇ ಸದಸ್ಯನು ವಿಚಾರಣೆ ನಡೆಸಿದ ತರುವಾಯ ದುರ್ವರ್ತನೆ, ದುರ್ನಡತೆ ಅಥವಾ ಅನ್ಯಥಾ ಕಾರಣದ ಮೇಲೆ ಕುಲಪತಿಯವರು, ಯಾವುದೇ ಸಮಯದಲ್ಲಿ ಸದಸ್ಯತ್ವದಿಂದ ತೆಗೆದುಹಾಕುವುದಕ್ಕೆ ಗುರಿಯಾಗತಕ್ಕದ್ದು.

**34. ವಿಸ್ತರಣಾ ಶಿಕ್ಷಣ ಪರಿಷತ್ತಿನ ಪ್ರಕಾರ್ಯಗಳು.-** ವಿಸ್ತರಣಾ ಶಿಕ್ಷಣ ಪರಿಷತ್ತು ಈ ಮುಂದಿನವುಗಳನ್ನು ಪರಿಗಣಿಸತಕ್ಕದ್ದು ಮತ್ತು ಶಿಫಾರಸ್ಸು ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾನಿಲಯದ ವಿಸ್ತರಣಾ ಶಿಕ್ಷಣ ಕಾರ್ಯಕ್ರಮಗಳು ಮತ್ತು ಯೋಜನೆಗಳು;

(ii) ಪಶುಸಂಗೋಪನೆ, ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನ ಮತ್ತು ಸಂಬಂಧಿತ ಶಾಖೆಗಳ ಸುಧಾರಣೆಗಾಗಿ ಮತ್ತು ಗ್ರಾಮೀಣ ಸಮುದಾಯಗಳ ಅಭಿವೃದ್ಧಿಗಾಗಿ, ವಿಸ್ತರಣಾ ಶಿಕ್ಷಣವನ್ನು ಸಮನ್ವಯಗೊಳಿಸುವುದು;

(iii) ರೈತರ ಶಿಕ್ಷಣ ಮತ್ತು ತರಬೇತಿಯನ್ನು ಮತ್ತು ಸಲಹಾ ಸೇವೆಗಳನ್ನು ಅಭಿವೃದ್ಧಿಗೊಳಿಸುವುದು ಮತ್ತು ಕ್ಷೇತ್ರ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸುವುದು ಮತ್ತು ಮಾಹಿತಿಯ ಪ್ರಸಾರ ಮಾಡುವುದು;

(iv) ವಿಸ್ತರಣಾ ಶಿಕ್ಷಣದ ವಿಧಾನ;

(v) ವಿಶ್ವವಿದ್ಯಾನಿಲಯದಲ್ಲಿ ಮತ್ತು ಸಂಶೋಧನೆಗಳ ಜೊತೆಗೆ ವಿಸ್ತರಣಾ ಶಿಕ್ಷಣವನ್ನು ಸಮ್ಮಿಲನಗೊಳಿಸುವುದು ಮತ್ತು ಅಧ್ಯಾಪಕರು ಮತ್ತು ಸಂಶೋಧನಾ ಕಾರ್ಯಕರ್ತರು ವಿಸ್ತರಣಾ ಶಿಕ್ಷಣ ಕಾರ್ಯಕ್ರಮದಲ್ಲಿ ಭಾಗವಹಿಸುವುದು;

(vi) ಕುಲಪತಿಯವರು, ಮಂಡಲಿ ಅಥವಾ ವಿಶ್ವವಿದ್ಯಾನಿಲಯದ ಯಾವುದೇ ಇತರ ಪ್ರಾಧಿಕಾರವು ಅದಕ್ಕೆ ಕಳುಹಿಸಿಕೊಟ್ಟ ಯಾವುದೇ ಇತರ ವಿಷಯ.

**35. ಹಣಕಾಸು ಸಮಿತಿ.-** (1) ಈ ಮುಂದಿನ ಸದಸ್ಯರನ್ನು ಒಳಗೊಂಡ ಹಣಕಾಸು ಸಮಿತಿಯೊಂದು ಇರತಕ್ಕದ್ದು, ಎಂದರೆ:-

(i) ಕುಲಪತಿ, ಪದನಿಮಿತ್ತ ಅಧ್ಯಕ್ಷರು;

(ii) ಮಂಡಲಿಯು ತನ್ನ ಸದಸ್ಯರ ಪೈಕಿ ನಾಮನಿರ್ದೇಶನ ಮಾಡಿದ ಇಬ್ಬರು ವ್ಯಕ್ತಿಗಳು;

(iii) ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಪ್ರಭಾರದಲ್ಲಿರುವ ಕರ್ನಾಟಕ ಸರ್ಕಾರದ ಕಾರ್ಯದರ್ಶಿ ಅಥವಾ ಜಂಟಿ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅವರ ಒಬ್ಬ ನಾಮನಿರ್ದೇಶಿತರು;

(iv) ಕರ್ನಾಟಕ ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ; ಅಥವಾ ಜಂಟಿ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಿಲ್ಲದ ದರ್ಜೆಯ ಅವರ ಒಬ್ಬ ನಾಮನಿರ್ದೇಶಿತರು;

(v) ವಿಶ್ವವಿದ್ಯಾನಿಲಯದ ಲೆಕ್ಕ ನಿಯಂತ್ರಕರು, ಅವರು ಸಮಿತಿಯ ಪದನಿಮಿತ್ತ ಕಾರ್ಯದರ್ಶಿಯಾಗಿರತಕ್ಕದ್ದು

(2) ಹಣಕಾಸು ಸಮಿತಿಯು ಈ ಮುಂದಿನ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪತ್ರ ಮತ್ತು ಬಜೆಟ್ ಅಂದಾಜುಗಳನ್ನು ಪರಿಶೀಲಿಸುವುದು ಹಾಗೂ ಮಂಡಲಿಗೆ ತನ್ನ ಶಿಫಾರಸ್ಸುಗಳನ್ನು ಮಾಡುವುದು;

(ii) ವಿಶ್ವವಿದ್ಯಾನಿಲಯದ ಲೆಕ್ಕಪತ್ರಗಳ ಸಾಮಾನ್ಯ ಪರೀಕ್ಷೆಗಳನ್ನು ನಡೆಸುವುದು, ವಾರ್ಷಿಕ ಲೆಕ್ಕ ಪರಿಶೋಧನೆಗಳ ವರದಿಗಳನ್ನು ಪರಿವೀಕ್ಷಿಸುವುದು ಹಾಗೂ ಅದರ ಮೇಲೆ ತನ್ನ ಶಿಫಾರಸ್ಸುಗಳನ್ನು ಮಾಡುವುದು;

(iii) ಬಜೆಟ್‌ನಲ್ಲಿ ಅವಕಾಶ ಒದಗಿಸಿಲ್ಲದ ವೆಚ್ಚವನ್ನು ಒಳಗೊಂಡ ಅಥವಾ ಬಜೆಟ್‌ನಲ್ಲಿ ಒದಗಿಸಿದ ಮೊತ್ತಕ್ಕಿಂತ ಹೆಚ್ಚುವರಿಯಾಗಿ ವೆಚ್ಚವನ್ನು ಒಳಗೊಂಡ ವಿಶ್ವವಿದ್ಯಾನಿಲಯದ ಎಲ್ಲಾ ಪ್ರಸ್ತಾವಗಳನ್ನು ಪರೀಕ್ಷಿಸುವುದು;

(iv) ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ಇತರ ಪ್ರಕಾರ್ಯಗಳನ್ನು ನೆರವೇರಿಸುವುದು.

**36. ಅಧ್ಯಯನ ಮಂಡಲಿಗಳು.-** ಪ್ರತಿಯೊಂದು ಫ್ಯಾಕಲ್ಟಿಯಲ್ಲೂ ಒಂದು ಅಧ್ಯಯನ ಮಂಡಲಿ ಇರತಕ್ಕದ್ದು. ಅಧ್ಯಯನ ಮಂಡಲಿಗಳ ರಚನೆ ಮತ್ತು ಅಧಿಕಾರಗಳು ಪರಿನಿಯಮಗಳಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - V

## ವಿಶ್ವವಿದ್ಯಾನಿಲಯದ ನಿಧಿಗಳು

**37. ವಿಶ್ವವಿದ್ಯಾನಿಲಯದ ನಿಧಿಗಳು.-** (1) ಈ ಕೆಳಕಂಡ ಯಾವುವೇ ಮೂಲಗಳಿಂದ ಸ್ವೀಕರಿಸಿದ ಮೊಬಲಗುಗಳು ವಿಶ್ವವಿದ್ಯಾನಿಲಯದ ನಿಧಿಯ ಭಾಗವಾಗಿರತಕ್ಕದ್ದು, ಎಂದರೆ:-

(i) ಭಾರತೀಯ ಕೃಷಿ ಸಂಶೋಧನಾ ಪರಿಷತ್ತು ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ನೀಡಿದ ಯಾವುದೇ ವಂತಿಗೆ ಅಥವಾ ಅನುದಾನ;

(ii) ಖಾಸಗಿ ವ್ಯಕ್ತಿಗಳು ಅಥವಾ ಸಂಸ್ಥೆಗಳು ನೀಡಿದ ಯಾವುದೇ ಮರಣ ಶಾಸನ ಮೂಲಕವಾಗಿ ದೊರೆತ ಸ್ವತ್ತು, ದೇಣಿಗೆ, ದತ್ತಿಗಳು ಅಥವಾ ಇತರ ಅನುದಾನಗಳು;

(iii) ಫೀಜು, ಚಾರ್ಜುಗಳು, ಸಲಹಾ ಸೇವೆ ಇತ್ಯಾದಿಗಳ ಮೂಲಕ ವಿಶ್ವವಿದ್ಯಾನಿಲಯವು ಸ್ವೀಕರಿಸಿದ ಆದಾಯ;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿಗೆ ಒಳಪಟ್ಟು ವಿದೇಶಿ ಸರ್ಕಾರಗಳಿಂದ ಅಥವಾ ಯಾವುವೇ ವಿದೇಶಿ ಸಂಸ್ಥೆಗಳಿಂದ ಅಥವಾ ಕಂಪನಿಗಳಿಂದ ಯಾವುದೇ ವಂತಿಗೆ ಅಥವಾ ದತ್ತಿಗಳು;

(v) ಯಾವುದೇ ಇತರ ಮೂಲದಿಂದ ಸ್ವೀಕರಿಸಿದ ಮೊಬಲಗುಗಳು.

(2) ಸದರಿ ನಿಧಿಯನ್ನು ಭಾರತದ ರಿಜರ್ವ್ ಬ್ಯಾಂಕ್ ಅಧಿನಿಯಮ, 1934 ರಲ್ಲಿ ಪರಿಭಾಷಿಸಿದಂತೆ ಒಂದು ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ಬ್ಯಾಂಕಿಂಗ್ ಕಂಪನಿಗಳ (ಉದ್ಯಮಗಳ ಆರ್ಜನೆ ಮತ್ತು ವರ್ಗಾವಣೆ) ಅಧಿನಿಯಮ, 1970ರ ಮೇರೆಗೆ ರಚಿತವಾದ ಹೊಸ ಸಂವಾದಿ ಬ್ಯಾಂಕಿನಲ್ಲಿ ಇಡತಕ್ಕದ್ದು ಅಥವಾ ಮಂಡಲಿಯು ತೀರ್ಮಾನಿಸಬಹುದಾದಂತೆ, ಭಾರತ ನ್ಯಾಸ ಅಧಿನಿಯಮ, 1882ರ ಮೂಲಕ ಪ್ರಾಧೀಕೃತವಾದ ಭದ್ರತೆಗಳಲ್ಲಿ ಹೂಡಬಹುದು.

(3) ಪರಿನಿಯಮಗಳ ಮೂಲಕ ನಿಯಮಿಸಬಹುದಾದ ರೀತಿಯಲ್ಲಿ ವಿಶ್ವವಿದ್ಯಾನಿಲಯದ ಯಾವುದೇ ಉದ್ದೇಶಗಳಿಗಾಗಿ ಸದರಿ ನಿಧಿಯನ್ನು ವಿನಿಯೋಗಿಸಬಹುದು.

**38. ನಿವೃತ್ತಿ ವೇತನ ಮತ್ತು ಭವಿಷ್ಯನಿಧಿ.-** (1) ವಿಶ್ವವಿದ್ಯಾನಿಲಯವು, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ಷರತ್ತುಗಳಿಗೆ ಒಳಪಟ್ಟು ಮತ್ತು ಅಂಥ ವಿಧಾನದಲ್ಲಿ, ತನ್ನ ನೌಕರರ ಪ್ರಯೋಜನಕ್ಕಾಗಿ ತಾನು ಸೂಕ್ತವೆಂದು ಭಾವಿಸಬಹುದಾದಂಥ, ನಿವೃತ್ತಿ ವೇತನ, ಉಪದಾನ ಮತ್ತು ಭವಿಷ್ಯನಿಧಿ ಯೋಜನೆಗಳನ್ನು ರಚಿಸತಕ್ಕದ್ದು.

(2) ವಿಶ್ವವಿದ್ಯಾನಿಲಯವು ತನ್ನ ಅಧಿಕಾರಿಗಳ, ಶಿಕ್ಷಕರ ಅಥವಾ ನೌಕರರ ಪ್ರಯೋಜನಕ್ಕಾಗಿ ಹೀಗೆ ಯಾವುದೇ ನಿವೃತ್ತಿ ವೇತನ ನಿಧಿ ಅಥವಾ ಭವಿಷ್ಯ ನಿಧಿ ರಚಿಸಿರುವಲ್ಲಿ ರಾಜ್ಯ ಸರ್ಕಾರವು, ಅದು ಸರ್ಕಾರದ ಭವಿಷ್ಯ ನಿಧಿ ಎಂಬ ರೀತಿಯಲ್ಲಿಯೇ ಭವಿಷ್ಯನಿಧಿ ಅಧಿನಿಯಮ, 1925ರ (1925ರ ಕೇಂದ್ರ ಅಧಿನಿಯಮ 19) ಉಪಬಂಧಗಳು ಅನ್ವಯವಾಗತಕ್ಕದ್ದೆಂದು ಘೋಷಿಸಬಹುದು.

(3) 7ನೇ ಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ರಾಜ್ಯ ಸರ್ಕಾರದ ಸೇವೆಗಳಿಂದ ವರ್ಗಾಯಿತರಾದ ವ್ಯಕ್ತಿಗಳು, ಕರ್ನಾಟಕ ರಾಜ್ಯ ಸಿವಿಲ್ ಸೇವಾ ನಿಯಮಗಳು ಅಥವಾ ಅವರಿಗೆ ಅನ್ವಯವಾಗುವಂಥ ಇತರ ನಿಯಮಗಳು, ಅವರ ವರ್ಗಾವಣೆಯ ನಿಕಟ ಪೂರ್ವದಲ್ಲಿ ಅವರಿಗೆ ಅನ್ವಯವಾಗುತ್ತಿದ್ದ ರೀತಿಯಲ್ಲಿಯೇ ನಿವೃತ್ತಿ ವೇತನಕ್ಕೆ ಅರ್ಹರಾಗಿರತಕ್ಕದ್ದು ಮತ್ತು ಅಂಥ ನಿವೃತ್ತಿ ವೇತನವನ್ನು ರಾಜ್ಯ ಸರ್ಕಾರವು ಸಂದಾಯ ಮಾಡತಕ್ಕದ್ದು ಮತ್ತು ಅದನ್ನು ರಾಜ್ಯದ ಸಂಚಿತ ನಿಧಿಯಿಂದ ವೆಚ್ಚವನ್ನು ಭರಿಸತಕ್ಕದ್ದು.

**39. ಇತರ ನಿಧಿಗಳು.-** ವಿಶ್ವವಿದ್ಯಾನಿಲಯವು, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ಇತರ ನಿಧಿಗಳನ್ನು ಹೊಂದಿರಬಹುದು.

**40. ಸರ್ಕಾರದ ಅನುದಾನಗಳು.-** (1) ರಾಜ್ಯ ಸರ್ಕಾರವು ಪ್ರತಿವರ್ಷವು ವಿಶ್ವವಿದ್ಯಾನಿಲಯಕ್ಕೆ ಲೋಪವಾಗದಂಥ ಇಡಿಗಂಟು ಅನುದಾನವನ್ನು ಈ ಮುಂದಿನಂತೆ ನೀಡತಕ್ಕದ್ದು:

(ಎ) 2002-03ನೇ ವರ್ಷದಲ್ಲಿ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸಲಾದ ಚಟುವಟಿಕೆಗಳಿಗೆ ಮತ್ತು ಸಂಸ್ಥೆಗಳಿಗೆ ಮಾಡಿದ ನಿವ್ವಳ ವೆಚ್ಚಕ್ಕೆ ಕಡಿಮೆಯಲ್ಲದ ಅನುದಾನ;

(ಬಿ) ಸಿಬ್ಬಂದಿಯ ವೇತನ ಮತ್ತು ಭತ್ಯೆಗಳ, ಸಾದಿಲ್ವಾರಿನ, (ಎ) ಖಂಡದಲ್ಲಿ ಉಲ್ಲೇಖಿಸಲಾದ ಸಂಸ್ಥೆಗಳು ಮತ್ತು ಚಟುವಟಿಕೆಗಳಲ್ಲದೆ ವಿಶ್ವವಿದ್ಯಾನಿಲಯದ ಇತರ ಸರಬರಾಜು ಮತ್ತು ಸೇವೆಗಳ ಮೇಲಿನ ನಿವ್ವಳ ವೆಚ್ಚದ ಅಂದಾಜಿಗಿಂತ ಕಡಿಮೆಯಲ್ಲದ ಅನುದಾನ;

(ಸಿ) ವಿಶ್ವವಿದ್ಯಾನಿಲಯದ ಸೂಕ್ತ ಕಾರ್ಯನಿರ್ವಹಣೆಗಾಗಿ ರಾಜ್ಯ ಸರ್ಕಾರವು ಆವಶ್ಯಕವೆಂದು ಭಾವಿಸಬಹುದಾದಂಥ ಹೆಚ್ಚುವರಿ ಬಾಬುಗಳ ಆವರ್ತಕ ಮತ್ತು ಅನಾವರ್ತಕ ವೆಚ್ಚಗಳನ್ನು ಭರಿಸುವುದಕ್ಕೆ ಅನುದಾನ.

(2) ರಾಜ್ಯ ಸರ್ಕಾರವು, ಹತ್ತನೇ ಪಂಚವಾರ್ಷಿಕ ಯೋಜನೆಯಲ್ಲಿ ಸೇರಿಸಿದ ಮತ್ತು ವಿಶ್ವವಿದ್ಯಾನಿಲಯವು ಜಾರಿಗೊಳಿಸಲೆಂದು ವರ್ಗಾಯಿಸಿದ ಯೋಜನೆಗಳ ಸಂಬಂಧದಲ್ಲಿ ವಿಶ್ವವಿದ್ಯಾನಿಲಯಕ್ಕೆ ಕೇಂದ್ರ ಸರ್ಕಾರ ಮತ್ತು ಅಂಥ ಯೋಜನೆಗಳನ್ನು ಪ್ರಾಯೋಜಿಸಿದ ಇತರ ಏಜನ್ಸಿಗಳಿಂದ ನಿರೀಕ್ಷಿತ ಸಹಾಯವನ್ನು ಕಳೆದ ತರುವಾಯ ವಾರ್ಷಿಕ ಯೋಜನೆಯಲ್ಲಿ ತೋರಿಸಿದ ನಿವ್ವಳ ವೆಚ್ಚದ ಏರ್ಪಾಡಿಗೆ ಸಮನಾದ ಮೊತ್ತದ ಲೋಪವಾಗದಂಥ ಇಡಿಗಂಟು ಅನುದಾನವನ್ನು ಸಹ ನೀಡತಕ್ಕದ್ದು.

(3) (1)ನೇ ಉಪ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ವಿಶ್ವವಿದ್ಯಾನಿಲಯದ ಸ್ಥಾಪನೆಯ ತರುವಾಯ ಏಳನೇ ಹಣಕಾಸು ವರ್ಷದಿಂದ ಜಾರಿಗೆ ಬರುವಂತೆ, (1)ನೇ ಉಪಪ್ರಕರಣದ (ಎ) ಮತ್ತು (ಬಿ) ಖಂಡಗಳಲ್ಲಿ ಉಲ್ಲೇಖವಾದ ಚಟುವಟಿಕೆಗಳು, ಸಂಸ್ಥೆಗಳು, ಸಿಬ್ಬಂದಿ, ಸಾದಿಲ್ವಾರುಗಳು, ಸರಬರಾಜು ಮತ್ತು ಸೇವೆಗಳ ಸಂಬಂಧದಲ್ಲಿ, ಹಿಂದಿನ ಮೂರು ವರ್ಷಗಳಲ್ಲಿ ಅಂಥ ಚಟುವಟಿಕೆಗಳು ಮತ್ತು ಸಂಸ್ಥೆಗಳು, ಸಿಬ್ಬಂದಿ, ಸರಬರಾಜುಗಳು ಹಾಗೂ ಸೇವೆಗಳಿಗಾಗಿ ಮಾಡಿದ ವಾಸ್ತವ ವೆಚ್ಚದ ಸರಾಸರಿಗೆ ಕಡಿಮೆಯಲ್ಲದ ಮೊತ್ತವನ್ನು ಪ್ರತಿವರ್ಷವು ವಿಶ್ವವಿದ್ಯಾನಿಲಯಕ್ಕೆ ಲೋಪವಾಗದಂಥ ಇಡಿಗಂಟು ಅನುದಾನವಾಗಿ ಸಂದಾಯ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾನಿಲಯವು ಯಾವುದೇ ಹಣಕಾಸು ವರ್ಷದ ಏಪ್ರಿಲ್ ಒಂದನೇ ದಿನಾಂಕದ ತರುವಾಯ ಯಾವುದೇ ದಿನಾಂಕದಿಂದ ಕಾರ್ಯ ಮಾಡಲು ಪ್ರಾರಂಭಿಸಿದರೆ, (ಎ) ಮತ್ತು (ಬಿ) ಖಂಡದ ಅಡಿಯಲ್ಲಿಯ ಅನುದಾನಗಳನ್ನು, ವಿಶ್ವವಿದ್ಯಾನಿಲಯವು ಆ ಹಣಕಾಸು ವರ್ಷದಲ್ಲಿ ಬಾಕಿ ಇರುವ ಅವಧಿಯಲ್ಲಿ ವೆಚ್ಚ ಮಾಡಬೇಕಾದುದನ್ನು ಗಣನೆಗೆ ತೆಗೆದುಕೊಂಡು ನಿಗದಿಪಡಿಸತಕ್ಕದ್ದು.

(4) ವಿಶ್ವವಿದ್ಯಾನಿಲಯವು, ರಾಜ್ಯ ಸರ್ಕಾರವು ಯಾವುದೇ ಅನುದಾನವನ್ನು ನೀಡುವ ಮೊದಲು ಅದು ಅಗತ್ಯಪಡಿಸಬಹುದಾದಂಥ ಅಂಕಿ ಅಂಶಗಳು, ಲೆಕ್ಕಪತ್ರಗಳು, ವರದಿಗಳು ಹಾಗೂ ಇತರ ವಿವರಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ವಿಶ್ವವಿದ್ಯಾನಿಲಯವು, ರಾಜ್ಯ ಸರ್ಕಾರವು ನಿರ್ದೇಶಿಸಬಹುದಾದಂಥ ಅವಧಿಯೊಳಗೆ ಹಾಗೂ ಅಂಥ ವಿಧಾನದಲ್ಲಿ ಯಾವುದೇ ಅನುದಾನವನ್ನು ಬಳಸಿಕೊಂಡಿರುವ ಸಂಬಂಧದಲ್ಲಿ ಅಂಥ ಕ್ರಮವನ್ನು ತೆಗೆದುಕೊಳ್ಳತಕ್ಕದ್ದು ಮತ್ತು ಅಂಥ ಅಂಕಿ ಅಂಶಗಳು, ಲೆಕ್ಕಪತ್ರಗಳು, ವರದಿಗಳು ಹಾಗೂ ಇತರ ವಿವರಗಳನ್ನು ಒದಗಿಸತಕ್ಕದ್ದು.

(5) ಕರ್ನಾಟಕ ಸರ್ಕಾರದಿಂದ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದಿಂದ ಅಥವಾ ಕೇಂದ್ರ ಸರ್ಕಾರದಿಂದ ಅಥವಾ ಶಾಸನಬದ್ಧ ನಿಕಾಯಗಳು ಮತ್ತು ಧರ್ಮಾದಾಯಗಳು ಅಥವಾ ವಂತಿಕೆಗಳನ್ನು ತನ್ನ ಉದ್ದೇಶಗಳ ಪುರೋಭಿವೃದ್ಧಿಗಾಗಿ ವಿಶ್ವವಿದ್ಯಾನಿಲಯ ದಾನಿ ಅಥವಾ ದೇಣಿಗೆದಾರ ಸಂಸ್ಥೆ ನಡುವೆ ಮಾಡಿಕೊಂಡಂಥ ಷರತ್ತುಗಳ ಅಡಿಯಲ್ಲಿ ಸ್ವೀಕರಿಸಲು ವಿಶ್ವವಿದ್ಯಾನಿಲಯವು ಸಕ್ಷಮವಾಗಿರತಕ್ಕದ್ದು.

**41. ಲೆಕ್ಕಪರಿಶೋಧನೆಗೆ ಆದೇಶಿಸಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯ ಸರ್ಕಾರವು, ಯಾವುದೇ ಸಮಯದಲ್ಲಿ ವಿಶ್ವವಿದ್ಯಾನಿಲಯದ ಲೆಕ್ಕ ಪತ್ರಗಳ ಪರಿಶೋಧನೆಯನ್ನು ತಾನು ನಿರ್ದೇಶಿಸಬಹುದಾದಂಥ ಲೆಕ್ಕಪರಿಶೋಧಕರಿಂದ ಮಾಡಿಸಬೇಕೆಂದು ಆದೇಶಿಸಲು ಅಧಿಕಾರ ಹೊಂದಿರತಕ್ಕದ್ದು.

**42. ಹಣಕಾಸಿನ ಅಂದಾಜುಗಳು.-** (1) ಕುಲಪತಿಯು, ಮುಂಬರುವ ವರ್ಷಕ್ಕಾಗಿ ವಿಶ್ವವಿದ್ಯಾನಿಲಯದ ಹಣಕಾಸಿನ ಅಂದಾಜುಗಳನ್ನು ನಿಯಮಿಸಬಹುದಾದಂಥ ದಿನಾಂಕದಂದು ಅಥವಾ ಅದಕ್ಕೆ ಮೊದಲು ತಯಾರಿಸುವಂತೆ ಮಾಡತಕ್ಕದ್ದು ಮತ್ತು ಅನುಮೋದನೆಗಾಗಿ ಅದನ್ನು ಮಂಡಲಿಯ ಮುಂದೆ ಮಂಡಿಸತಕ್ಕದ್ದು.

(2) ಮಂಡಲಿಯು, ತಾನು ಸೂಕ್ತವೆಂದು ಭಾವಿಸಬಹುದಾದಂಥ ಮಾರ್ಪಾಡುಗಳಿಗೆ ಒಳಪಟ್ಟು ಹಣಕಾಸಿನ ಅಂದಾಜುಗಳನ್ನು ಅನುಮೋದಿಸಬಹುದು ಮತ್ತು ಮಂಡಲಿಯು ಅನುಮೋದಿಸಿದ ಹಣಕಾಸಿನ ಅಂದಾಜಿಗೆ ಅನುಸಾರವಾಗಿಯಲ್ಲದೆ ಯಾವ ವೆಚ್ಚವನ್ನೂ ಮಾಡತಕ್ಕದ್ದಲ್ಲ:

ಪರಂತು, ಕುಲಪತಿಯು, ತುರ್ತು ಪ್ರಕರಣಗಳಲ್ಲಿ ಹಾಗೂ ಲಿಖಿತದಲ್ಲಿ ಕಾರಣಗಳನ್ನು ದಾಖಲ್ಮಾಡಿ, ಆಯವ್ಯಯದಲ್ಲಿ ಅವಕಾಶವನ್ನು ಕಲ್ಪಿಸಿರದ ಅಥವಾ ಆಯವ್ಯಯದಲ್ಲಿ ಮಾಡಿದ ಏರ್ಪಾಟುಗಳಿಗಿಂತ ಹೆಚ್ಚುವರಿಯಾದ ಯಾವುದೇ ಒಂದು ಪ್ರಕರಣದಲ್ಲೂ ಹತ್ತು ಸಾವಿರ ರೂಪಾಯಿಗಳಿಗೆ ಮೀರದ ಯಾವುದೇ ವೆಚ್ಚವನ್ನು ಹಣಕಾಸು ಸಮಿತಿಗೆ ಕೇಳದೇ ಮಾಡಬಹುದು ಆದರೆ ಅಂಥ ವೆಚ್ಚವನ್ನು ಹಣಕಾಸು ಸಮಿತಿಯ ತರುವಾಯದ ಮೊದಲು ಸಭೆಯಲ್ಲಿಯೇ ವರದಿ ಮಾಡತಕ್ಕದ್ದು.

**43. ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧನೆ.-** (1) ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಕುಲಪತಿಯವರ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾನಿಲಯಕ್ಕೆ ಯಾವುದೇ ಮೂಲದಿಂದ ಪ್ರಾಪ್ತವಾಗುವ ಅಥವಾ ಅದು ಸ್ವೀಕರಿಸುವ ಎಲ್ಲಾ ಮೊಬಲಗನ್ನು ಮತ್ತು ವಿಶ್ವವಿದ್ಯಾನಿಲಯವು ವಿತರಿಸುವ ಅಥವಾ ಸಂದಾಯ ಮಾಡುವ ಎಲ್ಲಾ ಮೊತ್ತವನ್ನು ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಾರ್ಷಿಕ ಲೆಕ್ಕಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ಕುಲಪತಿಯವರು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು, ರಾಜ್ಯ ಸರ್ಕಾರವು ಈ ಸಂಬಂಧದಲ್ಲಿ ತಾನು ನೇಮಿಸಬಹುದಾದಂಥ ವ್ಯಕ್ತಿಗಳು ಲೆಕ್ಕ ಪರಿಶೋಧನೆಯನ್ನು ನಡೆಸುವಂತೆ ಮಾಡತಕ್ಕದ್ದು. ಲೆಕ್ಕಪತ್ರಗಳನ್ನು ಪರಿಶೋಧಿಸಿದ ಮೇಲೆ ಅವುಗಳನ್ನು ಮುದ್ರಿಸತಕ್ಕದ್ದು ಹಾಗೂ ಕುಲಪತಿಯವರು ಅವುಗಳ ಪ್ರತಿಗಳನ್ನು ಲೆಕ್ಕಪರಿಶೋಧನೆಯ ವರದಿಯೊಡನೆ ಮಂಡಲಿಗೆ ಮತ್ತು ಕುಲಾಧಿಪತಿಯವರಿಗೆ ಮಂಡಿಸತಕ್ಕದ್ದು.

(3) ಮಂಡಲಿಯು, ಲೆಕ್ಕಪತ್ರಗಳ ಪ್ರತಿಯನ್ನು ಹಾಗೂ ವರದಿಯನ್ನು ಲೆಕ್ಕಪರಿಶೋಧನೆಯ ವರದಿಯ ಮೇಲೆ ವಿಶ್ವವಿದ್ಯಾನಿಲಯವು ಕೈಗೊಂಡ ಕ್ರಮದ ಬಗ್ಗೆ ಒಂದು ಹೇಳಿಕೆಯೊಡನೆ ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಹಾಗೂ ರಾಜ್ಯ ಸರ್ಕಾರವು ಅವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸುವಂತೆ ಮಾಡತಕ್ಕದ್ದು.

## ಅಧ್ಯಾಯ - VI

### ಕಾಲೇಜುಗಳ ಸಂಯೋಜನೆ ಮತ್ತು ಸಂಸ್ಥೆಗಳಿಗೆ ಮನ್ನಣೆ

**44. ಕಾಲೇಜುಗಳ ಸಂಯೋಜನೆ:-** (1) ವಿಶ್ವವಿದ್ಯಾನಿಲಯದ ಪ್ರದೇಶದಲ್ಲಿರುವ ಕಾಲೇಜುಗಳನ್ನು ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಷರತ್ತುಗಳನ್ನು ಪೂರೈಸಿದ ತರುವಾಯ, ರಾಜ್ಯಸರ್ಕಾರವು ಮಾಡಿದ ಶಿಫಾರಸುಗಳ ಮೇಲೆ ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಾಗಿ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿಸತಕ್ಕದ್ದು.

(2) ರಿಜಿಸ್ಟ್ರಾರನು, ಹೊಸ ಕಾಲೇಜುಗಳ ಸಂಯೋಜನೆಯ ಬಗ್ಗೆ, ಅಸ್ತಿತ್ವದಲ್ಲಿರುವ ಸಂಯೋಜಿತ ಕಾಲೇಜುಗಳಲ್ಲಿ ಹೊಸ ವ್ಯಾಸಂಗ ಕ್ರಮಗಳು, ಸಂಯೋಜಿತ ಕಾಲೇಜುಗಳಲ್ಲಿ ಹೊಸ ವಿಷಯಗಳು ಮತ್ತು ಮಂಜೂರಾದ ಪ್ರವೇಶಾವಕಾಶದಲ್ಲಿನ ಬದಲಾವಣೆಯ ಬಗ್ಗೆ ಅರ್ಜಿಗಳ ಸ್ವೀಕೃತಿಗೆ ಕೊನೆಯ ದಿನಾಂಕವನ್ನು ನಿಗದಿಪಡಿಸಿ, ಅರ್ಜಿಗಳನ್ನು ಆಹ್ವಾನಿಸಿ ಒಂದು ಇಂಗ್ಲಿಷ್ ವೃತ್ತ ಪತ್ರಿಕೆ ಒಂದು ಕನ್ನಡ ವೃತ್ತ ಪತ್ರಿಕೆ ಹೀಗೆ ಕಡೆಯಪಕ್ಷ ಎರಡು ಪ್ರಮುಖ ವೃತ್ತ ಪತ್ರಿಕೆಗಳಲ್ಲಿ ಅಧಿಸೂಚಿಸತಕ್ಕದ್ದು. ಜಾಹೀರಾತು, ವಿಶ್ವವಿದ್ಯಾನಿಲಯವು ಅಗತ್ಯಪಡಿಸಬಹುದಾದಂಥ ಇತರ ವಿವರಗಳನ್ನು ಒಳಗೊಂಡಿರತಕ್ಕದ್ದು ಮತ್ತು ಕಾಲೇಜುಗಳು ಭಾರತೀಯ ಪಶುವೈದ್ಯ ಪರಿಷತ್ತು ಅಥವಾ ಅಂಥ ಇತರ ಪ್ರಾಧಿಕಾರಗಳ ಅನುಮೋದನೆ ಅಥವಾ ಮನ್ನಣೆಯನ್ನು ಪಡೆಯಬೇಕೆಂಬುದನ್ನು ಅಗತ್ಯಪಡಿಸಿದ್ದಲ್ಲಿ, ಆ ಬಗ್ಗೆ ನಿರ್ದಿಷ್ಟ ಸೂಚನೆಯೊಡನೆ ಸಂಯೋಜನೆಗಾಗಿ ಸಲ್ಲಿಸಬೇಕಾದ ಶುಲ್ಕದ ಮೊಬಲಗನ್ನು ಸಹ ನಿರ್ದಿಷ್ಟಪಡಿಸತಕ್ಕದ್ದು.

(3) ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗಾಗಿ ಅರ್ಜಿಸಲ್ಲಿಸುವ ಕಾಲೇಜು, ಈ ಮುಂದಿನವುಗಳಿಗೆ ಸಂಬಂಧಪಟ್ಟಂತೆ ಮಾಹಿತಿಯನ್ನು ಒದಗಿಸಿ ಜಾಹೀರಾತಿನಲ್ಲಿ ನಿಗದಿಪಡಿಸಿದ ಕಾಲಮಿತಿಯೊಳಗೆ ಅರ್ಜಿಯನ್ನು ರಿಜಿಸ್ಟ್ರಾರರಿಗೆ ಕಳುಹಿಸತಕ್ಕದ್ದು, ಎಂದರೆ:-

(ಎ) ಆ ಕಾಲೇಜು ಒದಗಿಸಲು ಉದ್ದೇಶಿಸಿದ ಶಿಕ್ಷಣದ ಮಾದರಿಯನ್ನು ನೆರೆ ಹೊರೆಯಲ್ಲಿರುವ ಇತರ ಕಾಲೇಜುಗಳು ಅದೇ ಮಾದರಿಯ ಶಿಕ್ಷಣಕ್ಕೆ ಮಾಡಿರುವ ಪ್ರಸ್ತುತ ಏರ್ಪಾಟನ್ನು ಮತ್ತು ಕಾಲೇಜನ್ನು ಯಾವ ಸ್ಥಳದಲ್ಲಿ ಸ್ಥಾಪಿಸಬೇಕಾಗಿದೆಯೋ ಆ ಸ್ಥಳದ ಸೂಕ್ತತೆಯನ್ನೂ ಗಮನದಲ್ಲಿಟ್ಟುಕೊಂಡು, ಆ ಕಾಲೇಜು ಸ್ಥಳೀಯ ಅವಶ್ಯಕತೆಯನ್ನು ಪೂರೈಸುತ್ತದೆ;

(ಬಿ) ಅದು ಕ್ರಮಬದ್ಧವಾಗಿ ರಚಿಸಲಾದ ಆಡಳಿತ ಮಂಡಲಿಯ ನಿರ್ವಹಣೆಗೆ ಒಳಪಟ್ಟಿದೆ;

(ಸಿ) ಬೋಧಕ ಸಿಬ್ಬಂದಿಯ ಸಂಖ್ಯೆ ಮತ್ತು ಅರ್ಹತೆಗಳು ಮತ್ತು ಅವರ ಪದಾವಧಿಯನ್ನು ನಿಯಂತ್ರಿಸುವ ಷರತ್ತುಗಳು ಆ ಕಾಲೇಜಿನಲ್ಲಿ ಕೈಗೊಳ್ಳಬೇಕಾದ ಶಿಕ್ಷಣ, ಬೋಧನೆ ಅಥವಾ ತರಬೇತಿಗಳ ವ್ಯಾಸಂಗ ಕ್ರಮಗಳಿಗೆ ತಕ್ಕ ಏರ್ಪಾಟನ್ನು ಮಾಡುವಂಥದ್ದಾಗಿದೆ;

(ಡಿ) ಕಾಲೇಜನ್ನು ನಡೆಸುವಂಥ ಕಟ್ಟಡಗಳು ಸೂಕ್ತವಾಗಿವೆ ಮತ್ತು ತಂದೆ ತಾಯಿಗಳ ಅಥವಾ ಪಾಲಕರ ಜೊತೆಯಲ್ಲಿ ವಾಸವಾಗಿರದೆ ಇರುವ ವಿದ್ಯಾರ್ಥಿಗಳಿಗಾಗಿ ಆ ಕಾಲೇಜಿನಲ್ಲಿ ಅಥವಾ ಆ ಕಾಲೇಜು ಅನುಮೋದಿಸಿದ ವಸತಿಗಳಲ್ಲಿ ನಿವಾಸಕ್ಕಾಗಿ ಹಾಗೂ ಮೇಲ್ವಿಚಾರಣೆ ಮತ್ತು ಕಲ್ಯಾಣಕ್ಕಾಗಿ, ಪರಿನಿಯಮಗಳು ಮತ್ತು ವಿನಿಯಮಗಳಿಗೆ ಅನುಗುಣವಾಗಿ ಏರ್ಪಾಟು ಮಾಡಲಾಗುವುದು;

(ಇ) ಗ್ರಂಥಾಲಯಕ್ಕಾಗಿ ಸೂಕ್ತ ವ್ಯವಸ್ಥೆ ಮಾಡಲಾಗಿದೆ;

(ಎಫ್) ಪ್ರಾಯೋಗಿಕ ವಿಜ್ಞಾನದ ಯಾವುದೇ ಶಾಖೆಯಲ್ಲಿ ಸಂಯೋಜನೆಯನ್ನು ಕೋರಿರುವಲ್ಲಿ, ಪರಿನಿಯಮಗಳು ಮತ್ತು ವಿನಿಯಮಗಳಿಗೆ ಅನುಗುಣವಾಗಿ ಆ ವಿಜ್ಞಾನದ ಶಾಖೆಯಲ್ಲಿ ಶಿಕ್ಷಣ ಕೊಡುವುದಕ್ಕಾಗಿ ಸರಿಯಾದ ರೀತಿಯಲ್ಲಿ ಸಜ್ಜುಗೊಳಿಸಿದ ಪ್ರಯೋಗಶಾಲೆ ಅಥವಾ ವಸ್ತು ಸಂಗ್ರಹಾಲಯದಲ್ಲಿ ವ್ಯವಸ್ಥೆಗಳನ್ನು ನಿರ್ದಿಷ್ಟಪಡಿಸಿದ ಅವಧಿಯೊಳಗೆ ಮಾಡಲಾಗಿದೆ ಅಥವಾ ಮಾಡಲಾಗುವುದು;

(ಜಿ) ಸನ್ನಿವೇಶಗಳಲ್ಲಿ ಅವಕಾಶವಿರುವಷ್ಟರ ಮಟ್ಟಿಗೆ ಕಾಲೇಜಿನ ಪರಿಮಿತಿಯಲ್ಲಿ ಅಥವಾ ಅದರ ಹತ್ತಿರ ಅಥವಾ ವಿದ್ಯಾರ್ಥಿಗಳ ನಿವಾಸಕ್ಕಾಗಿ ಒದಗಿಸಿರುವ ಸ್ಥಳದಲ್ಲಿ ಪ್ರಾಂಶುಪಾಲರ ಮತ್ತು ಬೋಧಕ ಸಿಬ್ಬಂದಿಯ ಸದಸ್ಯರ ವಸತಿಗಾಗಿ ಸೂಕ್ತ ಏರ್ಪಾಟು ಮಾಡತಕ್ಕದ್ದು;

(ಎಚ್) ಆ ಕಾಲೇಜಿನ ಹಣಕಾಸು ಸಂಪನ್ಮೂಲಗಳು ಅದರ ನಿರಂತರ ನಿರ್ವಹಣೆ ಮತ್ತು ದಕ್ಷ ಕಾರ್ಯ ನಿರ್ವಹಣೆಗಾಗಿ ತಕ್ಕ ಏರ್ಪಾಟು ಮಾಡುವಂತಹವು ಆಗಿವೆ; ಮತ್ತು

(ಐ) ವಿದ್ಯಾರ್ಥಿಗಳು ಸಂದಾಯ ಮಾಡಬೇಕಾದ ಫೀಜು ಏನಾದರೂ ಇದ್ದರೆ ಅದನ್ನು ನಿಗದಿಮಾಡುವ ನಿಯಮಗಳನ್ನು ರಚಿಸಲಾಗಿದೆ.

(4) ಹೊಸ ಕಾಲೇಜುಗಳಿಗೆ ಸಂಯೋಜನೆಯ ಅರ್ಜಿಗಳನ್ನು, ರಾಜ್ಯಸರ್ಕಾರದ ನೆರವು ಇಲ್ಲದೆಯೇ ಕಾಲೇಜುಗಳನ್ನು ನಡೆಸಲು ಸಾಧ್ಯವಾಗುವಂತೆ ಹಣಕಾಸು ಪರಿಸ್ಥಿತಿಯನ್ನು ಹೊಂದಿರುವ, ನೋಂದಾಯಿತ ಸಂಘ ಅಥವಾ ನೋಂದಾಯಿತ ಸಾರ್ವಜನಿಕ ನ್ಯಾಸದಿಂದ ಮಾತ್ರವೇ ಅಂಗೀಕರಿಸತಕ್ಕದ್ದು, ಆದರೆ ವ್ಯಕ್ತಿಗಳಿಂದ ಅಂಗೀಕರಿಸತಕ್ಕದ್ದಲ್ಲ.

(5) ಅರ್ಜಿಯ ಜೊತೆಗೆ, ಕಾಲೇಜನ್ನು ಸಂಯೋಜಿಸಿದ ನಂತರ ರಾಜ್ಯಸರ್ಕಾರ ಮತ್ತು ವಿಶ್ವವಿದ್ಯಾನಿಲಯದ ಪೂರ್ವಾನುಮೋದನೆ ಇಲ್ಲದೆ ವ್ಯವಸ್ಥಾಪನೆಯಲ್ಲಿ ಯಾವುದೇ ವರ್ಗಾವಣೆ ಅಥವಾ ಕಾಲೇಜಿನ ಹೆಸರಿನಲ್ಲಿ ಮತ್ತು ಅಭಿನಾಮದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲವೆಂಬ ಬಗ್ಗೆ ಒಂದು ಮುಚ್ಚಳಿಕೆಯು ಇರತಕ್ಕದ್ದು.

(6) (2)ನೇ ಉಪಪ್ರಕರಣದ ಮೇರೆಗೆ ಅರ್ಜಿಯನ್ನು ಸ್ವೀಕರಿಸಿದ ತರುವಾಯ, ಅದನ್ನು ಪರಿಶೀಲನೆಗಾಗಿ ಮಂಡಲಿಯ ಮುಂದೆ ಇಡತಕ್ಕದ್ದು. ಮಂಡಲಿಯು ಸಂಯೋಜನೆಯ ಪ್ರತಿಯೊಂದು ಅರ್ಜಿಯನ್ನು ಪರಿಶೀಲಿಸಿದ ತರುವಾಯ ಒಂದು ಸ್ಥಳೀಯ ವಿಚಾರಣಾ ಸಮಿತಿಯಿಂದ ಸ್ಥಳೀಯ ವಿಚಾರಣೆಗೆ ನಿರ್ದೇಶನ ನೀಡತಕ್ಕದ್ದು:

ಪರಂತು, ಸ್ಥಳೀಯ ವಿಚಾರಣಾ ಸಮಿತಿಯು, ಅನುಸೂಚಿತ ಜಾತಿಗಳಿಗೆ ಅಥವಾ ಅನುಸೂಚಿತ ಪಂಗಡಗಳಿಗೆ ಸೇರಿದ ಕನಿಷ್ಠಪಕ್ಷ ಒಬ್ಬ ಸದಸ್ಯರನ್ನು ಒಳಗೊಂಡಿರತಕ್ಕದ್ದು.

(7) ಸ್ಥಳೀಯ ವಿಚಾರಣಾ ಸಮಿತಿಯು, ಅದನ್ನು ರಚಿಸಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ, ಒಂದು ವರದಿಯನ್ನು ವಿದ್ಯಾ ವಿಷಯಕ ಪರಿಷತ್ತಿಗೆ ಸಲ್ಲಿಸತಕ್ಕದ್ದು.

(8) ವಿದ್ಯಾವಿಷಯಕ ಪರಿಷತ್ತು, ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಸ್ವೀಕರಿಸಿದ ತರುವಾಯ ಕೂಡಲೇ ವರದಿಯಲ್ಲಿ ವಿವರಿಸಿದ ಸಮಿತಿಯ ತೀರ್ಮಾನಗಳನ್ನು ಪರಿಗಣಿಸತಕ್ಕದ್ದು ಮತ್ತು ತನಗೆ ಅವಶ್ಯಕವೆಂದು ಕಂಡುಬರಬಹುದಾದಂಥ ಹೆಚ್ಚಿನ ವಿಚಾರಣೆಯನ್ನು ಮಾಡತಕ್ಕದ್ದು ಮತ್ತು ಅಂಥ ಕೋರಿಕೆಯ ಮೇಲೆ ತನ್ನ ಅಭಿಪ್ರಾಯವನ್ನು ದಾಖಲು ಮಾಡತಕ್ಕದ್ದು ಮತ್ತು ಅದನ್ನು ಮಂಡಲಿಗೆ ಕಳುಹಿಸತಕ್ಕದ್ದು.

(9) ಮಂಡಲಿಯು, ಸಮಿತಿಯ ವರದಿಯನ್ನು ಮತ್ತು ವಿದ್ಯಾವಿಷಯಕ ಪರಿಷತ್ತಿನ ಗೊತ್ತುವಳಿಯನ್ನು ಪರಿಗಣಿಸತಕ್ಕದ್ದು ಮತ್ತು ತಾನು ಅವಶ್ಯವೆಂದು ಭಾವಿಸಬಹುದಾದಂಥ ಹೆಚ್ಚಿನ ವಿಚಾರಣೆಯನ್ನು ಮಾಡಿದ ತರುವಾಯ ಮನವಿಯನ್ನು ಪೂರ್ಣವಾಗಿ ಅಥವಾ ಭಾಗಶಃ ಮಂಜೂರು ಮಾಡಬೇಕೇ ಅಥವಾ ನಿರಾಕರಿಸಬೇಕೇ ಎಂಬ ಪ್ರಶ್ನೆಯ ಬಗ್ಗೆ ತನ್ನ ಅಭಿಪ್ರಾಯವನ್ನು ದಾಖಲಿಸತಕ್ಕದ್ದು.

(10) ರಿಜಿಸ್ಟ್ರಾರನು, ಅರ್ಜಿಯನ್ನು ಮತ್ತು ಅದರ ಅಡಕಗಳನ್ನು, ಅನುಬಂಧಗಳನ್ನು, ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾ ವಿಷಯಕ ಪರಿಷತ್ತಿನ ಹಾಗೂ ಮಂಡಲಿಯ ಎಲ್ಲ ನಡವಳಿಗಳನ್ನು ಮುಂಬರುವ ವರ್ಷದ ಮಾರ್ಚ್ ಮೂವತ್ತೊಂದಕ್ಕೆ ಮೊದಲು ಅಂತಿಮ ತೀರ್ಮಾನ ಕೈಗೊಳ್ಳುವುದಕ್ಕಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(11) ರಾಜ್ಯ ಸರ್ಕಾರವು, ಸ್ಥಳೀಯ ವಿಚಾರಣಾ ಸಮಿತಿಯ, ವಿದ್ಯಾ ವಿಷಯಕ ಪರಿಷತ್ತಿನ ಮತ್ತು ಮಂಡಲಿಯ ಶಿಫಾರಸ್ಸುಗಳ ಹಿನ್ನೆಲೆಯಲ್ಲಿ ಅಂಥ ಅರ್ಜಿಗಳನ್ನು ಪರಿಗಣಿಸತಕ್ಕದ್ದು ಮತ್ತು ಅವಶ್ಯಕವೆಂದು ಅದಕ್ಕೆ ಕಂಡು ಬರಬಹುದಾದಂಥ ವಿಚಾರಣೆಯ ತರುವಾಯ ಪ್ರವೇಶಾವಕಾಶದಲ್ಲಿ ವ್ಯತ್ಯಾಸಗಳೂ ಸೇರಿದಂತೆ, ಸಂಯೋಜಿಸಲು ಅಥವಾ ಸಂದರ್ಭಾನುಸಾರ ಸಂಯೋಜನೆಯನ್ನು ಅಥವಾ ಅದರ ಯಾವುದೇ ಭಾಗವನ್ನು ನಿರಾಕರಿಸಲು ವಿಶ್ವವಿದ್ಯಾನಿಲಯಕ್ಕೆ ತನ್ನ ಶಿಫಾರಸುಗಳನ್ನು ಮಾಡತಕ್ಕದ್ದು.

(12) ವಿಶ್ವವಿದ್ಯಾನಿಲಯವು, ರಾಜ್ಯ ಸರ್ಕಾರದ ನಿರ್ದೇಶನಗಳನ್ನು ಸ್ವೀಕರಿಸಿದ ತರುವಾಯ ಅದರಂತೆ ಔಪಚಾರಿಕ ಆದೇಶಗಳನ್ನು ಹೊರಡಿಸತಕ್ಕದ್ದು.

(13) ಆದಾಗ್ಯೂ ಸಂಯೋಜನೆಯ ಮಂಜೂರಾತಿಯು, ಭಾರತೀಯ ಪಶುವೈದ್ಯಕೀಯ ಪರಿಷತ್ತು ಅಥವಾ ಅಂಥ ಇತರ ಪ್ರಾಧಿಕಾರಗಳು ಅಥವಾ ಸಂಬಂಧಪಟ್ಟ ನಿಕಾಯಗಳ ಪೂರ್ವಾನುಮೋದನೆಗೆ ಒಳಪಟ್ಟಿರತಕ್ಕದ್ದು ಮತ್ತು ನಿರ್ಧರಿಸಲಾದ ಪ್ರವೇಶಾವಕಾಶದ ಸಂಖ್ಯೆಯು, ಅಂಥ ಪ್ರಾಧಿಕಾರಗಳು ಅಥವಾ ನಿಕಾಯಗಳು ಆ ಸಂಖ್ಯೆಯನ್ನು ನಿರ್ದಿಷ್ಟಪಡಿಸಿದ್ದರೆ ಅದನ್ನು ಮೀರತಕ್ಕದ್ದಲ್ಲ.

(14) ಸಂಯೋಜನೆಗಾಗಿ ಅಥವಾ ಪ್ರವೇಶಾವಕಾಶದ ಸಂಖ್ಯೆಯನ್ನು ನಿಗದಿಪಡಿಸುವುದಕ್ಕಾಗಿ ಅಥವಾ ಅದರ ಯಾವುದೇ ಭಾಗಕ್ಕಾಗಿ, ಅರ್ಜಿಯನ್ನು ರಾಜ್ಯ ಸರ್ಕಾರದ ಶಿಫಾರಸ್ಸಿನ ಮೇಲೆ ವಿಶ್ವವಿದ್ಯಾನಿಲಯವು ಮಂಜೂರ್ಮಾಡಿದ್ದರೆ, ವಿಶ್ವವಿದ್ಯಾನಿಲಯವು, ನಿರ್ದಿಷ್ಟ ಷರತ್ತುಗಳೊಡನೆ ಅಥವಾ ಷರತ್ತುಗಳಿಲ್ಲದೆ, ನಿರ್ದಿಷ್ಟ ಪ್ರವೇಶಾವಕಾಶದ ಸಂಖ್ಯೆಯೊಡನೆ ಯಾವ ವ್ಯಾಸಂಗ ಕ್ರಮಗಳ ಸಂಬಂಧದಲ್ಲಿ ಮತ್ತು ಯಾವ ಅವಧಿಗಾಗಿ, ಕಾಲೇಜನ್ನು ಅಥವಾ ವ್ಯಾಸಂಗ ಕ್ರಮವನ್ನು ಸಂಯೋಜಿಸಲಾಗಿದೆಯೋ, ಆ ವ್ಯಾಸಂಗಕ್ರಮಗಳನ್ನು ಮತ್ತು ಅವಧಿಯನ್ನು ಆದೇಶದಲ್ಲಿ ನಿರ್ದಿಷ್ಟಪಡಿಸತಕ್ಕದ್ದು.

(15) ಅಂಥ ಅರ್ಜಿಯನ್ನು ಅಥವಾ ಅದರ ಯಾವುದೇ ಭಾಗವನ್ನು ರಾಜ್ಯಸರ್ಕಾರವು ಅಥವಾ ವಿಶ್ವವಿದ್ಯಾನಿಲಯವು ನಿರಾಕರಿಸಿದ್ದರೆ, ಹಾಗೆ ನಿರಾಕರಿಸಲು ಕಾರಣಗಳನ್ನು ತಿಳಿಸತಕ್ಕದ್ದು.

(16) (1)ನೇ ಉಪ-ಪ್ರಕರಣದ ಅಡಿಯಲ್ಲಿ ಸಲ್ಲಿಸಿದ ಯಾವುದೇ ಅರ್ಜಿಯನ್ನು (12)ನೇ ಉಪ-ಪ್ರಕರಣದ ಅಡಿಯಲ್ಲಿ ಆದೇಶವನ್ನು ಮಾಡುವುದಕ್ಕೆ ಮೊದಲು ಯಾವುದೇ ಸಮಯದಲ್ಲಿ ಅರ್ಜಿದಾರನು ಹಿಂದಕ್ಕೆ ಪಡೆಯಬಹುದು.

(17) ಪ್ರತಿಯೊಂದು ಶೈಕ್ಷಣಿಕ ವರ್ಷಕ್ಕಾಗಿ, ಪ್ರಸಕ್ತ ಇರುವ ವ್ಯಾಸಂಗ ಕ್ರಮಗಳಿಗಾಗಿ ಮತ್ತು ಹೊಸ ವ್ಯಾಸಂಗ ಕ್ರಮಗಳನ್ನು ಹೊರತುಪಡಿಸಿ ಅನುಸರಣಾ ವ್ಯಾಸಂಗ ಕ್ರಮಗಳಿಗಾಗಿ ಸಂಯೋಜನೆಯನ್ನು ವಿಸ್ತರಿಸುವುದಕ್ಕಾಗಿ, ಮಂಜೂರಾತಿಯನ್ನು ಮಂಡಲಿಯು ಹೊಸ ಸಂಯೋಜನೆಯ ಮಂಜೂರಾತಿಗೆ ಅನ್ವಯವಾಗುವ ರೀತಿಯಲ್ಲಿಯೇ, ವಿದ್ಯಾವಿಷಯಕ ಪರಿಷತ್ತಿನೊಡನೆ ಸಮಾಲೋಚಿಸಿ ನೀಡಬಹುದು.

(18) ರಾಜ್ಯ ಸರ್ಕಾರವು ಪ್ರತಿಯೊಂದು ವ್ಯಾಸಂಗ ಕ್ರಮದ ಸಂಬಂಧದಲ್ಲಿ ಪ್ರವೇಶಾವಕಾಶವನ್ನು ವಾರ್ಷಿಕ ಆಧಾರದಲ್ಲಿ ನಿರ್ಧರಿಸತಕ್ಕದ್ದು.

**45. ಹೊಸ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಪ್ರವೇಶಕ್ಕೆ ನಿರ್ಬಂಧ.-** (1) ವಿಶ್ವವಿದ್ಯಾನಿಲಯವು, ಹೊಸ ಕಾಲೇಜಿಗೆ ಅಥವಾ ಸಂದರ್ಭಾನುಸಾರ ಪ್ರಸಕ್ತ ಸಂಯೋಜಿತ ಕಾಲೇಜಿನಲ್ಲಿ ಹೊಸ ವ್ಯಾಸಂಗ ಕ್ರಮಕ್ಕೆ ಅಂಥ ವ್ಯಾಸಂಗ ಕ್ರಮದ ಸಂಬಂಧದಲ್ಲಿ ಅಥವಾ ನಿರ್ದಿಷ್ಟ ಪ್ರವೇಶಾವಕಾಶ ಬದಲಾವಣೆಗಾಗಿ ಸಂಯೋಜನೆ ನೀಡಿದ್ದ ಹೊರತು, ಯಾವುದೇ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆ ಕೋರುವ ಹೊಸ

ಕಾಲೇಜಿನಲ್ಲಿ ಅಥವಾ ಹೊಸ ವ್ಯಾಸಂಗ ಕ್ರಮಕ್ಕಾಗಿ ಅಥವಾ ನಿರ್ದಿಷ್ಟ ಪಡಿಸಿದ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಗಾಗಿ ಸಂಯೋಜನೆ ಕೋರುವ ಪ್ರಸಕ್ತ ಕಾಲೇಜಿನಲ್ಲಿ ವಿದ್ಯಾರ್ಥಿಗಳನ್ನು ಪ್ರವೇಶ ಮಾಡಿಸಿಕೊಳ್ಳತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಉಪಬಂಧಗಳನ್ನು ಉಲ್ಲಂಘಿಸುವ ಯಾವುದೇ ಸಂಸ್ಥೆಯು ಕರ್ನಾಟಕ ಮಾನ್ಯತೆ ಪಡೆಯದ ಮತ್ತು ಸಂಯೋಜನೆ ಹೊಂದಿರದ ವಿದ್ಯಾಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ ಅಧಿನಿಯಮ, 1992ರ (1993ರ ಕರ್ನಾಟಕ ಅಧಿನಿಯಮ 7) ಅಡಿಯಲ್ಲಿ ಕ್ರಮಕೈಗೊಳ್ಳುವುದಕ್ಕೆ ಗುರಿಯಾಗತಕ್ಕದ್ದು.

**46. ಪರೀಕ್ಷೆಗಳಿಗೆ ಹಾಜರಾಗಲು ನಿರ್ಬಂಧ.-** ತನ್ನ ಪ್ರವೇಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ತನ್ನ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯು, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹನಾಗಿರತಕ್ಕದ್ದಲ್ಲ.

**47. ಖಾಯಂ ಸಂಯೋಜನೆ.-** (1) ಐದು ವರ್ಷಗಳಿಗೆ ಕಡಿಮೆ ಇಲ್ಲದ ಅವಧಿಗೆ ನಿರಂತರವಾಗಿ ಸಂಯೋಜನೆಗೊಂಡಿರುವ ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿರ್ದಿಷ್ಟಪಡಿಸಿದ ಸಂಯೋಜನೆಯ ಎಲ್ಲ ಷರತ್ತುಗಳನ್ನು ಪೂರೈಸಿರುವ ಮತ್ತು ವಿದ್ಯಾ ವಿಷಯದಲ್ಲಿ ಉತ್ಕೃಷ್ಟತೆ ಸಾಧಿಸಿದ ಹಾಗೂ ಆಡಳಿತಾತ್ಮಕ ಗುಣಮಟ್ಟಗಳನ್ನು ಹೊಂದಿರುವ ಕಾಲೇಜು ಖಾಯಂ ಸಂಯೋಜನೆಯ ಮಂಜೂರಾತಿಗೆ ಅರ್ಹವಾಗಿರತಕ್ಕದ್ದು.

(2) 45ನೇ ಪ್ರಕರಣದ ಉಪಬಂಧಗಳು, ಯಥೋಚಿತ ವ್ಯತ್ಯಾಸಗಳೊಂದಿಗೆ ಖಾಯಂ ಸಂಯೋಜನೆಯ ಮಂಜೂರಾತಿಗೆ ಅನ್ವಯವಾಗತಕ್ಕದ್ದು.

(3) ಖಾಯಂ ಆಗಿ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡ ಕಾಲೇಜಿನ, ಆಡಳಿತಾತ್ಮಕ ಮತ್ತು ಶೈಕ್ಷಣಿಕ ಕಾರ್ಯವೈಖರಿಯು, ಐದು ವರ್ಷಗಳ ಅವಧಿಯಲ್ಲಿ ಕೊನೇಪಕ್ಷ ಒಂದು ಸಲವಾದರೂ ಆಗಾಗ್ಗೆ, ವಿಶ್ವವಿದ್ಯಾನಿಲಯದ ಮತ್ತು ರಾಜ್ಯಸರ್ಕಾರದ ಪರಿಶೀಲನೆಗೆ ಒಳಪಟ್ಟಿರತಕ್ಕದ್ದು.

(4) ಪೂರ್ವೋಕ್ತ ಉಪ-ಪ್ರಕರಣಗಳಲ್ಲಿ ಏನೇ ಒಳಗೊಂಡಿದ್ದರೂ, ಖಾಯಂ ಆಗಿ ಸಂಯೋಜನೆಗೊಂಡ ಕಾಲೇಜು, (1)ನೇ ಉಪ-ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಯಾವುವೇ ಷರತ್ತುಗಳನ್ನು ಪೂರೈಸಲು ವಿಫಲವಾಗಿದ್ದಲ್ಲಿ, ಅದರ ಖಾಯಂ ಸಂಯೋಜನೆಯನ್ನು ರದ್ದುಪಡಿಸತಕ್ಕದ್ದು:

ಪರಂತು, ಸಂಬಂಧಪಟ್ಟ ಕಾಲೇಜಿಗೆ ತನ್ನ ಅಹವಾಲು ಹೇಳಿಕೊಳ್ಳಲು ವಿಶ್ವವಿದ್ಯಾನಿಲಯವು ಒಂದು ಅವಕಾಶ ಕೊಟ್ಟ ಹೊರತು ಖಾಯಂ ಸಂಯೋಜನೆಯನ್ನು, ರದ್ದುಗೊಳಿಸತಕ್ಕದ್ದಲ್ಲ:

ಮತ್ತು ಪರಂತು, ಖಾಯಂ ಸಂಯೋಜನೆಯನ್ನು ರದ್ದುಗೊಳಿಸಿದ ತರುವಾಯ ಸಂಬಂಧಪಟ್ಟ ಕಾಲೇಜು, ವಾರ್ಷಿಕ ಆಧಾರದ ಮೇಲೆ ತಾತ್ಕಾಲಿಕ ಸಂಯೋಜನೆಯನ್ನು ಕೋರತಕ್ಕದ್ದು.

**48. ಸಂಯೋಜನೆಯನ್ನು ಹಿಂತೆಗೆದುಕೊಳ್ಳುವುದು.-** (1) ಸಂಯೋಜನೆಗೊಂಡ ಕಾಲೇಜು ಈ ಅಧಿನಿಯಮದ ಯಾವುವೇ ಉಪಬಂಧಗಳನ್ನು ಪಾಲಿಸಲು ವಿಫಲಗೊಂಡರೆ ಅಥವಾ ಸಂಯೋಜನೆಯ ಯಾವುವೇ ಷರತ್ತುಗಳನ್ನು ಪಾಲಿಸಲು ವಿಫಲಗೊಂಡರೆ ಅಥವಾ ಕಾಲೇಜನ್ನು ಶಿಕ್ಷಣದ ಹಿತಾಸಕ್ತಿಗಳಿಗೆ ಧಕ್ಕೆ ಉಂಟುಮಾಡುವ ರೀತಿಯಲ್ಲಿ ನಡೆಸಿಕೊಂಡು ಬರುತ್ತಿದ್ದರೆ, ಸಂಯೋಜನೆಯ ಮೂಲಕ ಕಾಲೇಜಿಗೆ ತಾತ್ಕಾಲಿಕವಾಗಿ ಅಥವಾ ಶಾಶ್ವತವಾಗಿ ಪ್ರದತ್ತವಾದ ಹಕ್ಕುಗಳನ್ನು ಪೂರ್ತಿಯಾಗಿ ಅಥವಾ ಭಾಗಶಃ ಹಿಂತೆಗೆದುಕೊಳ್ಳಬಹುದು ಅಥವಾ ಮಾರ್ಪಾಟು ಮಾಡಬಹುದು.

(2) ಅಂಥ ಹಕ್ಕುಗಳನ್ನು ಹಿಂತೆಗೆದುಕೊಳ್ಳುವುದಕ್ಕೆ ಅಥವಾ ಮಾರ್ಪಾಟು ಮಾಡುವುದಕ್ಕೆ ಸೂಚನೆಯನ್ನು ಮಂಡಲಿಯ ಸಭೆಯಲ್ಲಿ ಮಾತ್ರ ಮಂಡಿಸತಕ್ಕದ್ದು. ಮಂಡಲಿಯ ಪದನಿಮಿತ್ತ ಸದಸ್ಯನೂ ಒಳಗೊಂಡಂತೆ ಅಂಥ ಸೂಚನೆಯನ್ನು ಮಂಡಿಸಲು ಉದ್ದೇಶಿಸುವ ಯಾವೊಬ್ಬ ಸದಸ್ಯನು ಯಾವ ಕಾರಣದ ಮೇಲೆ ಅಂಥ ಸೂಚನೆಯನ್ನು ಮಂಡಿಸಲಾಗಿದೆಯೋ ಆ ಕಾರಣಗಳನ್ನು ಲಿಖಿತದಲ್ಲಿ ನಿರೂಪಿಸಿ ಒಂದು ನೋಟೀಸನ್ನು ಕೊಡತಕ್ಕದ್ದು.

(3) ಸದರಿ ಸೂಚನೆಯನ್ನು ಪರಿಗಣನೆಗೆ ತೆಗೆದುಕೊಳ್ಳುವುದಕ್ಕೆ ಮೊದಲು ಮಂಡಲಿಯು, ನೋಟೀಸಿನ ಒಂದು ಪ್ರತಿಯನ್ನು, ತನ್ನ ತಿಳಿವಳಿಕೆ ಪತ್ರದಲ್ಲಿ ನಿರ್ದಿಷ್ಟ ಪಡಿಸಿದ ಅವಧಿಯೊಳಗೆ ಆ ಕಾಲೇಜು ಸದರಿ ಸೂಚನೆಯ ಮೇಲೆ ತನ್ನ ಯಾವುದೇ ಮನವಿಯನ್ನು ಬರೆದು ಸಲ್ಲಿಸತಕ್ಕದ್ದೆಂದು ಮತ್ತು ಅದನ್ನು ಮಂಡಲಿಯು ಪರ್ಯಾಲೋಚಿಸುವುದು ಎಂದು ನಿರ್ದಿಷ್ಟವಾಗಿ ತಿಳಿಸಿದ ಪತ್ರದೊಂದಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ ಕಳುಹಿಸತಕ್ಕದ್ದು.

(4) (3)ನೇ ಉಪ-ಪ್ರಕರಣದಲ್ಲಿ ಹಾಗೆ ನಿರ್ದಿಷ್ಟಪಡಿಸಿದ ಅವಧಿಯನ್ನು, ಅವಶ್ಯವಿದ್ದಲ್ಲಿ, ಮಂಡಲಿಯು ಸಮಂಜಸ ಸಮಯದವರೆಗೆ ವಿಸ್ತರಿಸಬಹುದು.

(5) ಮನವಿಯನ್ನು ಸ್ವೀಕರಿಸಿದ ಮೇಲೆ ಅಥವಾ ಹಿಂದಿನ ಉಪಪ್ರಕರಣಗಳಲ್ಲಿ ಉಲ್ಲೇಖಿಸಲಾದ ಅವಧಿಯು ಮುಗಿದಮೇಲೆ, ಮಂಡಲಿಯು ಸೂಚನೆಯ ನೋಟೀಸನ್ನು, ಅದರಲ್ಲಿ ತಿಳಿಸಿದ ಕಾರಣಗಳನ್ನು ಮತ್ತು ಅದರ ಮೇಲೆ ಸಲ್ಲಿಸಿದ ಮನವಿಯನ್ನು ಪರ್ಯಾಲೋಚಿಸಿದ ತರುವಾಯ ಮತ್ತು ಈ ಸಂಬಂಧದಲ್ಲಿ ತಾನು ರಚಿಸಿ ಪ್ರಾಧಿಕಾರ ನೀಡಿದ ಸಮಿತಿಯು ಅಂಥ ಪರಿಶೀಲನೆಯನ್ನು ನಡೆಸಿದ ತರುವಾಯ ಮತ್ತು ತನಗೆ ಅವಶ್ಯವೆಂದು ಕಂಡುಬರಬಹುದಾದಂಥ ಹೆಚ್ಚಿನ ವಿಚಾರಣೆಯನ್ನು ನಡೆಸಿದ ತರುವಾಯ, ಆ ಬಗೆಗಿನ

ಕಾರಣಗಳಿಗೆ ಸಂಬಂಧಿಸಿದಂತೆ ಒಂದು ನಿರ್ಣಯವನ್ನು ಜಾರಿಗೊಳಿಸಬಹುದು ಮತ್ತು ಅದನ್ನು ವಿದ್ಯಾವಿಷಯಕ ಪರಿಷತ್ತಿಗೆ ಕಳುಹಿಸಿಕೊಡತಕ್ಕದ್ದು.

(6) (5)ನೇ ಉಪ-ಪ್ರಕರಣದ ಅಡಿಯಲ್ಲಿನ ಒಂದು ವರದಿಯನ್ನು ಸ್ವೀಕರಿಸಿದ ಮೇಲೆ, ವಿದ್ಯಾವಿಷಯಕ ಪರಿಷತ್ತು ಅದಕ್ಕೆ ಅವಶ್ಯವೆಂದು ಕಂಡು ಬರಬಹುದಾದಂಥ ಹೆಚ್ಚಿನ ವಿಚಾರಣೆ ಯಾವುದಾದರೂ ಇದ್ದರೆ ಅದನ್ನು ಮಾಡಿದ ತರುವಾಯ, ಆ ವಿಷಯದಲ್ಲಿ ತನ್ನ ಅಭಿಪ್ರಾಯವನ್ನು ಅಭಿಲೇಖಿಸತಕ್ಕದ್ದು ಮತ್ತು ಅದನ್ನು ಮಂಡಲಿಗೆ ವಾಪಸು ಕಳುಹಿಸತಕ್ಕದ್ದು.

(7) ಮಂಡಲಿಯು, ವಿದ್ಯಾವಿಷಯಕ ಪರಿಷತ್ತಿನ ನಿರ್ಣಯವನ್ನು ಪರ್ಯಾಲೋಚಿಸಿದ ತರುವಾಯ ಸಂಯೋಜನೆಯನ್ನು ಹಿಂತೆಗೆದು ಕೊಳ್ಳಬೇಕೆಂದು ಶಿಫಾರಸ್ಸು ಮಾಡುವ ಅಂತಿಮ ನಿರ್ಣಯವನ್ನು ಜಾರಿಗೊಳಿಸತಕ್ಕದ್ದು. ಅಂಥ ನಿರ್ಣಯಕ್ಕೆ ಮಂಡಲಿಯ ಸಭೆಯಲ್ಲಿ ಹಾಜರಿದ್ದ ಸದಸ್ಯರ ಮೂರನೇ ಎರಡರಷ್ಟು ಸದಸ್ಯರ ಬೆಂಬಲ ದೊರೆತ ಹೊರತು ನಿರ್ಣಯವು ಮಂಡಳಿಯಿಂದ ಅಂಗೀಕೃತವಾಗಿರುವುದಾಗಿ ಭಾವಿಸತಕ್ಕದ್ದಲ್ಲ.

(8) ರಿಜಿಸ್ಟ್ರಾರನು ಪ್ರಸ್ತಾವವನ್ನು, ಸೂಚನೆಯ ನೋಟೀಸು, ಕಾಲೇಜಿನ ಉತ್ತರ, ಮಂಡಲಿಯ ಮತ್ತು ವಿದ್ಯಾವಿಷಯಕ ಪರಿಷತ್ತಿನ ನಿರ್ಣಯವೂ ಒಳಗೊಂಡಂತೆ ಎಲ್ಲಾ ದಸ್ತಾವೇಜುಗಳೊಂದಿಗೆ ತೀರ್ಮಾನ ಕೈಗೊಳ್ಳುವುದಕ್ಕಾಗಿ ರಾಜ್ಯಸರ್ಕಾರಕ್ಕೆ ಒಪ್ಪಿಸತಕ್ಕದ್ದು.

(9) ರಾಜ್ಯ ಸರ್ಕಾರವು, ತನಗೆ ಅವಶ್ಯವೆಂದು ಕಂಡುಬರಬಹುದಾದಂಥ ಹೆಚ್ಚಿನ ವಿಚಾರಣೆಯನ್ನು ನಡೆಸಿದ ತರುವಾಯ, ಒಂದು ನಿರ್ದಿಷ್ಟ ಶೈಕ್ಷಣಿಕ ವರ್ಷದಿಂದ ಅನ್ವಯವಾಗುವಂತೆ, ಸಂಯೋಜನೆಯನ್ನು ಪೂರ್ತಿಯಾಗಿ ಅಥವಾ ಭಾಗಶಃ ಹಿಂತೆಗೆದು ಕೊಳ್ಳುವಂತೆ ಅಥವಾ ಮಾರ್ಪಾಟು ಮಾಡುವಂತೆ ಅಥವಾ ಪ್ರಸ್ತಾವವನ್ನು ತಿರಸ್ಕರಿಸುವಂತೆ ವಿಶ್ವವಿದ್ಯಾನಿಲಯಕ್ಕೆ ನಿರ್ದೇಶಿಸಬಹುದು.

(10) ವಿಶ್ವವಿದ್ಯಾನಿಲಯವು, ಅಂಥ ನಿರ್ದೇಶನವನ್ನು ಸ್ವೀಕರಿಸಿದ ಮೇಲೆ ಅಂಥ ನಿರ್ದೇಶನಕ್ಕೆ ಅನುಸಾರವಾಗಿ ಔಪಚಾರಿಕ ಆದೇಶವನ್ನು ಹೊರಡಿಸತಕ್ಕದ್ದು.

(11) ಸಂಯೋಜನೆಯನ್ನು ಪೂರ್ಣವಾಗಿ ಅಥವಾ ಭಾಗಶಃ ಹಿಂತೆಗೆದುಕೊಂಡ ಕಾಲೇಜಿನ ವಿದ್ಯಾರ್ಥಿಗಳಿಗೆ, ನಿರ್ದಿಷ್ಟ ವ್ಯಾಸಂಗ ಕ್ರಮದ ಸಂಬಂಧದಲ್ಲಿ ಹಾಗೆ ಸ್ಥಳಾವಕಾಶ ಕಲ್ಪಿಸಬೇಕಾದಂಥ ವಿದ್ಯಾರ್ಥಿಗಳ ಸಂಖ್ಯೆಯವರೆಗೆ ಪ್ರವೇಶ ಸಂಖ್ಯೆಯನ್ನು ಹೆಚ್ಚಿಸುವ ಮೂಲಕ, ವಿಶ್ವವಿದ್ಯಾನಿಲಯವು, ಹತ್ತಿರದಲ್ಲಿರುವ ಕಾಲೇಜಿನಲ್ಲಿ ಅಂಥ ವಿದ್ಯಾರ್ಥಿಗಳಿಗೆ ಸ್ಥಳಾವಕಾಶವನ್ನು ಕಲ್ಪಿಸುವ ವ್ಯವಸ್ಥೆ ಮಾಡತಕ್ಕದ್ದು. ಅಂಥ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಸಂಯೋಜನೆಯನ್ನು ಹಿಂತೆಗೆದುಕೊಂಡ ಕಾಲೇಜಿನಿಂದ ವಿಶ್ವವಿದ್ಯಾನಿಲಯವು ಅವರನ್ನು ವರ್ಗಾಯಿಸಿದ ಕಾಲೇಜಿಗೆ ವರ್ಗಾಯಿಸತಕ್ಕದ್ದು.

**49. ಕಾಲೇಜು ಅಥವಾ ವ್ಯಾಸಂಗ ಕ್ರಮವನ್ನು ಸ್ವಯಂ ಮುಚ್ಚುವಿಕೆ:** (1) ತನ್ನ ಅಸಾಮರ್ಥ್ಯದ ಅಥವಾ ಹಣಕಾಸು ದೃಷ್ಟಿಯಿಂದ ಊರ್ಜಿತವಾಗದಿರುವ ಕಾರಣದಿಂದ ಅಥವಾ ಆಡಳಿತ ವ್ಯವಸ್ಥೆಯ ಕುಸಿತದ ದೃಷ್ಟಿಯಿಂದ ಕಾಲೇಜನ್ನು ಅಥವಾ ವ್ಯಾಸಂಗಕ್ರಮವನ್ನು ಮುಚ್ಚಲು ಉದ್ದೇಶಿಸಿರುವಂತಹ ಯಾವುದೇ ಕಾಲೇಜಿನ ಆಡಳಿತ ಮಂಡಳಿಯು, ವಿಶ್ವವಿದ್ಯಾನಿಲಯಕ್ಕೆ ಮತ್ತು ರಾಜ್ಯಸರ್ಕಾರಕ್ಕೆ, ಕಾಲೇಜನ್ನು ಮುಚ್ಚುವುದಕ್ಕೆ ಮೊದಲು ಮೂರು ತಿಂಗಳುಗಳಿಗಿಂತ ಕಡಿಮೆಯಿಲ್ಲದಂತೆ ಆ ಬಗ್ಗೆ ಕಾರಣಗಳನ್ನು ತಿಳಿಸಿ ಲಿಖಿತ ನೋಟೀಸನ್ನು ನೀಡತಕ್ಕದ್ದು.

(2) ಕಾಲೇಜಿನ ಅಥವಾ ವ್ಯಾಸಂಗ ಕ್ರಮದ ಮುಚ್ಚುವಿಕೆಯ ಅರ್ಜಿಯನ್ನು ವಿದ್ಯಾವಿಷಯಕ ಪರಿಷತ್ತು ಮತ್ತು ಮಂಡಳಿಯು ಪರಿಗಣಿಸತಕ್ಕದ್ದು ಮತ್ತು ಅವುಗಳು ಅದರ ಮೇಲೆ ಸೂಕ್ತ ಗೊತ್ತುವಳಿಗಳನ್ನು ಮಾಡತಕ್ಕದ್ದು.

(3) ರಿಜಿಸ್ಟ್ರಾರನು, ಅರ್ಜಿಯನ್ನು ಮತ್ತು ವಿದ್ಯಾವಿಷಯಕ ಪರಿಷತ್ತಿನ ಮತ್ತು ಮಂಡಲಿಯ ಗೊತ್ತುವಳಿಗಳನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು, ಅದು ಅದನ್ನು ಪರಿಗಣಿಸಿದ ತರುವಾಯ ಮುಚ್ಚುವ ಬಗ್ಗೆ ಅನುಮತಿ ನೀಡುವ ಅಥವಾ ಮುಚ್ಚುವಿಕೆಗೆ ಅನುಮತಿ ನಿರಾಕರಿಸುವ ಬಗ್ಗೆ ವಿಶ್ವವಿದ್ಯಾನಿಲಯಕ್ಕೆ ನಿರ್ದೇಶನ ನೀಡತಕ್ಕದ್ದು ಮತ್ತು ವಿಶ್ವವಿದ್ಯಾನಿಲಯವು ಅಂಥ ನಿರ್ದೇಶನಗಳನ್ನು ಸ್ವೀಕರಿಸಿದ ತರುವಾಯ ಅದಕ್ಕನುಸಾರ ಆದೇಶಗಳನ್ನು ಹೊರಡಿಸತಕ್ಕದ್ದು.

(4) ಆಡಳಿತ ಮಂಡಳಿಯು, ಶೈಕ್ಷಣಿಕ ವರ್ಷದ ಚಾಲ್ತಿ ಅವಧಿಯಲ್ಲಿ ಮತ್ತು ವಿಶ್ವವಿದ್ಯಾನಿಲಯವು ಸಂಬಂಧಪಟ್ಟ ವ್ಯಾಸಂಗ ಕ್ರಮದ ವಾರ್ಷಿಕ ಪರೀಕ್ಷೆಗಳನ್ನು ನಡೆಸುವವರೆಗೆ ಮತ್ತು ವಿಶ್ವವಿದ್ಯಾನಿಲಯವು ಹಾಗೆ ಮಾಡುವುದಕ್ಕಾಗಿ ಒಂದು ಔಪಚಾರಿಕ ಆದೇಶವನ್ನು ಹೊರಡಿಸುವವರೆಗೆ ಕಾಲೇಜನ್ನು ಅಥವಾ ವ್ಯಾಸಂಗ ಕ್ರಮವನ್ನು ಮುಚ್ಚತಕ್ಕದ್ದಲ್ಲ.

(5) ಕಾಲೇಜನ್ನು ಅಥವಾ ವ್ಯಾಸಂಗ ಕ್ರಮವನ್ನು ಮುಚ್ಚಲು ಅನುಮತಿ ನೀಡಿದಂಥ ಕಾಲೇಜುಗಳ ವಿದ್ಯಾರ್ಥಿಗಳನ್ನು ಹಾಗೆ ಕಾಲೇಜನ್ನು ಮುಚ್ಚಿದ ನಂತರ, ವಿಶ್ವವಿದ್ಯಾನಿಲಯವು, ಹತ್ತಿರವಿರುವ ಕಾಲೇಜಿನಲ್ಲಿ ಸಂಬಂಧಪಟ್ಟ ವ್ಯಾಸಂಗ ಕ್ರಮದಲ್ಲಿ ಪ್ರವೇಶ ಸಂಖ್ಯೆಯನ್ನು ಹಾಗೆ ಮುಚ್ಚಿದ ಕಾಲೇಜಿನಿಂದ ಸ್ಥಳಾವಕಾಶ ನೀಡಬೇಕಾದ ವಿದ್ಯಾರ್ಥಿಗಳ ಸಂಖ್ಯೆಯ ಮಟ್ಟಿಗೆ ಹೆಚ್ಚಿಸಿ ಅವರಿಗೆ ಸ್ಥಳಾವಕಾಶವನ್ನು ನೀಡತಕ್ಕದ್ದು ಮತ್ತು ಅಂಥ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಎಲ್ಲ ದಾಖಲೆಗಳನ್ನು ಹಾಗೆ ಮುಚ್ಚಲ್ಪಟ್ಟ ಕಾಲೇಜಿನಿಂದ, ಯಾವ ಕಾಲೇಜಿಗೆ ಅಂಥ ವಿದ್ಯಾರ್ಥಿಗಳು ಪ್ರವೇಶವನ್ನು ಪಡೆದಿರುವರೋ ಅಲ್ಲಿಗೆ ವರ್ಗಾಯಿಸತಕ್ಕದ್ದು.

(6) (1)ನೇ ಉಪಪ್ರಕರಣದ ಅಡಿಯಲ್ಲಿನ ನೋಟೀಸಿನ ಅವಧಿಯು ಮುಕ್ತಾಯವಾದ ತರುವಾಯ ತೊಂಬತ್ತು ದಿನಗಳೊಳಗೆ, ಹಾಗೆ ಮುಚ್ಚುವ ಬಗ್ಗೆ ಅನುಮತಿ ನೀಡುವ ಅಥವಾ ನಿರಾಕರಿಸುವ ಯಾವುದೇ ನಿರ್ದೇಶನವನ್ನು ರಾಜ್ಯ ಸರ್ಕಾರವು ನೀಡದಿದ್ದರೆ, (4)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು, ಕಾಲೇಜನ್ನು ಅಥವಾ ಸಂದರ್ಭಾನುಸಾರ ವ್ಯಾಸಂಗ ಕ್ರಮವನ್ನು ಮುಚ್ಚಲು ಆಡಳಿತ ಮಂಡಲಿಗೆ ಅನುಮತಿ ನೀಡಲಾಗಿದೆ ಎಂದು ಭಾವಿಸತಕ್ಕದ್ದು.

**50. ಕೆಲವು ಸಂಸ್ಥೆಗಳಿಗೆ ಮನ್ನಣೆ:** (1) ಸಂಶೋಧನೆ ಅಥವಾ ನಿರ್ದಿಷ್ಟಪಡಿಸಿದ ಅಧ್ಯಯನಗಳನ್ನು ಅಥವಾ ಪರಿಣಿತ ಅಧ್ಯಯನಗಳನ್ನು ನಡೆಸುವ ಕಾಲೇಜನ್ನು ಹೊರತುಪಡಿಸಿ, ವಿಶ್ವವಿದ್ಯಾನಿಲಯ ಪ್ರದೇಶದ ಒಳಗೆ ಅಥವಾ ಹೊರಗೆ ಇರುವ ಯಾವುದೇ ಸಂಸ್ಥೆಯನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ಉದ್ದೇಶಕ್ಕಾಗಿ ಮತ್ತು ಅಂಥ ರೀತಿಯಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು, ಮಂಡಲಿಯು, ಮನ್ನಣೆ ಪಡೆದ ಸಂಸ್ಥೆಯೆಂದು ಮಾನ್ಯತೆ ನೀಡಬಹುದು.

(2) ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಕಾರಣಗಳಿಗಾಗಿ, ಅಂಥ ಮನ್ನಣೆಯನ್ನು ಪೂರ್ಣವಾಗಿಯಾಗಲಿ ಅಥವಾ ಭಾಗಶಃವಾಗಿಯಾಗಲಿ ಹಿಂತೆಗೆದುಕೊಳ್ಳಬಹುದು ಅಥವಾ ಮಾರ್ಪಾಟು ಮಾಡಬಹುದು.

**51. ಕಾಲೇಜುಗಳ ಪರಿವೀಕ್ಷಣೆ:** (1) ಖಾಯಂ ಆಗಿ ಸಂಯೋಜನೆಗೊಂಡ ಕಾಲೇಜು ಸೇರಿದಂತೆ ಸಂಯೋಜನೆಗೊಂಡ ಪ್ರತಿಯೊಂದು ಕಾಲೇಜು, ವಿದ್ಯಾ ವಿಷಯಕ ಪರಿಷತ್ತಿನೊಡನೆ ಸಮಾಲೋಚನೆ ನಡೆಸಿದ ತರುವಾಯ, ಮಂಡಲಿಯು ಆ ಕಾಲೇಜಿನ ದಕ್ಷತೆಯನ್ನು ಮತ್ತು ಸಾಧಿಸಿದ ಶೈಕ್ಷಣಿಕ ಗುಣಮಟ್ಟವನ್ನು ತೀರ್ಮಾನಿಸುವುದಕ್ಕೆ ಅಗತ್ಯಪಡಿಸಬಹುದಾದಂಥ ವರದಿಗಳನ್ನು, ವಿವರಪತ್ರಗಳನ್ನು ಮತ್ತು ಇತರ ಮಾಹಿತಿಯನ್ನು ರಿಜಿಸ್ಟ್ರಾರರಿಗೆ ಒದಗಿಸತಕ್ಕದ್ದು.

(2) ಮಂಡಲಿಯು ಅಂಥ ಪ್ರತಿಯೊಂದು ಕಾಲೇಜನ್ನು, ಈ ಬಗ್ಗೆ ರಚಿತವಾದ ಸಮಿತಿಯೊಂದು ಕಾಲಕಾಲಕ್ಕೆ ಪರಿವೀಕ್ಷಣೆ ನಡೆಸುವಂತೆ ಮಾಡತಕ್ಕದ್ದು.

(3) ಮಂಡಲಿಯು, ಹಾಗೆ ಪರಿವೀಕ್ಷಿಸಲಾದ ಯಾವುದೇ ಕಾಲೇಜನ್ನು, ನಿರ್ದಿಷ್ಟಪಡಿಸಿದ ಅವಧಿಯೊಳಗೆ ಯಾವುದೇ ವಿಷಯಗಳಿಗೆ ಸಂಬಂಧಿಸಿದಂತೆ ತನಗೆ ಅವಶ್ಯವೆಂದು ಕಂಡುಬರಬಹುದಾದಂಥ ಕ್ರಮ ಕೈಗೊಳ್ಳಲು ಕೇಳಬಹುದು.

(4) ಎಲ್ಲಾ ಶೈಕ್ಷಣಿಕ, ಆಡಳಿತಾತ್ಮಕ ವಿಷಯಗಳು ಹಾಗೂ ಅದಕ್ಕೆ ಪೂರಕವಾದ ವಿಷಯಗಳ ಸಂಬಂಧವಾಗಿ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ನಿರ್ದೇಶನಗಳನ್ನು ಪ್ರತಿಯೊಂದು ಕಾಲೇಜು ಪಾಲಿಸತಕ್ಕದ್ದು.

## ಅಧ್ಯಾಯ - VII

## ಪರಿನಿಯಮಗಳು ಮತ್ತು ವಿನಿಯಮಗಳು

**52. ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು, ಪರಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುವೇ ವಿಷಯಗಳಿಗೆ ಉಪಬಂಧ ಕಲ್ಪಿಸಬಹುದು, ಎಂದರೆ:-

(ಎ) ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ರಚನೆ, ಅಧಿಕಾರಗಳು, ಪ್ರಕಾರ್ಯಗಳು ಹಾಗೂ ಕರ್ತವ್ಯಗಳು;

(ಬಿ) ಮೊದಲಿನ ಸದಸ್ಯರು ಪದದಲ್ಲಿ ಮುಂದುವರಿಯುವುದೂ ಒಳಗೊಂಡಂತೆ ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಅಥವಾ ನಿಕಾಯಗಳ ಸದಸ್ಯರ ನೇಮಕ ಮತ್ತು ಸದಸ್ಯರ ಖಾಲಿ ಸ್ಥಾನಗಳನ್ನು ತುಂಬುವುದು ಹಾಗೂ ಪ್ರಾಧಿಕಾರಗಳಿಗೆ ಮತ್ತು ನಿಕಾಯಗಳಿಗೆ ಸಂಬಂಧಪಟ್ಟಂತೆ ಯಾವ ವಿಷಯಗಳಿಗೆ ಉಪಬಂಧಕಲ್ಪಿಸುವುದು ಅವಶ್ಯಕವಾಗಬಹುದೋ ಅಥವಾ ಅಪೇಕ್ಷಣೀಯವಾಗಬಹುದೋ ಆ ಎಲ್ಲ ಇತರ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸುವುದು;

(ಸಿ) ವಿಶ್ವವಿದ್ಯಾನಿಲಯದ ಅಧಿಕಾರಿಗಳ ಪದನಾಮ, ನೇಮಕಾತಿ ವಿಧಾನ, ಅಧಿಕಾರಗಳು ಹಾಗೂ ಕರ್ತವ್ಯಗಳು;

(ಡಿ) ವಿಶ್ವವಿದ್ಯಾನಿಲಯದ ಅಧ್ಯಾಪಕರು ಹಾಗೂ ಇತರ ನೌಕರರ ಮತ್ತು ಸಂಯೋಜಿತ ಕಾಲೇಜುಗಳ ಅಧ್ಯಾಪಕರ ಆಯ್ಕೆ ವಿಧಾನಗಳು;

(ಇ) ವಿಶ್ವವಿದ್ಯಾನಿಲಯದ ಅಧಿಕಾರಿಗಳ, ಅಧ್ಯಾಪಕರ ಮತ್ತು ಇತರ ನೌಕರರ ಅಧಿಕಾರಗಳು ಹಾಗೂ ಕರ್ತವ್ಯಗಳು;

(ಎಫ್) ವಿಶ್ವವಿದ್ಯಾನಿಲಯದ ಅಧಿಕಾರಿಗಳ, ಅಧ್ಯಾಪಕರ ಹಾಗೂ ಇತರ ನೌಕರರ ಪ್ರಯೋಜನಕ್ಕಾಗಿ ನಿವೃತ್ತಿ ನಿಧಿ, ಉಪದಾನ ನಿಧಿ ಹಾಗೂ ಭವಿಷ್ಯ ನಿಧಿಗಳ ರಚನೆ;

(ಜಿ) ಪದವಿಗಳ ಪ್ರದಾನ ಮತ್ತು ಡಿಪ್ಲೋಮಾ ನೀಡಿಕೆಗಾಗಿ ಘಟಿಕೋತ್ಸವಗಳನ್ನು ನಡೆಸುವುದು;

(ಎಚ್) ಪದವಿಗಳ ಮತ್ತು ಡಿಪ್ಲೋಮಾಗಳ ಸ್ಥಾಪನೆ;

(ಡಿ) ಗೌರವ ಪದವಿಗಳನ್ನು ಪ್ರದಾನ ಮಾಡುವುದು;

(ಜೆ) ವಿಭಾಗಗಳ ಸ್ಥಾಪನೆ, ಸಮ್ಮಿಲನ, ಉಪವಿಭಾಗೀಕರಣ ಹಾಗೂ ರದ್ದತಿ;

(ಕೆ) ವಿಶ್ವವಿದ್ಯಾನಿಲಯವು ನಿರ್ವಹಿಸುವ ವಿದ್ಯಾರ್ಥಿನಿಲಯಗಳ ಸ್ಥಾಪನೆ ಮತ್ತು ರದ್ದತಿ;

(ಎಲ್) ಫೆಲೋಶಿಪ್‌ಗಳು, ವಿದ್ಯಾರ್ಥಿ ವೇತನಗಳು, ಶಿಷ್ಯವೇತನ-ಬರ್ಸರಿಗಳು, ಪದಕಗಳು ಮತ್ತು ಪಾರಿತೋಷಕಗಳ ಸ್ಥಾಪನೆ;

(ಎಮ್) ನೋಂದಾಯಿತ ಪದವೀಧರರ ರಿಜಿಸ್ಟರ್‌ನ್ನು ನಿರ್ವಹಿಸುವುದು;

(ಎನ್) ವಿಶ್ವವಿದ್ಯಾನಿಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ಹೆಸರನ್ನು ದಾಖಲಿಸುವುದು ಹಾಗೂ ಹಾಗೆ ಮುಂದುವರೆಯುವುದು;

(ಓ) ವಿಶ್ವವಿದ್ಯಾನಿಲಯದ ಪದವಿಗಳಿಗೆ ಹಾಗೂ ಡಿಪ್ಲೋಮಾಗಳಿಗೆ ನಿಗದಿಪಡಿಸಬೇಕಾದ ವ್ಯಾಸಂಗ ವಿಷಯಗಳು;

(ಪಿ) ಪದವಿ, ಡಿಪ್ಲೋಮಾ ಅಥವಾ ಇತರ ವ್ಯಾಸಂಗ ಕ್ರಮಗಳಿಗೆ ಹಾಗೂ ವಿಶ್ವವಿದ್ಯಾನಿಲಯದ ಪರೀಕ್ಷೆಗಳಿಗೆ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಮತ್ತು ಪದವಿಗಳನ್ನು ಪ್ರದಾನ ಮಾಡಲು ಹಾಗೂ ಡಿಪ್ಲೋಮಾಗಳನ್ನು ನೀಡಲು ಷರತ್ತುಗಳು;

(ಕ್ಯೂ) ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ನಿವಾಸದ ಹಾಗೂ ವಿಶ್ವವಿದ್ಯಾನಿಲಯವು ನಿರ್ವಹಿಸುವ ವಿದ್ಯಾರ್ಥಿನಿಲಯಗಳಲ್ಲಿ ವಾಸಿಸುವುದಕ್ಕಾಗಿ ಶುಲ್ಕವನ್ನು ವಿಧಿಸುವ ಷರತ್ತುಗಳು;

(ಆರ್) ವಿಶ್ವವಿದ್ಯಾನಿಲಯವು ನಿರ್ವಹಿಸದ ವಿದ್ಯಾರ್ಥಿನಿಲಯಗಳ ಮಾನ್ಯತೆ ಮತ್ತು ಮೇಲ್ವಿಚಾರಣೆ;

(ಎಸ್) ವಿಶ್ವವಿದ್ಯಾನಿಲಯದ ಅಧಿಕಾರಿಗಳ, ಅಧ್ಯಾಪಕರ ಮತ್ತು ಇತರ ನೌಕರರ ಸಂಖ್ಯೆ, ವಿದ್ಯಾರ್ಹತೆಗಳು, ಉಪಲಬ್ಧಿಗಳು ಹಾಗೂ ಇತರ ಷರತ್ತುಗಳು ಮತ್ತು ಅವರ ಸೇವೆಗಳ ಹಾಗೂ ಚಟುವಟಿಕೆಗಳ ದಾಖಲೆಗಳನ್ನು ತಯಾರಿಸುವುದು ಮತ್ತು ನಿರ್ವಹಿಸುವುದು;

(ಟಿ) ಯಾವುದೇ ಉದ್ದೇಶಕ್ಕಾಗಿ ವಿಶ್ವವಿದ್ಯಾನಿಲಯವು ವಿಧಿಸಬಹುದಾದ ಶುಲ್ಕ;

(ಯು) ವಿದ್ಯಾರ್ಥಿನಿಲಯಗಳಲ್ಲಿ ಬೋಧನೆ ನೀಡಲು ಅರ್ಹ ವ್ಯಕ್ತಿಗಳೆಂದು ಮಾನ್ಯತೆ ನೀಡಲು ಷರತ್ತುಗಳು;

(ವಿ) ಪರೀಕ್ಷಾ ನಿಕಾಯಗಳು, ಪರೀಕ್ಷಕರು ಮತ್ತು ಮಾಡರೇಟರ್‌ಗಳ ಷರತ್ತುಗಳು ಹಾಗೂ ನೇಮಕಾತಿಯ ವಿಧಾನ ಮತ್ತು ಕರ್ತವ್ಯಗಳು;

(ಡಬ್ಲ್ಯೂ) ಪರೀಕ್ಷೆಗಳನ್ನು ನಡೆಸುವುದು;

(ಎಕ್ಸ್) ವಿಶ್ವವಿದ್ಯಾನಿಲಯದ ವ್ಯವಹಾರದಲ್ಲಿ ನಿಯೋಜಿತರಾದ ವ್ಯಕ್ತಿಗಳಿಗೆ ನೀಡಬೇಕಾದ ಸಂಭಾವನೆ ಹಾಗೂ ಪ್ರಯಾಣ ಹಾಗೂ ದಿನಭತ್ಯೆಗಳು ಸೇರಿದಂತೆ ಭತ್ಯೆಗಳು;

(ವೈ) ಫೆಲೋಶಿಪ್‌ಗಳು, ಶಿಷ್ಯವೇತನಗಳು, ಪದಕಗಳು ಮತ್ತು ಪಾರಿತೋಷಕಗಳು, ಸ್ಟೈಫಂಡ್‌ಗಳು ಹಾಗೂ ಶುಲ್ಕಗಳ ರಿಯಾಯಿತಿಗಳನ್ನು ನೀಡುವದಕ್ಕಾಗಿನ ಷರತ್ತುಗಳು; ಮತ್ತು

(ಜಡ್) ಈ ಅಧಿನಿಯಮದ ಮೂಲಕ ಅಥವಾ ಪರಿನಿಯಮಗಳ ಮೂಲಕ ಉಪಬಂಧಿಸಬೇಕಾದ ಅಥವಾ ಉಪಬಂಧಿಸಬಹುದಾದ ಎಲ್ಲಾ ಇತರ ವಿಷಯಗಳು.

**53. ಪರಿನಿಯಮಗಳನ್ನು ಮಾಡುವ ಬಗ್ಗೆ.-** (1) ಈ ಮುಂದೆ ಉಪಬಂಧಿಸಲಾದ ರೀತಿಯಲ್ಲಿ ಮಂಡಲಿಯು ಪರಿನಿಯಮಗಳನ್ನು ರಚಿಸತಕ್ಕದ್ದು, ತಿದ್ದುಪಡಿ ಮಾಡತಕ್ಕದ್ದು ಅಥವಾ ನಿರಸನಗೊಳಿಸತಕ್ಕದ್ದು.

(2) ವಿದ್ಯಾ ವಿಷಯಕ ಪರಿಷತ್ತು ಮಂಡಲಿಯು ಅಂಗೀಕರಿಸಬೇಕಾದ ಯಾವುದೇ ಪರಿನಿಯಮದ ಕರಡನ್ನು ಮಂಡಲಿಗೆ ಕಳುಹಿಸತಕ್ಕದ್ದು ಮತ್ತು ಅಂಥ ಕರಡನ್ನು ಮಂಡಲಿಯು ತನ್ನ ಮುಂಬರುವ ಸಭೆಯಲ್ಲಿ ಅಂಗೀಕರಿಸತಕ್ಕದ್ದು:

ಪರಂತು, ವಿದ್ಯಾ ವಿಷಯಕ ಪರಿಷತ್ತು ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದ ಅಥವಾ ನಿಕಾಯದ ಸ್ಥಾನಮಾನ, ರಚನೆ ಅಥವಾ ಅಧಿಕಾರಗಳಿಗೆ ಬಾಧಕವಾಗುವ ಪರಿನಿಯಮದ ಕರಡಿನ ಅಥವಾ ಪರಿನಿಯಮದ ತಿದ್ದುಪಡಿಗಳ ಕರಡಿನ ಪ್ರಸ್ತಾವವನ್ನು ಅಂಥ ಪ್ರಾಧಿಕಾರ ಅಥವಾ ನಿಕಾಯಕ್ಕೆ ಆ ಪ್ರಸ್ತಾವದ ಬಗ್ಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಲು ಒಂದು ಅವಕಾಶವನ್ನು ನೀಡುವವರೆಗೆ ಸಲ್ಲಿಸತಕ್ಕದ್ದಲ್ಲ ಹಾಗೂ ಹಾಗೆ ವ್ಯಕ್ತಪಡಿಸಿದ ಯಾವುದೇ ಅಭಿಪ್ರಾಯವನ್ನು ಮಂಡಲಿಯು ಅಂಗೀಕರಿಸತಕ್ಕದ್ದು.

(3) ಮಂಡಲಿಯು (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದಂಥ ಯಾವುದೇ ಕರಡನ್ನು ಅನುಮೋದಿಸಬಹುದು ಹಾಗೂ ಪರಿನಿಯಮವನ್ನು ಪೂರ್ಣವಾಗಿಯಾಗಲಿ ಅಥವಾ ಭಾಗಶಃವಾಗಿಯಾಗಲಿ ಅಂಗೀಕರಿಸಬಹುದು ಅಥವಾ ಅದನ್ನು ತಿರಸ್ಕರಿಸಬಹುದು ಅಥವಾ ಪುನಃ ಪರಿಶೀಲನೆಗಾಗಿ ಅದನ್ನು ವಿದ್ಯಾವಿಷಯಕ ಪರಿಷತ್ತಿಗೆ ತಾನು ಸೂಚಿಸಬಹುದಾದ ಯಾವುದೇ ತಿದ್ದುಪಡಿಗಳೊಡನೆ ಹಿಂದಿರುಗಿಸಬಹುದು.

(4) ಮಂಡಲಿಯ ಯಾವೊಬ್ಬ ಸದಸ್ಯನು ಯಾವುದೇ ಪರಿನಿಯಮದ ಕರಡನ್ನು ಪ್ರಸ್ತಾವಿಸಬಹುದು ಹಾಗೂ ಮಂಡಲಿಯು, ಪ್ರಸ್ತಾವವನ್ನು ಅಂಗೀಕರಿಸಬಹುದು ಅಥವಾ ಪ್ರಸ್ತಾವವು ವಿದ್ಯಾವಿಷಯಕ ಪರಿಷತ್ತಿನ ಪರಿಧಿಯೊಳಗೆ ಬರದ ವಿಷಯಕ್ಕೆ ಸಂಬಂಧಿಸಿದ್ದರೆ ತಿರಸ್ಕರಿಸಬಹುದು. ಒಂದು ವೇಳೆ ಆ ಕರಡು ವಿದ್ಯಾ ವಿಷಯಕ ಪರಿಷತ್ತಿನ ಪರಿಧಿಯೊಳಗೆ ಬರುವ ವಿಷಯಕ್ಕೆ ಸಂಬಂಧಿಸಿದ್ದರೆ, ಮಂಡಲಿಯು, ವಿದ್ಯಾವಿಷಯಕ ಪರಿಷತ್ತಿಗೆ ಅದನ್ನು ಪರಿಗಣನೆಗಾಗಿ ಕಳುಹಿಸತಕ್ಕದ್ದು, ವಿದ್ಯಾವಿಷಯಕ ಪರಿಷತ್ತು ತಾನು ಪ್ರಸ್ತಾವವನ್ನು ಅಂಗೀಕರಿಸಿಲ್ಲವೆಂಬ ಒಂದು ವರದಿಯನ್ನು ಮಂಡಲಿಗೆ ಕಳುಹಿಸಬಹುದು, ಆಗ ಅದು ಮಂಡಲಿಯಿಂದ ತಿರಸ್ಕೃತವಾಗಿದೆಯೆಂದು ಭಾವಿಸತಕ್ಕದ್ದು ಅಥವಾ ವಿದ್ಯಾವಿಷಯಕ ಪರಿಷತ್ತು ತಾನು ಅನುಮೋದಿಸಬಹುದಾದಂಥ ನಮೂನೆಯಲ್ಲಿ ಮಂಡಲಿಗೆ ಕರಡನ್ನು ಸಲ್ಲಿಸಬಹುದು ಹಾಗೂ ಈ ಪ್ರಕರಣದ ಉಪಬಂಧಗಳು, ವಿದ್ಯಾವಿಷಯಕ ಪರಿಷತ್ತು ಮಂಡಲಿಗೆ ಒಂದು ಕರಡು ಪ್ರಸ್ತಾವ ಸಲ್ಲಿಸಿದ್ದರೆ ಹೇಗೆ ಅನ್ವಯವಾಗುತ್ತಿತ್ತೋ ಹಾಗೆ ಸಲ್ಲಿಸಲಾದ ಕರಡಿಗೆ ಅನ್ವಯಿಸತಕ್ಕದ್ದು.

(5) ಒಂದು ಹೊಸ ಪರಿನಿಯಮ ಅಥವಾ ಪರಿನಿಯಮಗಳಿಗೆ ಸೇರ್ಪಡೆ ಅಥವಾ ಯಾವುದೇ ತಿದ್ದುಪಡಿ ಅಥವಾ ಪರಿನಿಯಮಕ್ಕೆ ಕುಲಾಧಿಪತಿಯ ಪೂರ್ವಾನುಮೋದನೆ ಅಗತ್ಯವಾಗಿದೆ ಮತ್ತು ಕುಲಾಧಿಪತಿಯವರು ಅದನ್ನು ಮಂಜೂರು ಮಾಡಬಹುದು, ನಿರಾಕರಿಸಬಹುದು ಅಥವಾ ಮರು ಪರಿಗಣನೆಗೆ ಹಿಂತಿರುಗಿಸಬಹುದು.

(6) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ಪರಿನಿಯಮವನ್ನು ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು.

**54. ವಿನಿಯಮಗಳು.-** (1) ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮ ಹಾಗೂ ಪರಿನಿಯಮಗಳಿಗೆ ಸಂಗತವಾದ ವಿನಿಯಮಗಳನ್ನು ರಚಿಸಬಹುದು,-

(ಎ) ಅವುಗಳ ಸಭೆಗಳಲ್ಲಿ ಪಾಲಿಸಬೇಕಾದ ಕಾರ್ಯ ವಿಧಾನ ಮತ್ತು ಕೋರಂಗಾಗಿ ಅಗತ್ಯವಿರುವ ಸದಸ್ಯರ ಸಂಖ್ಯೆ;

(ಬಿ) ಈ ಅಧಿನಿಯಮ ಅಥವಾ ಪರಿನಿಯಮಗಳ ಪ್ರಕಾರ ವಿನಿಯಮಗಳ ಮೂಲಕ ಉಪಬಂಧಿಸಬೇಕಾದ ವಿಷಯಗಳನ್ನು ಉಪಬಂಧಿಸುವುದಕ್ಕಾಗಿ;

(ಸಿ) ಈ ಅಧಿನಿಯಮ ಮತ್ತು ಪರಿನಿಯಮಗಳಿಂದ ಉಪಬಂಧಿಸಿರದ ಮತ್ತು ಅಂಥ ಪ್ರಾಧಿಕಾರಗಳಿಗೇ ಪೂರ್ಣವಾಗಿ ಸಂಬಂಧಪಟ್ಟ ಯಾವುದೇ ಇತರ ವಿಷಯಗಳನ್ನು ಉಪಬಂಧಿಸುವುದಕ್ಕಾಗಿ.

(2) ವಿಶ್ವವಿದ್ಯಾನಿಲಯದ ಪ್ರತಿಯೊಂದು ಪ್ರಾಧಿಕಾರವು ಸಭೆಗಳ ದಿನಾಂಕಗಳ ಬಗ್ಗೆ ಹಾಗೂ ಸಭೆಯಲ್ಲಿ ಪರಿಗಣಿಸುವ ಕಾರ್ಯಕಲಾಪಗಳ ಬಗ್ಗೆ ಆ ಪ್ರಾಧಿಕಾರದ ಸದಸ್ಯರಿಗೆ ನೋಟೀಸುಗಳನ್ನು ನೀಡಲು ಹಾಗೂ ಸಭೆಗಳ ನಡವಳಿಗಳ ದಾಖಲೆಗಳನ್ನು ಇಟ್ಟುಕೊಳ್ಳಲು ಉಪಬಂಧಕಲ್ಪಿಸುವುದಕ್ಕಾಗಿ ವಿನಿಯಮಗಳನ್ನು ರಚಿಸತಕ್ಕದ್ದು.

(3) ವಿದ್ಯಾವಿಷಯಕ ಪರಿಷತ್ತು ಪರಿನಿಯಮಗಳ ಉಪಬಂಧಗಳಿಗೊಳಪಟ್ಟು, ಸಂಬಂಧಿಸಿದ ಅಧ್ಯಯನ ಮಂಡಲಿಯಿಂದ ವಿನಿಯಮಗಳ ಕರಡನ್ನು ಸ್ವೀಕರಿಸಿದ ತರುವಾಯ ವಿದ್ಯಾ ವ್ಯಾಸಂಗ ಕ್ರಮಗಳು, ಪರೀಕ್ಷಾ ಪದ್ಧತಿ ಹಾಗೂ ವಿಶ್ವವಿದ್ಯಾನಿಲಯದ ಪದವಿಗಳು ಮತ್ತು ಡಿಪ್ಲೋಮಾಗಳಿಗಾಗಿ ವಿನಿಯಮಗಳನ್ನು ರಚಿಸಬಹುದು.

(4) ವಿದ್ಯಾವಿಷಯಕ ಪರಿಷತ್ತು ಅಧ್ಯಯನ ಮಂಡಲಿಯಿಂದ ಸ್ವೀಕರಿಸಿದ ವಿನಿಯಮದ ಕರಡನ್ನು ಬದಲಾಯಿಸತಕ್ಕದ್ದಲ್ಲ ಆದರೆ ಕರಡನ್ನು ತಿರಸ್ಕರಿಸಬಹುದು ಅಥವಾ ವಿದ್ಯಾವಿಷಯಕ ಪರಿಷತ್ತಿನ ಸಲಹೆಗಳೊಡನೆ ಪುನಃ ಪರಿಶೀಲನೆಗಾಗಿ ಅಧ್ಯಯನ ಮಂಡಲಿಗೆ ಹಿಂದಿರುಗಿಸಬಹುದು.

(5) ಮಂಡಲಿಯು ಈ ಪ್ರಕರಣದ ಅಡಿಯಲ್ಲಿ ರಚಿಸಿದ ಯಾವುದೇ ವಿನಿಯಮಕ್ಕೆ ತಾನು ನಿರ್ದಿಷ್ಟಪಡಿಸಬಹುದಾದಂಥ ರೀತಿಯಲ್ಲಿ ತಿದ್ದುಪಡಿ ಮಾಡಲು ಅಥವಾ ವಿಶ್ವವಿದ್ಯಾನಿಲಯದ ಪ್ರಾಧಿಕಾರವು (1)ನೇ ಉಪಪ್ರಕರಣದ ಅಡಿಯಲ್ಲಿ ರಚಿಸಿದ ಯಾವುದೇ ವಿನಿಯಮವನ್ನು ರದ್ದುಗೊಳಿಸಲು ನಿರ್ದೇಶಿಸಬಹುದು.

## ಅಧ್ಯಾಯ - VIII

### ಸಂಕೀರ್ಣ

**55. ಪದವನ್ನು ತೆರವು ಮಾಡುವುದು.-** (1) ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರ ಅಥವಾ ನಿಕಾಯದ ಪದನಿಮಿತ್ತ ಸದಸ್ಯನಲ್ಲದ ಯಾವೊಬ್ಬ ಸದಸ್ಯನು ಕುಲಪತಿಯವರಿಗೆ ಪತ್ರ ಬರೆಯುವ ಮೂಲಕ ತನ್ನ ಹುದ್ದೆಗೆ ರಾಜೀನಾಮೆ ನೀಡಬಹುದು. ಅಂಥ ರಾಜೀನಾಮೆಯು ಅದನ್ನು ಅಂಗೀಕರಿಸಿದ ಮತ್ತು ಸಂಬಂಧಿಸಿದವರಿಗೆ ತಿಳಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

(2) ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರ ಅಥವಾ ನಿಕಾಯದ ಯಾವೊಬ್ಬ ಸದಸ್ಯನು ನೈತಿಕ ಅಧಃಪತನವನ್ನು ಒಳಗೊಂಡ ಅಪರಾಧಕ್ಕಾಗಿ ನ್ಯಾಯಾಲಯದಿಂದ ಅಪರಾಧ ನಿರ್ಣಿತನಾದರೆ ಆತನು ಸದಸ್ಯನಾಗಿರುವುದು ನಿಂತುಹೋಗತಕ್ಕದ್ದು.

**56. ಆಕಸ್ಮಿಕ ಖಾಲಿ ಸ್ಥಾನಗಳನ್ನು ಭರ್ತಿ ಮಾಡುವುದು.-** ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದಲ್ಲಿ ಅಥವಾ ನಿಕಾಯದಲ್ಲಿ (ಪದನಿಮಿತ್ತ ಸದಸ್ಯನಲ್ಲದ) ಒಬ್ಬ ಸದಸ್ಯನ ಹುದ್ದೆಯು ಅಂಥ ಸದಸ್ಯನ ಪದಾವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಖಾಲಿಯಾದರೆ ಆ ಹುದ್ದೆಯನ್ನು, ಹುದ್ದೆಯು ಖಾಲಿಯಾದ ತರುವಾಯ, ಅನುಕೂಲವಾದಷ್ಟು ಬೇಗನೆ ಭರ್ತಿ ಮಾಡತಕ್ಕದ್ದು.

**57. ಕಾರ್ಯಗಳ ಹಾಗೂ ವ್ಯವಹರಣೆಗಳ ಸಿಂಧುತ್ವದ ಉಳಿಸುವಿಕೆಗಳು.-** ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಕಾರ್ಯ ಅಥವಾ ಕೈಗೊಂಡ ವ್ಯವಹರಣೆಗಳನ್ನು ಕೇವಲ ಈ ಮುಂದಿನ ಕಾರಣಗಳಿಗಾಗಿ ಪ್ರಶ್ನಿಸತಕ್ಕದ್ದಲ್ಲ, ಎಂದರೆ:-

(ಎ) ಯಾವುದೇ ಪ್ರಾಧಿಕಾರದ ರಚನೆಯಲ್ಲಿ ಯಾವುದೇ ಖಾಲಿ ಸ್ಥಾನ ಅಥವಾ ದೋಷ, ಅಥವಾ

(ಬಿ) ಪ್ರಕರಣದ ಗುಣಾಂಶಗಳಿಗೆ ಬಾಧೆ ಉಂಟುಮಾಡದ ಅಂಥ ಕಾರ್ಯ ಅಥವಾ ವ್ಯವಹರಣೆಗಳಲ್ಲಿ ಯಾವುದೇ ದೋಷ ಅಥವಾ ಕ್ರಮಬಾಹಿರತೆ.

**58. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ರಚನೆ ಕುರಿತು ವಿವಾದಗಳು.-** ಈ ಅಧಿನಿಯಮದ ಅಥವಾ ಯಾವುದೇ ಪರಿನಿಯಮ ಅಥವಾ ವಿನಿಯಮದ ಯಾವುದೇ ಉಪಬಂಧದ ವ್ಯಾಖ್ಯಾನದ ಸಂಬಂಧದಲ್ಲಿ ಅಥವಾ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದ ಸದಸ್ಯನಾಗಿ ಒಬ್ಬ ವ್ಯಕ್ತಿಯನ್ನು ಯುಕ್ತವಾಗಿ ನೇಮಕ ಮಾಡಲಾಗಿದೆಯೇ ಅಥವಾ ಆತ ಅದಕ್ಕೆ ಹಕ್ಕುದಾರನಾಗಿದ್ದಾನೆಯೇ ಎಂಬ ಸಂಬಂಧದಲ್ಲಿ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ಕುಲಾಧಿಪತಿಯವರ ಪರಿಗಣನೆಗೆ ಕಳುಹಿಸಬಹುದು ಹಾಗೂ ಮಂಡಲಿಯ ಆರು ಜನ ಸದಸ್ಯರು ಹಾಗೆ ಅಗತ್ಯಪಡಿಸಿದರೆ ಹಾಗೆ ಕಳುಹಿಸತಕ್ಕದ್ದು. ಕುಲಾಧಿಪತಿಯು, ತಾನು ಅವಶ್ಯವೆಂದು ಭಾವಿಸಬಹುದಾದಂಥ ಸಲಹೆಗಳನ್ನು ಪಡೆದ ತರುವಾಯ ಪ್ರಶ್ನೆಯನ್ನು ತೀರ್ಮಾನಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**59. ಅಧಿಕಾರಗಳ ಪ್ರತ್ಯಾಯೋಜನೆ.-** ಮಂಡಲಿಯು, ಈ ಅಧಿನಿಯಮದ ಮೂಲಕ ಅಥವಾ ಪರಿನಿಯಮಗಳ ಮೂಲಕ ತನಗೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಪರಿನಿಯಮಗಳ ಮೂಲಕ ವಿಶ್ವವಿದ್ಯಾನಿಲಯದ ಯಾವುದೇ ಅಧಿಕಾರಿ ಅಥವಾ ಪ್ರಾಧಿಕಾರಕ್ಕೆ ನಿಯಮಿಸಬಹುದಾದಂಥ ನಿರ್ಬಂಧಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಚಲಾಯಿಸಲು ಪ್ರತ್ಯಾಯೋಜಿಸಬಹುದು.

**60. ವಿಶ್ವವಿದ್ಯಾನಿಲಯದ ಪುನರವಲೋಕನಾ ಆಯೋಗದ ನೇಮಕ.-** (1) ಕುಲಾಧಿಪತಿಯು, ಐದು ವರ್ಷಗಳಿಗೊಮ್ಮೆ ವಿಶ್ವವಿದ್ಯಾನಿಲಯದ ಕಾರ್ಯನಿರ್ವಹಣೆಯನ್ನು ಪುನರವಲೋಕಿಸುವುದಕ್ಕಾಗಿ ಮತ್ತು ಶಿಫಾರಸ್ಸುಗಳನ್ನು ಮಾಡುವುದಕ್ಕಾಗಿ ಒಂದು ಆಯೋಗವನ್ನು ರಚಿಸತಕ್ಕದ್ದು.

(2) ಆಯೋಗವು, ಮೂವರಿಗೆ ಕಡಿಮೆಯಿಲ್ಲದಂತೆ ಕುಲಾಧಿಪತಿಯವರು ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿ ನೇಮಿಸಿದ ಪಶುವೈದ್ಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನ ಕ್ಷೇತ್ರದಲ್ಲಿ ಪ್ರಸಿದ್ಧ ಶಿಕ್ಷಣ ತಜ್ಞರನ್ನು ಒಳಗೊಂಡಿರತಕ್ಕದ್ದು. ಅವರಲ್ಲಿ ಒಬ್ಬರು, ಅಧ್ಯಕ್ಷರಾಗಿರತಕ್ಕದ್ದು.

(3) ಸದಸ್ಯರ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳು, ಕುಲಾಧಿಪತಿಯವರು ನಿರ್ಧರಿಸಬಹುದಾದಂಥವುಗಳು ಆಗಿರತಕ್ಕದ್ದು.

(4) ಆಯೋಗವು, ತಾನು ಸೂಕ್ತವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ ಕುಲಾಧಿಪತಿಯವರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ತನ್ನ ಶಿಫಾರಸ್ಸುಗಳನ್ನು ಮಾಡತಕ್ಕದ್ದು.

(5) ಕುಲಾಧಿಪತಿಯವರು, ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿ, ಶಿಫಾರಸ್ಸಿನ ಮೇಲೆ ತಾನು ಸೂಕ್ತವೆಂದು ಭಾವಿಸುವಂಥ ಕ್ರಮವನ್ನು ಕೈಗೊಳ್ಳಬಹುದು.

(6) ರಾಜ್ಯ ಸರ್ಕಾರವು, ಕೈಗೊಂಡ ಕ್ರಮವನ್ನು ವಿವರಿಸುವ ಜ್ಞಾಪನ ಪತ್ರದೊಡನೆ ಶಿಫಾರಸ್ಸುಗಳ ಒಂದು ಪ್ರತಿಯನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು.

**61. ವಿಶ್ವವಿದ್ಯಾನಿಲಯದ ಕೆಲವು ಅಧಿಕಾರಿಗಳ ತಾತ್ಕಾಲಿಕ ನೇಮಕಾತಿಗೆ ಉಪಬಂಧ.-** ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳನ್ನು ಯುಕ್ತವಾಗಿ ರಚಿಸುವಂಥ ಅವಧಿಯವರೆಗೆ ವಿಶ್ವವಿದ್ಯಾನಿಲಯದ ಯಾವೊಬ್ಬ ಅಧಿಕಾರಿಯನ್ನು ಕುಲಪತಿಯವರು ತಾತ್ಕಾಲಿಕವಾಗಿ ನೇಮಿಸಬಹುದು. ಅಂಥ ನೇಮಕಾತಿಯು ಮತ್ತು ಅದರ ನಿಬಂಧನೆಗಳು ಹಾಗೂ ಷರತ್ತುಗಳು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಹೊಂದಿರತಕ್ಕದ್ದು.

**62. ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ತಾತ್ಕಾಲಿಕ ಉಪಬಂಧಗಳು.-** ಈ ಅಧಿನಿಯಮದಲ್ಲಿ ಏನೇ ಇದ್ದರೂ, ಕುಲಪತಿಯು ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ಈ ಅಧಿನಿಯಮದ ಪ್ರಾರಂಭದಿಂದ ಒಂದು ವರ್ಷದ ಅವಧಿಗಾಗಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ, ವಿಶ್ವವಿದ್ಯಾನಿಲಯದ ಎಲ್ಲಾ ಅಥವಾ ಯಾವುದೇ ಪ್ರಕಾರ್ಯಗಳನ್ನು ನಿರ್ವಹಿಸಬಹುದು ಮತ್ತು ಆ ಉದ್ದೇಶಕ್ಕಾಗಿ ಈ ಅಧಿನಿಯಮದ ಮೂಲಕ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರವು ಅಥವಾ ನಿಕಾಯವು ಚಲಾಯಿಸಬೇಕಾದ ಅಥವಾ ನಿರ್ವಹಿಸಬೇಕಾದ ಯಾವುವೇ ಅಧಿಕಾರಗಳನ್ನು ಅಥವಾ ಕರ್ತವ್ಯಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿದಂತೆ ಅಂಥ ಪ್ರಾಧಿಕಾರವು ಅಥವಾ ನಿಕಾಯವು ಅಸ್ತಿತ್ವಕ್ಕೆ ಬರುವ ವರೆಗೆ ಚಲಾಯಿಸಬಹುದು ಅಥವಾ ನೆರವೇರಿಸಬಹುದು.

**63. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ:-** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಿದ ಪರಿನಿಯಮಗಳು ಅಥವಾ ವಿನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾನಿಲಯದ ಅಥವಾ ಅದರ ಪ್ರಾಧಿಕಾರಗಳ, ನಿಕಾಯಗಳ ಅಥವಾ ಅಧಿಕಾರಗಳ ವಿರುದ್ಧ ಯಾವುದೇ ದಾವೆ ಅಥವಾ ಇತರ ವ್ಯವಹರಣೆ ನಡೆಸಲು ಅವಕಾಶವಿರತಕ್ಕದ್ದಲ್ಲ ಮತ್ತು ಅವರಿಂದ ಯಾವುದೇ ನಷ್ಟಪರಿಹಾರಗಳನ್ನು ಕ್ಲೇಮು ಮಾಡತಕ್ಕದ್ದಲ್ಲ.

**64. ಪರಿನಿಯಮಗಳ ಮತ್ತು ವಿನಿಯಮಗಳ ಮುಂದುವರಿಕೆ:-** (1) ಈ ಅಧಿನಿಯಮದ ಸೂಕ್ತ ಉಪಬಂಧಗಳ ಅಡಿಯಲ್ಲಿ ಪರಿನಿಯಮಗಳು ಮತ್ತು ವಿನಿಯಮಗಳನ್ನು ರಚಿಸುವವರೆಗೆ, ಕರ್ನಾಟಕ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳ ಅಧಿನಿಯಮ, 1963ರ ಉಪಬಂಧಗಳ ಅಡಿಯಲ್ಲಿ ರಚಿಸಿದ ಹಾಗೂ ಈ ಅಧಿನಿಯಮದ ಪ್ರಾರಂಭದ ನಿಕಟಪೂರ್ವದಲ್ಲಿ ಜಾರಿಯಲ್ಲಿರುವ ಪರಿನಿಯಮಗಳು, ಮತ್ತು ವಿನಿಯಮಗಳನ್ನು, ಅವು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವಷ್ಟರ ಮಟ್ಟಿಗೆ, ಮತ್ತು ಕುಲಾಧಿಪತಿಯವರ ಅನುಮೋದನೆ ಪಡೆದುಕೊಂಡು ಕುಲಪತಿಯು ಅದರಲ್ಲಿ ಮಾಡಬಹುದಾದಂಥ ಅಳವಡಿಕೆಗಳು ಅಥವಾ ಮಾರ್ಪಾಡುಗಳಿಗೆ ಒಳಪಟ್ಟು, ಈ ಅಧಿನಿಯಮದ ಸೂಕ್ತ ಉಪಬಂಧಗಳ ಅಡಿಯಲ್ಲಿ ವಿಶ್ವವಿದ್ಯಾನಿಲಯವು ರಚಿಸಿದ ಪರಿನಿಯಮಗಳು ಮತ್ತು ವಿನಿಯಮಗಳೆಂದು ಭಾವಿಸತಕ್ಕದ್ದು.

**65. ತೊಂದರೆಗಳ ನಿವಾರಣೆಗೆ ಅಧಿಕಾರ:-** (1) ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದ ಮೊದಲ ರಚನೆಯ ಅಥವಾ ಪುನಾರಚನೆಯ ಸಂಬಂಧದಲ್ಲಿ ಅಥವಾ ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಹಾಗೂ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದಂಥ ಉಪಬಂಧವನ್ನು ರಚಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಅಂಥ ಯಾವುದೇ ಅಧಿಸೂಚನೆಯನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಅಧಿಸೂಚನೆಯನ್ನು, ಅದನ್ನು ಹೊರಡಿಸಿದ ತರುವಾಯ, ಆದಷ್ಟು ಬೇಗನೇ ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ ಅದು ಅಧಿವೇಶನದಲ್ಲಿರುವಾಗ ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ

ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಸದರಿ ಅವಧಿಯು ಮುಕ್ತಾಯವಾಗುವುದಕ್ಕೆ ಮುಂಚೆ ರಾಜ್ಯ ವಿಧಾನ ಮಂಡಲದ ಯಾವುದೊಂದು ಸದನವು ಅಧಿಸೂಚನೆಯಲ್ಲಿ ಯಾವುದೇ ಮಾರ್ಪಾಡು ಮಾಡಿದರೆ ಅಥವಾ ಯಾವುದೇ ಅಧಿಸೂಚನೆಯು ಪರಿಣಾಮಕಾರಿಯಾಗತಕ್ಕದ್ದಲ್ಲವೆಂದು ನಿರ್ದೇಶಿಸಿದರೆ ಹಾಗೂ ಆ ಮಾರ್ಪಾಡು ಅಥವಾ ನಿರ್ದೇಶನವನ್ನು ಇನ್ನೊಂದು ಸದನವು ಒಪ್ಪಿದರೆ, ತದನಂತರ ಅಂಥ ಅಧಿಸೂಚನೆಯು, ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಈ ಅಧಿಸೂಚನೆಯ ಅಡಿಯಲ್ಲಿ ಈ ಮುಂಚೆ ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧೆ ಉಂಟುಮಾಡತಕ್ಕದ್ದಲ್ಲ.

**ಅನುಸೂಚಿ-1**

1. ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು ಇದಕ್ಕೆ ಸಂಯೋಜನೆಗೊಂಡ ಪಶುವೈದ್ಯಕೀಯ ಕಾಲೇಜು, ಬೆಂಗಳೂರು.
2. ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು ಇದಕ್ಕೆ ಸಂಯೋಜನೆಗೊಂಡ ಹೈನುಗಾರಿಕೆ ವಿಜ್ಞಾನ ಕಾಲೇಜು, ಬೆಂಗಳೂರು.
3. ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ ಬೆಂಗಳೂರು ಇದು ನಿರ್ವಹಿಸುತ್ತಿರುವ ಹೆಬ್ಬಾಳದ ಪಶುವೈದ್ಯಕೀಯ ಕಾಲೇಜು ಆಸ್ಪತ್ರೆ.
4. ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಧಾರವಾಡ ಇದಕ್ಕೆ ಸಂಯೋಜನೆಗೊಂಡ ಪಶುವೈದ್ಯಕೀಯ ಕಾಲೇಜು, ಬೀದರ್.
5. ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು ಇದಕ್ಕೆ ಸಂಯೋಜನೆಗೊಂಡ ಮೀನುಗಾರಿಕೆ ಕಾಲೇಜು, ಮಂಗಳೂರು.
6. ಜಡ್‌ಎಆರ್‌ಎಸ್, ಕೊನ್ನೆಹಳ್ಳಿ, ತಿಪಟೂರು.
7. ಎಆರ್‌ಎಸ್, ನಾಗಮಂಗಲ.
8. ಗ್ರಾಮೀಣ ಪಶುವೈದ್ಯಕೀಯ ಆಸ್ಪತ್ರೆ, ಯಲಹಂಕ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು.
9. ಕರ್ನಾಟಕ ಸರ್ಕಾರದ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯ ಹೆಸರುಘಟ್ಟದ ಜಾನುವಾರು ಫಾರ್ಮ್.
10. ಮೀನುಗಾರಿಕೆ ಸಂಶೋಧನಾ ಕೇಂದ್ರ, ಹೆಸರುಘಟ್ಟ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು.
11. ಮುಖ್ಯ ಸಂಶೋಧನಾ ಕೇಂದ್ರ, ಹೆಬ್ಬಾಳ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೆಂಗಳೂರು.
12. ದೇವನಿ ಜಾನುವಾರು ತಳಿ ಅಭಿವೃದ್ಧಿ ಕೇಂದ್ರ, ಹಳ್ಳಿಖೇಡ, ಬೀದರ್.
13. ಕಿಲ್ಲಾರ ತಳಿ ಅಭಿವೃದ್ಧಿ ಕೇಂದ್ರ, ಕೃಷಿ ಸಂಶೋಧನಾ ಕೇಂದ್ರ, ಅರಭಾವಿ.
14. ಕರ್ನಾಟಕ ಸರ್ಕಾರದ ಪಶು ಸಂಗೋಪನೆ ಮತ್ತು ಪಶುವೈದ್ಯ ಸೇವೆಗಳ ಇಲಾಖೆಯ ಜಿಲ್ಲಾ ಪಶುವೈದ್ಯ ಆಸ್ಪತ್ರೆ, ಬೀದರ್.
15. ಕೃಷಿ ಸಂಶೋಧನಾ ಕೇಂದ್ರ, ಕಂಕನಾಡಿ, ಮಂಗಳೂರು.
16. ಕುರಿ ತಳಿ ಫಾರ್ಮ್, ಬಂದೂರು, ಮಳವಳ್ಳಿ.
17. ಧಾರವಾಡ ಕೃಷಿ ವಿಶ್ವವಿದ್ಯಾನಿಲಯದ ಮೀನುಗಾರಿಕೆ ಸಂಶೋಧನಾ ಕೇಂದ್ರ, ಅಂಕೋಲ.
18. ಜಾನುವಾರು ತಳಿ ಮತ್ತು ತರಬೇತಿ ಕೇಂದ್ರ ಕುರಿಕುಪ್ಪೆ, ಬಳ್ಳಾರಿ.
19. ಮೀನು ಮರಿ ಉತ್ಪಾದನಾ ಫಾರ್ಮ್, ಮುನಿರಾಬಾದ್, ಕೊಪ್ಪಳ ಜಿಲ್ಲೆ.
20. ಮೀನು ಮರಿ ಉತ್ಪಾದನಾ ಫಾರ್ಮ್, ಶಿವಪುರ, ಕೊಪ್ಪಳ ಜಿಲ್ಲೆ.
21. ಪಶು ಆರೋಗ್ಯ ಮತ್ತು ಪಶುವೈದ್ಯ ಜೀವಶಾಸ್ತ್ರಗಳ ಸಂಸ್ಥೆ, ಬೆಂಗಳೂರು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಮ.ರಾ. ಹೆಗಡೆ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.